₹ 4 ಪುಟ: 4 ಸಂಪುಟ: 4 ಸಂಚಿಕೆ 54 newsbelagavi@gmail.com 9900332089 9900332089



# ಬೆಳಗಾವಿ ವರದಿ

ಪ್ರಧಾನ ಸಂಪಾದಕರು: ಸತೀಶ್.ಬಿ.ಜಿ
BELAGAVI VARADI KANNADA DAILY
ಕನ್ನಡ ದಿನಪತ್ರಿಕೆ
Volume : 4 Issue: 54 Wednesday, 12, APRIL, 2023 RNI: KARKAN/2020/79084 Regn,No:G-2/PMG/KA/NK/BM/139/2021-23 24

# ಕೊನೆಗೂ ಬಿಜೆಪಿ ಅಭ್ಯರ್ಥಿಗಳ ಪಟ್ಟಿ ರಿಲೀಸ್



**52 ಹೊಸ ಮುಖಗಳಿಗೆ ಟಿಕೆಟ್**
**8 ಮಹಿಳೆಯರಿಗೆ ಟಿಕೆಟ್**
**5 ವಕೀಲರಿಗೆ ಟಿಕೆಟ್**

ನವದೆಹಲಿ: ಕೊನೆಗೂ ಬಿಜೆಪಿ ಕರ್ನಾಟಕ ಚುನಾವಣೆಗೆ ತನ್ನ ಮೊದಲ ಪಟ್ಟಿಯನ್ನು ಘೋಷಿಸಿದೆ.

ದೆಹಲಿಯ ಬಿಜೆಪಿ ಕೇಂದ್ರ ಕಚೇರಿಯಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಬಿಜೆಪಿ ನಾಯಕರಾದ ಧರ್ಮೇಂದ್ರ ಪ್ರಧಾನ್ ಹಾಗೂ ಅರುಣ್ ಸಿಂಗ್ ಅಭ್ಯರ್ಥಿಗಳ ಪಟ್ಟಿ ಪ್ರಕಟಿಸಿದರು.

ಶಿಗ್ಗಾಂವಿ– ಬಸವರಾಜ್ ಬೊಮ್ಮಾಯಿ
ಬೆಳಗಾವಿ ಉತ್ತರ– ರವಿ ಪಾಟೀಲ್
ಬೆಳಗಾವಿ ದಕ್ಷಿಣ– ಅಭಯ ಪಾಟೀಲ್.
ಬೆಳಗಾವಿ ಗ್ರಾಮಿಣ– ನಾಗೇಶ್ ಮನ್ನೋಳ್ಕರ್
ನಿಪ್ಪಾಣಿ– ಶಶಿಕಲಾ ಜೊಲ್ಲೆ
ಯಮಕನಮರಡಿ– ಬಸವರಾಜ ಹುಂದ್ರೆ
ಅರಭಾವಿ– ಬಾಲಚಂದ್ರ ಜಾರಕಿಹೊಳಿ
ಕಾಗವಾಡ– ಶ್ರೀಮಂತ ಪಾಟೀಲ್
ಚಿಕ್ಕೋಡಿ– ರಮೇಶ್ ಕತ್ತಿ
ಕುಡಚಿ– ಪಿ ರಾಜೀವ್
ರಾಯಭಾಗ– ದುರ್ಯೋದನ ಇಹೊಲೆ
ಖಾನಾಪುರ– ವಿಠಲ್ ಹಲಗೇಕರ್
ಅಥಣಿ– ಮಹೇಶ್ ಕುಮಟಳ್ಳಿ
ಹುಕ್ಕೇರಿ– ನಿಖಿಲ್ ಕತ್ತಿ
ಕಿತ್ತೂರ್– ಮಹಂತೇಶ್ ದೊಡ್ಡಗೌಡರ್
ಬೈಲಹೊಂಗಲ– ಜಗದೀಶ್ ಚನ್ನಪ್ಪ
ಗೋಕಾಕ್– ರಮೇಶ್ ಜಾರಕಿಹೊಳಿ
ಸವಸತ್ತಿ– ರತ್ನಾ ಮಾಮನಿ,
ರಾಮದುರ್ಗ– ಮಹಾದೇವಪ್ಪ ಯಾದವಾಡ
ಬೀಳಗಿ– ಮುರುಗೇಶ್ ನಿರಾಣಿ
ಬಾಗಲಕೋಟೆ– ಚರಂತಿಮಠ
ದೇವದುರ್ಗ– ಶಿವನಗೌಡ ನಾಯಕ್
ಯಲಬುರ್ಗಾ– ಹಾಲಪ್ಪ ಆಚಾರ್
ಶಿರಹಟ್ಟಿ– ಚಂದ್ರು ಲಮಾಣಿ
ಶಿರಸಿ– ಕಾಗೇರಿ
ಸುರಪುರ– ರಾಜೂಗೌಡ
ಬಳ್ಳಾರಿ– ಶ್ರೀರಾಮುಲು
ಬಳ್ಳಾರಿ ನಗರ– ಗಾಲಿ ಸೋಮಶೇಖರ ರೆಡ್ಡಿ
ಚಿಕ್ಕಬಳ್ಳಾಪುರ– ಡಾ. ಕೆ.ಸುಧಾಕರ್
ಬಸವಕಲ್ಯಾಣ– ಶರಣು ಸಲಗಾರ್
ಕೋಲಾರ– ವರ್ತೂರು ಪ್ರಕಾಶ್
ಯಲಹಂಕ– ಎಸ್.ಆರ್ವಿಶ್ವನಾಥ್
ಕುಣಿಗಲ್ ಡಿ ಕೃಷ್ಣಕುಮಾರ್
ತುಮಕೂರು ನಗರ– ಜ್ಯೋತಿ ಗಣೇಶ್
ತುಮಕೂರು ಗ್ರಾಮಾಂತರ– ಸುರೇಶ್ ಗೌಡ
ಕೊರಟಗೆರೆ–ಅನಿಲ್ ಕುಮಾರ್
ಶಿರಾ– ರಾಜೇಶ್ ಗೌಡ
ಯಶವಂತಪುರ– ಎಸ್‌ಟಿ ಸೋಮಶೇಖರ್
ರಾಜರಾಜೇಶ್ವರಿ ನಗರ– ಮುನಿರತ್ನ
ಮಹಾಲಕ್ಷ್ಮಿ ಲೇಔಟ್– ಗೋಪಾಲಯ್ಯ
ಮಲ್ಲೇಶ್ವರಂ– ಡಾ.ಸಿಎನ್.ಅಶ್ವತ್ಥನಾರಾಯಣ
ರಾಜಾಜಿ ನಗರ– ಎಸ್.ಸುರೇಶ್ ಕುಮಾರ್
ಚಾಮರಾಜಪೇಟೆ– ಭಾಸ್ಕರ ರಾವ್
ಬಸವನಗುಡಿ– ರವಿಸುಬ್ರಹ್ಮಣ್ಯ
ಜಯನಗರ– ಸಿ.ಕೆ.ರಾಮಮೂರ್ತಿ
ಬೊಮ್ಮನಹಳ್ಳಿ– ಸತೀಶ್ ರೆಡ್ಡಿ
ದೇವನಹಳ್ಳಿ– ಪಿಳ್ಳ ಮುನಿಶಾಮಪ್ಪ
ಮಾಗಡಿ– ಪ್ರಸಾದ್ ಗೌಡ
ಕನಕಪುರ– ಆರ್.ಅಶೋಕ್
ಉಡುಪಿ– ಯಶ್ ಪಾಲ್ ಸುವರ್ಣ
ಕುಂದಾಪುರ– ಕಿರಣ್ ಕುಮಾರ್ ಕೊಡ್ಗಿ
ಕಾರ್ಕಳ– ಸುನಿಲ್ ಕುಮಾರ್
ಕಾಪು– ಗುರ್ಮೆ ಸುರೇಶ್ ಶೆಟ್ಟಿ
ಹಾಸನ– ಜೆ.ಪ್ರೀತಂ ಗೌಡ
ಬೆಳ್ತಂಗಡಿ– ಹರೀಶ್ ಪೂಂಜಾ
ಪುತ್ತೂರು– ಆಶಾ ತಿಮ್ಮಪ್ಪ
ಸುಳ್ಯ– ಭಾಗೀರಥಿ
ಮಡಿಕೇರಿ– ಅಪ್ಪಚ್ಚು ರಂಜನ್
ವಿರಾಜಪೇಟೆ– ಬೋಪಯ್ಯ
ನಂಜನಗೂಡು– ಹರ್ಷವರ್ಧನ್
ವರುಣಾ– ವಿ.ಸೋಮಣ್ಣ
ಹನೂರು– ಪ್ರೀತಂ ನಾಗಪ್ಪ
ವಿ. ಸೋಮಣ್ಣಗೆ ಎರಡು ಕಡೆ ಟಿಕೆಟ್
ವರುಣಾ ಹಾಗೂ ಚಾಮರಾಜನಗರದಲ್ಲಿ ಟಿಕೆಟ್

## 189 ಕಮಲ ಕಲಿಗಳಿಗೆ ಟಿಕೆಟ್

# ಕೆ.ಎಸ್. ಈಶ್ವರಪ್ಪ ರಾಜಕೀಯ ನಿವೃತ್ತಿ ಘೋಷಣೆ

## ಬಿಜೆಪಿ ಅಂಗಳದಲ್ಲಿ ರೋಚಕ ವಿದ್ಯಮಾನ

**ಬೆಂಗಳೂರು:** ರಾಜ್ಯ ಬಿಜೆಪಿ ಹಿರಿಯ ಮುಖಂಡ ಮಾಜಿ ಉಪ ಮುಖ್ಯಮಂತ್ರಿ ಕೆ.ಎಸ್. ಈಶ್ವರಪ್ಪ ರಾಜಕೀಯ ನಿವೃತ್ತಿ ಘೋಷಣೆ ಮಾಡಿದ್ದಾರೆ.

ನಾಲ್ಕು ದಶಕಗಳಿಂದ ಬಿಜೆಪಿಯಲ್ಲೇ ಗುರುತಿಸಿ ಕೊಂಡಿದ್ದ ಅವರ ಈ ನಿರ್ಧಾರ ಅವರ ಅಭಿಮಾನಿಗಳಿಗೆ ಶಾಕ್ ನೀಡಿದೆ. ಆರಂಭದಿಂದಲೂ ಜತೆಯಲ್ಲೇ ಇರುವ ಹಾಗೂ ಬಹುತೇಕ ಎಲ್ಲ ಬಿಜೆಪಿ ಸರ್ಕಾರಗಳಲ್ಲೂ ಸಚಿವರಾಗಿದ್ದ ಕೆ.ಎಸ್. ಈಶ್ವರಪ್ಪ ಅವರ ಈ ನಿರ್ಧಾರ ಅಚ್ಚರಿ ಮೂಡಿಸಿದೆ.

ನಾನು ಸ್ವಯಿಚ್ಛೆಯಿಂದ ಚುನಾವಣಾ ರಾಜ–ಕಾರಣದಿಂದ ನಿವೃತ್ತನಾಗಲು ಬಯಸಿದ್ದೇನೆ. ಹಾಗಾಗಿ ಈ ಬಾರಿಯ ವಿಧಾನಸಭಾ ಚುನಾವಣೆಯಲ್ಲಿ ನನ್ನ ಹೆಸರನ್ನು ಯಾವುದೇ ಕ್ಷೇತ್ರಕ್ಕೆ ಪರಿಗಣಿಸಬಾರದಾಗಿ ವಿನಂತಿ' ಎಂದು ರಾಷ್ಟ್ರೀಯ ಅಧ್ಯಕ್ಷ ಜೆ.ಪಿ. ನಡ್ಡಾ ಅವರಿಗೆ ಬರೆದಿದ್ದಾರೆ.

ಕಳೆದ 40 ವರ್ಷದ ರಾಜಕೀಯ ಜೀವನದಲ್ಲಿ ಬೂತ್ ಮಟ್ಟದಿಂದ ಉಪಮುಖ್ಯಮಂತ್ರಿ ಹುದ್ದೆಯವರೆಗೆ ಗೌರವದ ಸ್ಥಾನಮಾನಗಳನ್ನು ನೀಡಿದ ಪಕ್ಷದ ಹಿರಿಯರಿಗೆ ನನ್ನ ಅನಂತ ಧನ್ಯವಾದಗಳು' ಎಂದು ಈ ಪತ್ರದಲ್ಲಿ ತಿಳಿಸಿದ್ದಾರೆ.

ಗುತ್ತಿಗೆದಾರ ಸಂತೋಷ್ ಪಾಟೀಲ್ ಆತ್ಮಹತ್ಯೆ ಪ್ರಕರಣದಲ್ಲಿ ಇವರು ರಾಜೀನಾಮೆ ನೀಡಿದ್ದರು. ಪ್ರಕರಣ ಇತ್ಯರ್ಥ ಗೊಂಡ ನಂತರ ಸಂಪುಟ ಸೇರ್ಪಡೆಗೆ ತೀವ್ರ ಪ್ರಯತ್ನ ನಡೆಸಿದ್ದರು.

ಆದರೆ ಸಂಪುಟ ಪುನಾರಚನೆ ಹಾಗೂ ವಿಸ್ತರಣೆಗೆ ಕೇಂದ್ರದ ವರಿಷ್ಠರು ಒಪ್ಪಿಗೆ ನೀಡದ ಪರಿಣಾಮ ಈಶ್ವರಪ್ಪ ಸಚಿವರಾಗಲು ಸಾಧ್ಯವಾಗಲೇ ಇಲ್ಲ. ಇದೀಗ ಶಿವಮೊಗ್ಗ ಕ್ಷೇತ್ರದಿಂದ ಈಶ್ವರಪ್ಪ ಬದಲಿಗೆ ತಮಗೆ ಟಿಕೆಟ್ ನೀಡಬೇಕು ಎಂದು ಆಯನೂರು



ಮಂಜುನಾಥ್ ಪ್ರಯತ್ನಿಸುತ್ತಿದ್ದಾರೆ. ಈಗಾಗಲೆ ವಿಧಾನ ಪರಿಷತ್ ಸ್ಥಾನಕ್ಕೆ ರಾಜೀನಾಮೆಯನ್ನೂ ನೀಡಿದ್ದಾರೆ. ತಮಗೆ ನೀಡದಿದ್ದರೆ ತಮ್ಮ ಪುತ್ರ ಕೆ.ಈ. ಕಾಂತೇಶ್ ಅವರಿಗೆ ಟಿಕೆಟ್ ನೀಡುವಂತೆ ಈಶ್ವರಪ್ಪ ದುಂಬಾಲು ಬಿದ್ದಿದ್ದರು.

ಈ ಕುರಿತು ಶಿವಮೊಗ್ಗದ ತಮ್ಮ ನಿವಾಸದಲ್ಲಿ ಮಾತನಾಡಿದ ಅವರು, ಕರ್ನಾಟಕದಲ್ಲಿ ಪೂರ್ಣ ಬಹುಮತದ ಸರ್ಕಾರವನ್ನು ತರಬೇಕು ಎನ್ನುವುದು ಮುಖ್ಯ ಇದಕ್ಕಾಗಿ ಪಕ್ಷ ನೀಡುವ ಜವಾಬ್ದಾರಿಯನ್ನು ನಿಭಾಯಿಸುತ್ತೇನೆ. ಶಿವಮೊಗ್ಗ ವಿಧಾನಸಭಾ ಕ್ಷೇತ್ರಕ್ಕೆ ಅಭ್ಯರ್ಥಿಯನ್ನು ಕೇಂದ್ರ ಚುನಾವಣಾ ಸಮಿತಿ ತೀರ್ಮಾನ ಮಾಡುತ್ತದೆ ಎಂದರು.

### ನಿವೃತ್ತಿ ಬೇಡ: ಬೊಮ್ಮಾಯಿ ಮನವಿ



ನವದೆಹಲಿ: ವಯಸ್ಸಿನ ಕಾರಣಕ್ಕೆ ಬಿಜೆಪಿ ಹಿರಿಯ ನಾಯಕರುಗಳು ಕೇಂದ್ರ ನಾಯಕರ ಸೂಚನೆ ಮೇರೆಗೆ ನಿವೃತ್ತಿ ಘೋಷಣೆ ಮಾಡುತ್ತಿರುವ ಬೆನ್ನಲ್ಲೇ, ಈಶ್ವರಪ್ಪ ಅವರು ನಿವೃತ್ತಿ ಘೋಷಣೆ ಮಾಡುವುದು ಬೇಡ ಎಂದು ಮನವಿ ಮಾಡಿರುವುದಾಗಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ.

**ನಿವೃತ್ತಿ ಬೇಡ: ಬೊಮ್ಮಾಯಿ ಮನವಿ**

ನವದೆಹಲಿ: ವಯಸ್ಸಿನ ಕಾರಣಕ್ಕೆ ಬಿಜೆಪಿ ಹಿರಿಯ ನಾಯಕರುಗಳು ಕೇಂದ್ರ ನಾಯಕರ ಸೂಚನೆ ಮೇರೆಗೆ ನಿವೃತ್ತಿ ಘೋಷಣೆ ಮಾಡುತ್ತಿರುವ ಬೆನ್ನಲ್ಲೇ, ಈಶ್ವರಪ್ಪ ಅವರು ನಿವೃತ್ತಿ ಘೋಷಣೆ ಮಾಡುವುದು ಬೇಡ ಎಂದು ಮನವಿ ಮಾಡಿರುವುದಾಗಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ.

ಈ ಕುರಿತು ನವದೆಹಲಿಯಲ್ಲಿ ಮಾಧ್ಯಮಗಳ ಜತೆ ಮಾತನಾಡಿದ ಅವರು, ಚುನಾವಣಾ ರಾಜ–ಕಾರಣದಿಂದ ಹಿಂದೆ ಸರಿಯುತ್ತಿದ್ದೇನೆ ಎಂದು ಈಶ್ವರಪ್ಪ ಪತ್ರ ಬರೆದಿದ್ದಾರೆ. ಅನೇಕ ತಿಂಗಳಿಂದ ಅವರು ಖಾಸಗಿಯಾಗಿ ಹೇಳುತ್ತಲೇ ಇದ್ದರು. ನಿಮ್ಮ ಅನುಭವ ನಮಗೆ ಇರಬೇಕು ಎಂದು ಹೇಳುತ್ತಿದ್ದೆವು. ಆದರೆ ಅವರು ಇದೀಗ ಅಂತಿಮ ತೀರ್ಮಾನ ಹೇಳಿದ್ದಾರೆ ಎಂದರು. ನಮ್ಮ ಪಕ್ಷದಲ್ಲಿ ಹೊಸತನ ತರುತ್ತಿದ್ದೇವೆ. 92 ವರ್ಷದ ಶಾಮನೂರು ಶಿವಶಂಕರಪ್ಪ ಅವರಿಗೆ ಕಾಂಗ್ರೆಸ್ ಟಿಕೆಟ್.ಕೊಟ್ಟಿದೆ. ಇದೇ ಆ ಪಕ್ಷಕ್ಕೂ ನಮಗೂ ಇರುವ ವ್ಯತ್ಯಾಸ. ಗೃಹಸಚಿವರು ನವದೆಹಲಿಗೆ ಆಗಮಿಸಿದ ನಂತರ ಪಟ್ಟಿ ಬಿಡುಗಡೆ ಆಗುತ್ತದೆ. ಎರಡು ಹಂತದಲ್ಲಿ ಪಟ್ಟಿ ಬಿಡುಗಡೆ ಆಗುತ್ತದೆ ಎಂದಿದ್ದಾರೆ.




### ಭುಗಿಲೆದ್ದ ಅಭಿಮಾನಿಗಳ ಆಕ್ರೋಶ

ಬಿಜೆಪಿಯ ಹಿರಿಯ ಮುಖಂಡ, ಮಾಜಿ ಸಚಿವ. ಕೆ.ಎಸ್. ಈಶ್ವರಪ್ಪ ಅವರು ಚುನಾವಣಾ ರಾಜ–ಕೀಯದಿಂದ ನಿವೃತ್ತಿ ಪ್ರಕಟಿಸಿದ ಬೆನ್ನಲ್ಲೇ ಅವರ ಅಭಿಮಾನಿಗಳ ಆಕ್ರೋಶ ಭುಗಿಲೆದ್ದಿದೆ. ಯಾವುದೇ ಕಾರಣಕ್ಕೂ ರಾಜಕೀಯದಿಂದ ನಿವೃತ್ತಿ ಯಾಗಬಾರದು. ಚುನಾವಣೆಗೆ ಸ್ಪರ್ಧೆ ಮಾಡಬೇಕು ಎಂದು ಆಗ್ರಹಿಸಿದ್ದಾರೆ.

**ಭುಗಿಲೆದ್ದ ಅಭಿಮಾನಿಗಳ ಆಕ್ರೋಶ**

ಬಿಜೆಪಿಯ ಹಿರಿಯ ಮುಖಂಡ, ಮಾಜಿ ಸಚಿವ. ಕೆ.ಎಸ್. ಈಶ್ವರಪ್ಪ ಅವರು ಚುನಾವಣಾ ರಾಜ–ಕೀಯದಿಂದ ನಿವೃತ್ತಿ ಪ್ರಕಟಿಸಿದ ಬೆನ್ನಲ್ಲೇ ಅವರ ಅಭಿಮಾನಿಗಳ ಆಕ್ರೋಶ ಭುಗಿಲೆದ್ದಿದೆ. ಯಾವುದೇ ಕಾರಣಕ್ಕೂ ರಾಜಕೀಯದಿಂದ ನಿವೃತ್ತಿ ಯಾಗಬಾರದು. ಚುನಾವಣೆಗೆ ಸ್ಪರ್ಧೆ ಮಾಡಬೇಕು ಎಂದು ಆಗ್ರಹಿಸಿದ್ದಾರೆ.

ಸೋಮವಾರವಷ್ಟೇ ಕೇಂದ್ರ ನಾಯಕರು ತಮ್ಮನ್ನು ಚುನಾವಣೆಗೆ ಸಿದ್ಧತೆ ಮಾಡಿ ಕೊಳ್ಳುವಂತೆ ಸೂಚನೆ ನೀಡಿದೆ. ಏಪ್ರಿಲ್ 17ಕ್ಕೆ ನಾಮಪತ್ರ ಸಲ್ಲಿಸುತ್ತೇನೆ ಎಂದು ಕೆ.ಎಸ್.ಈಶ್ವರಪ್ಪ ಘೋಷಿಸಿದ್ದರು. ಇದಕ್ಕೂ ಮುನ್ನ ಈ ಬಾರಿ ಈಶ್ವರಪ್ಪ ಬದಲು ಪುತ್ರ ಕಾಂತೇಶ್ ಅವರಿಗೆ ಟಿಕೆಟ್ ಸಿಗಲಿದೆ ಎಂಬ ಸುದ್ದಿ ಹರಡಿತ್ತು.



## 3.88 ಲಕ್ಷ ಹಣ ವಶ

ಬೆಳಗಾವಿ: ಅಕ್ರಮವಾಗಿ ಸಾಗಿಸುತ್ತಿದ್ದ 3.88.500 ಹಣವನ್ನು ಎಫ್ ಎಸ್ ಟಿ ಅಧಿಕಾರಿಗಳು ಹಾಗೂ ಪೊಲೀಸರು ವಶಕ್ಕೆ ಪಡೆದಿರುವ ಘಟನೆ ಜಿಲ್ಲೆಯ ಹುಕ್ಕೇರಿ ತಾಲೂಕಿನ ಬೈರಾಪುರ ಚೆಕ್ ಪೋಸ್ಟ್ ನಲ್ಲಿ ನಡೆದಿದೆ.

ಕೊಲ್ಲಾಪುರದ ಜಮಾದಾರ ಎನ್ನುವ ವ್ಯಕ್ತಿಯು 3,88500 ನಗದು ಹಣವನ್ನು ಸಾಗಾಟ ಮಾಡುತ್ತಿದ್ದ ವೇಳೆಯಲ್ಲಿ ಬೈರಾಪೂರ ಚೆಕ್ ಪೋಸ್ಟ್ ನಲ್ಲಿ ತಪಾಸನೆ ನಡೆಸುತ್ತಿದ್ದ ಎಫ್ ಎಸ್ ಟಿ ಅಧಿಕಾರಿಗಳು ಹಾಗೂ ಪೊಲೀಸರು ಈ ವೇಳೆ ನಗದು ಹಣವನ್ನು ವಶಕ್ಕೆ ಪಡೆದುಕೊಂಡಿದ್ದಾರೆ. ಈ ಕುರಿತು ಸಂಕೇಶ್ವರ ಪೊಲೀಸ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.



## ಮುಸ್ಲಿಮರಿಗೆ 2ಬಿ ಮೀಸಲು ರದ್ದು

**ಸರಕಾರಕ್ಕೆ ಸುಪ್ರೀಂಕೋರ್ಟ್ ನೋಟಿಸ್**

ಬೆಂಗಳೂರು: ಮುಸ್ಲಿಮರಿಗೆ 2ಬಿ ಅಡಿಯಲ್ಲಿ ನೀಡಲಾಗುತ್ತಿದ್ದ ಶೇ. 4 ರಷ್ಟು ಮೀಸಲಾತಿ ರದ್ದುಪಡಿಸಿರುವ ಕ್ರಮವನ್ನು ಪ್ರಶ್ನಿಸಿ ಸಲ್ಲಿಸಲಾಗಿರುವ ಅರ್ಜಿಗಳ ಸಂಬಂಧ ಸುಪ್ರೀಂಕೋರ್ಟ್ ರಾಜ್ಯ ಸರಕಾರಕ್ಕೆ ನೋಟಿಸ್ ಜಾರಿಗೊಳಿಸಿದೆ. ಮೀಸಲಾತಿ ರದ್ದು ಪ್ರಶ್ನಿಸಿ ಹುಬ್ಬಳ್ಳಿಯ ಅಂಜುಮನ್ ಸಂಸ್ಥೆ, ಬೆಂಗಳೂರಿನ ಸೆಂಟ್ರಲ್ ಮುಸ್ಲಿಂ ಅಸೋಸಿಯೇಶನ್ ಹಾಗೂ ವಿಜಯನಗರ ನಿವಾಸಿ ಗುಲಾಮ್ ರಸೂಲ್ ಅವರು ಸಲ್ಲಿಸಿರುವ ಪ್ರತ್ಯೇಕ ಅರ್ಜಿಗಳನ್ನು ನ್ಯಾ| ಕೆ.ಎಂ. ಜೋಸೆಫ್ ಹಾಗೂ ನ್ಯಾ| ಬಿ.ವಿ. ನಾಗರತ್ನಾ ಅವರಿದ್ದ ದ್ವಿಸದಸ್ಯ ನ್ಯಾಯಪೀಠ ವಿಚಾರಣೆ ನಡೆಸಿತು.

ಅರ್ಜಿಗಳ ಸಂಬಂಧ ರಾಜ್ಯ ಸರಕಾರ ಹಾಗೂ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗಕ್ಕೆ ನೋಟಿಸ್ ಜಾರಿಗೊಳಿಸಿದ ನ್ಯಾಯಪೀಠ ವಿಚಾರಣೆಯನ್ನು ಮುಂದೂಡಿತು.

## ಹೈಕಮಾಂಡ್ ಟಿಕೆಟ್ ನಿರಾಕರಣೆ: ಶೆಟ್ಟರ್ ಆಕ್ರೋಶ

ಹುಬ್ಬಳ್ಳಿ: ಮಾಜಿ ಮುಖ್ಯಮಂತ್ರಿ ಹಾಗೂ ಹುಬ್ಬಳ್ಳಿ ಕೇಂದ್ರ ಬಿಜೆಪಿ ಶಾಸಕ ಜಗದೀಶ್ ಶೆಟ್ಟರ್ ಅವ–ರಿಗೆ ಹೈಕಮಾಂಡ್ ಟಿಕೆಟ್ ನಿರಾಕ–ರಿಸಿರುವ ಸುದ್ದಿ ಹಿನ್ನೆಲೆಯಲ್ಲಿ ಅವರು ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಹುಬ್ಬಳ್ಳಿ ಯಲ್ಲಿ ಸುದ್ದಿಗಾರ ರೊಂದಿಗೆ ಮಾತನಾಡಿದ ಅವರು, 'ಪಕ್ಷದ ವರಿಷ್ಠರಿಂದ ಎಂದು ದೂರವಾಣಿ ಕರೆ ಬಂದಿತ್ತು. ನೀವು ಸೀನಿಯರ್, ಬೇರಿಯವರಿಗೆ ಅವಕಾಶ ಕೊಡಿ ಎಂದು ಹೇಳಿದ್ದಾರೆ. ನಾನು ಮೂವತ್ತು ವರ್ಷಗಳಿಂದ ಪಕ್ಷ ಕಟ್ಟಿ ಬೆಳೆಸಿದ್ದೇನೆ. ನೂರಾರು ಜನರಿಗೆ ಟಿಕೆಟ್ ಕೊಟ್ಟಿದ್ದೇನೆ. ಆರು ಸಾರಿ ಸ್ಪರ್ಧಿಸಿ ಗೆದ್ದು ಬಂದಿದ್ದೇನೆ. ನನಗೆ ಟಿಕೆಟ್ ನಿರಾಕರಿಸುತ್ತಿರುವುದಕ್ಕೆ ಕಾರಣ ತಿಳಿಸುವಂತೆ ಕೇಳಿದ್ದೇನೆ' ಎಂದು ಆಕ್ರೋಶ ಹೊರಹಾಕಿದ್ದಾರೆ.

ಸಮೀಕ್ಷೆಯಲ್ಲಿ ಪಾಸಿಟಿವ್ ವರದಿ ಬಂದಿದೆ. ನನ್ನ ರಾಜಕೀಯ



ಜೀವನದಲ್ಲಿ ಕಪ್ಪು ಚುಕ್ಕೆ ಇಲ್ಲ. ಪಕ್ಷಕ್ಕೆ ನಿಷ್ಠನಾಗಿ ಕೆಲಸ ಮಾಡಿದ್ದೇನೆ. ಪ್ರಾಮಾಣಿಕರಿಗೆ ಗೌರವ ಇಲ್ಲವೇ ಎಂದು ವರಿಷ್ಠರನ್ನು ಪ್ರಶ್ನಿಸಿದ್ದೇನೆ' ಎಂದು ಶೆಟ್ಟರ್ ಹೇಳಿದ್ದಾರೆ.

ವರಿಷ್ಠರ ಮಾತು ಕೇಳಿ ಮನಸ್ಸಿಗೆ ನೋವಾಗಿದೆ. ಇಷ್ಟು ವರ್ಷ ಪಕ್ಷ ಕಟ್ಟಿದ್ದಕ್ಕೆ ಬೆಲೆಯೇ ಇಲ್ಲವೇ ಅನ್ನಿಸಿದೆ. ವರಿಷ್ಠರ ತೀರ್ಮಾನ ನೋಡಿ ಮುಂದಿನ ನಿರ್ಧಾರ ತಿಳಿಸುತ್ತೇನೆ ಎಂದು ತಿಳಿಸಿದ್ದಾರೆ.

'ನನಗೆ ಜನರ ಆಶೀರ್ವಾದವಿದೆ. ಹಾಗಾಗಿ ನಾನು ಸ್ಪರ್ಧಿಸುತ್ತೇನೆ. ನಿನ್ನೆ ಮೊನ್ನೆ ನಿಮಗೆ ಟಿಕೆಟ್ ಖಚಿತವಾಗಿದೆ ಎಂದು ಹೈಕಮಾಂಡ್ ಮೂಲಗಳು ತಿಳಿಸಿದ್ದವು. ಆದರೆ, ಮಂಗಳವಾರ ಟಿಕೆಟ್ ನಿರಾಕರಿಸಿದ್ದಾರೆ. ಈಗಾಗಲೇ ಕ್ಷೇತ್ರದಲ್ಲಿ ಪ್ರಚಾರ ಆರಂಭಿಸಿದ್ದೇನೆ' ಎಂದರು.

> ನನ್ನ ರಾಜಕೀಯ ಜೀವನದಲ್ಲಿ ಕಪ್ಪು ಚುಕ್ಕೆ ಇಲ್ಲ. ಪಕ್ಷಕ್ಕೆ ನಿಷ್ಠನಾಗಿ ಕೆಲಸ ಮಾಡಿದ್ದೇನೆ. ಪ್ರಾಮಾಣಿಕರಿಗೆ ಗೌರವ ಇಲ್ಲವೇ ಎಂದು ವ–ರಿಷ್ಠರನ್ನು ಪ್ರಶ್ನಿಸಿದ್ದೇನೆ. ಇನ್ನೂ ಹತ್ತು ವರ್ಷಗಳ ಕಾಲ ಸಕ್ರೀಯ ರಾಜ–ಕಾರಣದಲ್ಲಿ ಇರುತ್ತೇನೆ. ಚುನಾವಣೆಗೆ ಸ್ಪರ್ಧಿಸುತ್ತೇನೆ, ಅತಿ ಹೆಚ್ಚು ಮತಗಳ ಅಂತರದಿಂದ ಗೆದ್ದು ಬರುತ್ತೇನೆ.
>
> **–ಜಗದೀಶ್ ಶೆಟ್ಟರ್ ಮಾಜಿ ಮುಖ್ಯಮಂತ್ರಿ**

ಚುನಾವಣಾ ರಾಜಕೀಯದಿಂದ ನಿವೃತ್ತಿ ಘೋಷಿಸಿರುವುದು ಕೆ. ಎಸ್. ಈಶ್ವರಪ್ಪ ಅವರ ವೈಯಕ್ತಿಕ ನಿಲುವು. ಈಶ್ವರಪ್ಪ ನಿರ್ಧಾರದ ಬಗ್ಗೆ ನಾನು ಮಾತನಾಡುವುದಿಲ್ಲ. ಜನ ಸಂಘದ ಕಾಲದಿಂದ ನಮ್ಮ ಕುಟುಂಬ ಬಿಜೆಪಿಯಲ್ಲಿದೆ. ಇಂತಹ ಕುಟುಂಬಕ್ಕೆ ಅನ್ಯಾಯ ಆಗುವುದಿಲ್ಲ ಎಂಬ ಭರವಸೆ ಇದೆ ಎಂದರು.

ಬೇರೆಯವರಿಗೆ ಅವಕಾಶ ಕೊಡಿ ಎಂದು ಹೇಳಿದ್ದಾರೆ. ಬೇರೆ ಯಾರು ಎನ್ನುವ ಬಗ್ಗೆ ಹೆಸರು ಹೇಳಿಲ್ಲ. ನಾನು ಮಾಜಿ ಸಿಎಂ ಯಡಿಯೂರಪ್ಪ ಜೊತೆ ಮಾತಾಡಿದ್ದೇನೆ. ರಾಜ–ಕಾರಣದಲ್ಲಿ ಯಾವಾಗ ಏನು ಆಗುತ್ತೆ ಗೊತ್ತಿಲ್ಲ. ಕಾದು ನೋಡಿ ಸಮಯ ಬಂದಾಗ ಎಲ್ಲಾ ಹೇಳುತ್ತೇನೆ. ಬೇರೆ ಅವಕಾಶ ಕೊಡುತ್ತೇವೆ ಬಂದು ಭೇಟಿಯಾಗಿ ಎಂದಿದ್ದಾರೆ ಎಂದು ಶೆಟ್ಟರ್ ಹೇಳಿದ್ದಾರೆ.

ನಾನು ರಾಜಕಾರಣದಿಂದ ಹಿಂದೆ ಸರಿಯುವ ಮಾತಿಲ್ಲ. ಇನ್ನೂ ಹತ್ತು ವರ್ಷಗಳ ಕಾಲ ಸಕ್ರೀಯ ರಾಜಕಾರಣದಲ್ಲಿ ಇರುತ್ತೇನೆ. ಚುನಾವಣೆಗೆ ಸ್ಪರ್ಧಿಸುತ್ತೇನೆ, ಅತಿ ಹೆಚ್ಚು ಮತಗಳ ಅಂತರದಿಂದ ಗೆದ್ದು ಬರುತ್ತೇನೆ ಎಂದು ಶೆಟ್ಟರ್ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

## ಈಶ್ವರಪ್ಪಗೆ ಹೈಕಮಾಂಡ್ ಲವ್ ಲೆಟರ್: ಡಿ.ಕೆ. ಶಿವಕುಮಾರ್ ವ್ಯಂಗ್ಯ

ಬೆಂಗಳೂರು: ಬಿಜೆಪಿ ಪಕ್ಷ ಇದುವರೆಗೂ ಒಬ್ಬ ಅಭ್ಯರ್ಥಿಯ ಹೆಸರು ಬಿಡುಗಡೆ ಮಾಡಿಲ್ಲ. ಈಶ್ವರಪ್ಪ ಅವರು ತಮ್ಮ ಹೈಕಮಾಂಡ್ ನಾಯಕರಿಗೆ ಲವ್ ಲೆಟರ್ ಬರೆದಿದ್ದಾರೆ. ಏಕೆ ಬರೆದಿದ್ದಾರೆ ಎಂದು ಅವರನ್ನು ಕೇಳಿ ಎಂದು ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ವ್ಯಂಗ್ಯವಾಡಿದ್ದಾರೆ.

ಬೆಂಗಳೂರಿನಲ್ಲಿ ಮಾತನಾಡಿದ ಅವರು, ಕಾಂಗ್ರೆಸ್ ಈಗಾಗಲೇ 167 ಕ್ಷೇತ್ರಗಳ ಪಟ್ಟಿ ಬಿಡುಗಡೆ ಮಾಡಿದೆ. ಉಳಿದ ಕ್ಷೇತ್ರಗಳ ಪಟ್ಟಿ ಕೂಡ ಸಧ್ಯದಲ್ಲೇ ಬಿಡುಗಡೆ ಆಗಲಿದೆ. ಏನೇ ನಿರ್ಧಾರ ತೆಗೆದುಕೊಂಡರೂ ಮಾಧ್ಯಮಗಳಿಗೆ ಮಾಹಿತಿ ನೀಡುತ್ತೇವೆ. ಕಾಂಗ್ರೆಸ್ ಪಕ್ಷ ಮಾಧ್ಯಮಗಳನ್ನು ಬಿಟ್ಟು ರಾಜಕೀಯ ಮಾಡುವುದಿಲ್ಲ ಎಂದರು.

ಪಟ್ಟಿ ಯಾವಾಗ ಬಿಡುಗಡೆ ಆಗಬಹುದು ಎಂದು ಕೇಳಿದಾಗ,





'ಶುಭ ಮುಹೂರ್ತ, ಶುಭ ಘಳಿಗೆ ನೋಡಿ ಪಟ್ಟಿ ಬಿಡುಗಡೆ ಮಾಡಲಾಗುವುದು' ಎಂದು ತಿಳಿಸಿದರು.

ಲಕ್ಷ್ಮಣ ಸವದಿ ಕಾಂಗ್ರೆಸ್ ಪಕ್ಷ ಸೇರ್ಪಡೆ ಬಗ್ಗೆ ಕೇಳಿದಾಗ, 'ಲಕ್ಷ್ಮಣ ಸವದಿ ಹಿರಿಯ ನಾಯಕರು. ಅವರ ಕಾಂಗ್ರೆಸ್ ಸೇರ್ಪಡೆ ವಿಚಾರ ಪ್ರಸ್ತಾಪವಾಗಿಲ್ಲ. ಸೋಮಣ್ಣ ಅವರು ಕೂಡ ಪಕ್ಷ ಸೇರ್ಪಡೆ ಆಗುತ್ತಾರೆ ಎಂಬ ವಿಚಾರ ಸುದ್ದಿಯಾಯಿತು. ಆದರೆ ಅವರು ಯಾವತ್ತೂ ಕಾಂಗ್ರೆಸ್ ಸೇರುವ ಬಗ್ಗೆ ಚರ್ಚೆ ಮಾಡಿಲ್ಲ. ಶಿವಮೊಗ್ಗ, ಹಾವೇರಿ ಇತರೆ ಭಾಗಗಳ ಕೆಲ ನಾಯಕರು ಪಕ್ಷ ಸೇರುವ ಇಂಗಿತ ವ್ಯಕ್ತಪಡಿಸಿದ್ದರು. ಅವರು ಬಂದಾಗ ಅವರಿಗೆ ಸೂಕ್ತ ಸ್ಥಾನಮಾನ ನೀಡಬೇಕು.

ಪಕ್ಷದಲ್ಲಿ ಸೂಕ್ತ ಸ್ಥಾನಮಾನ ಖಾಲಿ ಇಲ್ಲದಿದ್ದರೆ ಅವರನ್ನು ಪಕ್ಷಕ್ಕೆ ಕರೆದುಕೊಳ್ಳುವುದು ಸೂಕ್ತವಲ್ಲ' ಎಂದು ತಿಳಿಸಿದರು.

ಈಶ್ವರಪ್ಪ ರಾಜಕೀಯ ನಿವೃತ್ತಿ ಕುರಿತು ಕೇಳಿದ ಪ್ರಶ್ನೆಗೆ, 'ಅವ–ರಿಗೆ ಒಳ್ಳೆಯದಾಗಲಿ. ಅವರು ನನ್ನ ವಿರುದ್ಧ ಸ್ಪರ್ಧೆ ಮಾಡಿದ್ದರು. ಅವರ ಪಕ್ಷ ಹಾಗೂ ಅವರ ತೀರ್ಮಾನ, ಅವರಿಗೆ ಒಳ್ಳೆಯದಾಗಲಿ' ಎಂದು ತಿಳಿಸಿದರು.

ಕುಮಾರಸ್ವಾಮಿ ಅವರು ಭವಾನಿ ರೇವಣ್ಣ ಹಾಸನದಲ್ಲಿ ಸ್ಪರ್ಧಿಸಿದರೆ ಸೋಲುತ್ತಾರೆ ಎಂದು ಹೇಳಿರುವ ಬಗ್ಗೆ ಕೇಳಿದಾಗ, 'ಅವರ ಪಕ್ಷ, ಕುಟುಂಬದ ವಿಚಾರದ ಬಗ್ಗೆ ನಾನು ಚರ್ಚೆ ಮಾಡುವುದಿಲ್ಲ. ಅವರ ರಾಜಕೀಯ ಅವರು ಮಾಡಲಿ, ನಾವು ನಮ್ಮ ಕೆಲಸ ಮಾಡುತ್ತೇವೆ. ಅವರ ಆಂತರಿಕ ವಿಚಾರದಲ್ಲಿ ನಾವು ಹಸ್ತಕ್ಷೇಪ ಮಾಡುವುದಿಲ್ಲ. ಅದರ ಅವಶ್ಯಕತೆ ಕಾಂಗ್ರೆಸ್ ಪಕ್ಷಕ್ಕೆ ಇಲ್ಲ. ಅವರ ಜತೆ ನಾವು ಕೆಲಸ ಮಾಡಿ ಈಗ ಅವರು ಸರಿ ಇಲ್ಲ ಎಂದು ದೂರುವುದು ಸರಿಯಲ್ಲ' ಎಂದು ತಿಳಿಸಿದರು.

ನಿಮ್ಮ ನಾಮಪತ್ರ ಸಲ್ಲಿಕೆ ಯಾವಾಗ ಎಂದು ಕೇಳಿದಾಗ, 'ಇಂದು ಆ ಬಗ್ಗೆ ತೀರ್ಮಾನ ಮಾಡುತ್ತೇನೆ. ತೀರ್ಮಾನವಾದ ಬಳಿಕ ತಿಳಿಸುತ್ತೇನೆ' ಎಂದರು.

## ಬೆಳಗಾವಿ ಉತ್ತರದಲ್ಲಿ ಸೈಲೆಂಟಾಗಿ ರಣತಂತ್ರ ಹೆಣೆದ ಜನಾರ್ಧನ ರೆಡ್ಡಿ

# ಮರ್ಚೆಂಟ್ ನೇವಿ ಅಧಿಕಾರಿಗೆ ಒಲಿದ ಬೆಳಗಾವಿ ಉತ್ತರದ ಟಿಕೆಟ್



**ಬೆಳಗಾವಿ:** ಪಾಲಿಟಿ–ಕ್ಸ್ ಕಾವೇರುತ್ತಿದ್ದು ರಾಜ–ಕೀಯ ಪಕ್ಷಗಳು ಅಭ್ಯರ್ಥಿಗಳ ಪಟ್ಟಿಯನ್ನು ಸಸ್ಪೆನ್ಸ್ ರೀತಿಯಲ್ಲಿ ಬಿಡುಗಡೆ ಮಾಡುತ್ತಿವೆ, ಬೆಳಗಾವಿ ಉತ್ತರದಲ್ಲಿ ಟಿಕೆಟಗಾಗಿ ಮಹಾ ಪೈಪೋಟಿ ನಡೆದಿದ್ದು ಎಎಪಿ ಈಗಾಗಲೆ ಲಿಂಗಾಯತ ಮುಖಂಡನಿಗೆ ಮನೆ ಹಾಕಿದೆ.

ಇನ್ನು ಕೆಆರ್‌ಪಿಪಿ ಪಕ್ಷದ ಗಾಲಿ ಜನಾರ್ಧನ ರೆಡ್ಡಿ ಅವರು ಬೆಳಗಾವಿಯ ಪ್ರವೀಣ ಹಿರೇಮಠ ಅವರ ಕೈ ಹಿಡಿದಿದ್ದು, ಒಬ್ಬ NRE ಮತ್ತು ಪ್ರತಿಭಾವಂತ ಅಭ್ಯರ್ಥಿ ಹಾಗೂ ಮರ್ಚೆಂಟ್ ನೇವಿ ಅಧಿಕಾರಿಯವರ ಕೈಗೆ ಬೆಳಗಾವಿ ಉತ್ತರದ ಟಿಕೆಟ್ ನೀಡಿದ್ದಾರೆ.

ಪ್ರತಿಭಾವಂತ ಮತ್ತು ವಿದ್ಯಾವಂತ ಅಭ್ಯರ್ಥಿಗಳನ್ನು ಕಣಕ್ಕಿಳಿಸುವುದಾಗಿ ತಿಳಿಸಿದ್ದ ಗಾಲಿ ಜನಾರ್ಧನ್ ರೆಡ್ಡಿ ನುಡಿದಂತೆ ನಡೆದಿದ್ದಾರೆ ಎಂದು ಪ್ರವೀಣ್ ಹೇಳಿದ್ದಾರೆ. ಕಲ್ಯಾಣ ರಾಜ್ಯ ಪ್ರಗತಿ ಪಕ್ಷದ ಹೆಸರು ಮನೆ ಮನೆಗೆ ತಲುಪುವಂತೆ ಮಾಡಿದ ಪ್ರವೀಣ ಮನೆ ಮಗನಂತೆ ಜನರ ಹೃದಯಗೆದ್ದಿದ್ದಾರೆ ಎಂದು ತಿಳಿಸಿದ್ದಾರೆ. ಬಿರುಸಾಗಿ ಪ್ರಚಾರ ಪ್ರಾರಂಭ ಮಾಡಿರುವ ಪ್ರವೀಣ್ ಹಿರೇಮಠ ಪ್ರತಿ ಮನೆ ಮನೆಗೆ ತೆರಳಿ ಪಕ್ಷದ ಅರಿವು ಮತ್ತು ಪಕ್ಷದ ಬಗ್ಗೆ ಮನವರಿಕೆ ಮೂಡಿಸಿದ್ದಾರೆ.

ಅನೇಕ ಯೋಜನೆಗಳ ಮೂಲಕ ಜನ ಮನ ಗೆಲ್ಲುತಿರುವ ಪ್ರವೀಣ ನಮ್ಮ ನಾಡು ಸಂಸ್ಕೃತಿ ಮತ್ತು ಅಪಾರ ದೇಶಾಭಿಮಾನ ಹೊಂದಿದ್ದಾರೆ, 86 ಕಿಂತ ಹೆಚ್ಚು ದೇಶಗಳ ನೀರು ಕುಡಿದಿರುವ ಪ್ರವೀಣ ಅಲ್ಲಿನ ಜನಸಹಾಯ ಯೋಜನೆ ಮತ್ತು ಅಲ್ಲಿನ ವ್ಯವಸ್ಥೆ ಬಗ್ಗೆ ಸಂಪೂರ್ಣವಾಗಿ ಅರಿತಿ–ರುವುದಾಗಿ ತಿಳಿಸಿದ್ದಾರೆ.

ಅಣ್ಣ ಬಸವಣ್ಣವರ ಕಳಬೇಡ ಕೊಲಬೇಡ ಹುಸಿಯ ನುಡಿಯಲು ಬೇಡ! ಮುನಿಯಬೇಡ ಅನ್ಯ–ರಿಗೆ ಅಸಹ್ಯ ಪಡಬೇಡ! ತನ್ನ ಬಣ್ಣಿಸಬೇಡ ಇದಿರ ಹಳಿಯಲು ಬೇಡ! ಇದೇ ಅಂತರಂಗ ಶುದ್ಧಿ ಇದೇ ಬಹಿರಂಗ ಶುದ್ಧಿ ಎಂದು ಹೇಳುವ ಮೂಲಕ ಜಾತಿ ಮತ ಭೇದ ಅನ್ನದೆ ಸಮಾನ ದೈಯಯೊಂದಿಗೆ ಎಲ್ಲರೊಂದಿಗೆ ಸಾಮಾನ್ಯರಲ್ಲಿ ಸಾಮಾನ್ಯರಂತೆ ಕೆಲಸಮಾಡಿ ಜನರ ಹೃದಯದಲ್ಲಿ ಉಳಿದುಕೊಳ್ಳುವುದಾಗಿ ಪ್ರವೀಣ ಪತ್ರಿಕಾಗೋಷ್ಠಿಯಲ್ಲಿ ಶಪಥ ಮಾಡಿದ್ದಾರೆ.

**ಬೆಳಗಾವಿಗೆ ಸಂಬಂದಿಸಿದಂತೆ ಪ್ರಮುಖ ಘೋಷಣೆಗಳು**

* ಸರಕಾರಿ ಶಾಲೆಗಳಲ್ಲಿ ಶೈಕ್ಷಣಿಕ ವ್ಯವಸ್ಥೆಯಲ್ಲಿ ಸುಧಾರಣೆ.
* ಪ್ರತಿ ವಾರ್ಡ ಅಥವಾ ಏರಿಯಾಗಳಲ್ಲಿ ಮೆಡಿಕಲ ಸ್ಟೇಷನ ವ್ಯವಸ್ಥೆ.
* ಬೆಳಗಾವಿ ಪರಿಸರದ ಸುವ್ಯವಸ್ಥೆ.
* ಐಟಿ–ಬಿಟಿ ಕಂಪನಿಗಳು ಬೆಳಗಾವಿಗೆ ಬರುವಂತೆ ಮಾಡುವುದು.

ನಿಮ್ಮ ಪಕ್ಷದವತಿಯಿಂದ ಬೆಳಗಾವಿ ಹಾಗು ಕರ್ನಾಟಕ ಜನತೆಗೆ ಸಿಗುವ ಲಾಭಗಳೇನು ಎಂಬ ಪ್ರಶ್ನೆಗೆ ಉತ್ತರಿಸಿದ ಪ್ರವೀಣ ಹಿರೇಮಠ ಮುಖ್ಯವಾಗಿ ಸರಕಾರಿ ಶಾಲೆಗಳಲ್ಲಿ ಶೈಕ್ಷಣಿಕ ವ್ಯವಸ್ಥೆಯಲ್ಲಿ ಸುಧಾರಣೆ, ಪ್ರತಿ ವಾರ್ಡ ಅಥವಾ ಏರಿಯಾಗಳಲ್ಲಿ ಮೆಡಿಕಲ ಸ್ಟೇಷನ ವ್ಯವಸ್ಥೆ ಮಾಡುವುದಾಗಿ ಹೇಳಿದ್ದಾರೆ. ಬೆಳಗಾವಿ ಪರಿಸರದ ಬಗ್ಗೆ ನೆನೆದ ಪ್ರವೀಣ ಬೆಳಗಾವಿಯಲ್ಲಿನ ಗಿಡ ಮರ ಮತ್ತು ಇಲ್ಲಿನ ಪರಿಸರ ಕಾಪಾಡಲು ಎಲ್ಲ ಕ್ರಮ ತೆಗೆದು ಕೊಲ್ಲುವುದಾಗಿ ಹೇಳಿದ್ದಾರೆ.

ತಾಂತ್ರಿಕ ಯೂನಿವರ್ಸಿಟಿ ಹೊಂದಿರುವ ಬೆಳಗಾವಿ ಇಂಜಿನಿಯರಿಂಗ್ ವಿದ್ಯಾರ್ಥಿಗಳು ಕೆಲಸಕ್ಕಾಗಿ ಅನ್ಯ ನಗರಗಳಿಗೆ ಹೋಗುವಂತಾಗಿದೆ ಇದನ್ನು ಅರಿತ ಪ್ರವೀಣ ಬೆಳಗಾವಿಯಲ್ಲಿ ಮೊದಲೆನೆಯದಾಗಿ ಐಟಿ–ಬಿಟಿ ಕಂಪನಿಗಳು ಬರುವಂತೆ ಮಾಡಿ ಪ್ರತಿ ವಿದ್ಯಾರ್ಥಿ ಕೆಲಸ ಗಿಟ್ಟಿಸಿಕೊಳ್ಳುವಂತೆ ಮಾಡುತ್ತೇವೆ ಎಂದು ಹೇಳಿದ್ದಾರೆ.

ಈಗಾಗಲೇ ಅನೇಕ ಮಹಿಳೆಯರು ಮತ್ತು ಯುವಕ ಯುವತಿಯರು ಕೆಆರಪಿಪಿ ಪಕ್ಷ ಸೇರಲು ಮುಂದಾಗಿದ್ದಾರೆ ಮತ್ತು ಮುಂದಿನ ದಿನಗಳಲ್ಲಿ ಅವರೆಲ್ಲರನ್ನು ರಾಜ್ಯಾಧ್ಯಕ್ಷರ ಸಮ್ಮುಕದಲ್ಲಿ ಪಕ್ಷಕ್ಕೆ ಸೇ–ರಿಸಿಕೊಳ್ಳುವುದಾಗಿ ಪ್ರವೀಣ್ ಹಿರೇಮಠ ತಿಳಿಸಿದ್ದಾರೆ.

## ಶಾಸಕ ಜಿ.ಸೋಮಶೇಖರರೆಡ್ಡಿ ಜನಪರ ಸೇವೆ ಶ್ಲಾಘಿಸಿದ ಎ.ಪಿ.ಜಿತೇಂದ್ರ ರೆಡ್ಡಿ



ಬಳ್ಳಾರಿ: ಬಳ್ಳಾರಿ ನಗರದ ಕಳೆದ ಎರಡು ಅವಧಿಯಲ್ಲಿ ಶಾಸಕರಾಗಿ ನಗರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ನಿರೀಕ್ಷೆಗೂ ಮೀರಿ ಅಭಿವೃದ್ಧಿ ಕಾರ್ಯಗಳನ್ನು ಮಾಡಿದ ಶಾಸಕ ಜಿ.ಸೋಮಶೇಖರರೆಡ್ಡಿ ಅವರ ಪಕ್ಷ ನಿಷ್ಠೆ ಹಾಗೂ ಜನಪರ ಕಾಳಜಿ ನಿಜಕ್ಕೂ ಶ್ಲಾಘನೀಯವಾಗಿದೆ ಎಂದು ನಗರ ವಿಧಾನಸಭಾ–94 ಚುನಾವಣಾ ಉಸ್ತುವಾರಿಗಳಾದ ಎ.ಪಿ.ಜಿತೇಂದ್ರ ರೆಡ್ಡಿ ತಿಳಿಸಿದ್ದಾರೆ.

ಭಾರತೀಯ ಜನತಾ ಪಾರ್ಟಿಯ ರಾಷ್ಟ್ರೀಯ ಕಾರ್ಯಕಾರಿಣಿ ಸದಸ್ಯರು ಹಾಗೂ ತೆಲಂಗಾಣ ರಾಜ್ಯದ ಮೆಹಬೂಬನಗರ ಲೋಕಸಭೆಯ ಮಾಜಿ ಸಂಸದರೂ ಆದ ಎ.ಪಿ.ಜಿತೇಂದ್ರ ರೆಡ್ಡಿ ಅವರು, ಶಾಸಕ ಜಿ.ಸೋಮಶೇಖರ್ ರೆಡ್ಡಿ ಅವರನ್ನೊಳಗೊಂಡಂತೆ ಪಕ್ಷದ ಕಾರ್ಯಕರ್ತರು, ಪ್ರಮುಖರು, ಮಹಾನಗರ ಪಾಲಿಕೆಯ ಬಿಜೆಪಿ ಸದಸ್ಯರು, ಬಿಜೆಪಿಯ ವಿವಿಧ ಮೋರ್ಚಾಗಳ ಪದಾಧಿಕಾ–ರಿಗಳು ಮತ್ತು ಧುರೀಣರೊಂದಿಗೆ ಚರ್ಚಿಸಿದರು. ಮೇ 10 ರಂದು ಕರ್ನಾಟಕದಲ್ಲಿ ಏಕ ಕಾಲಕ್ಕೆ ನಡೆಯಲಿರುವ ಚುನಾವಣೆಯಲ್ಲಿ ಪಕ್ಷದ ಎಲ್ಲ ಕಾರ್ಯಕರ್ತರು ಕಮಲ ಚಿಹ್ನೆಗೆ ಹೆಚ್ಚಿನ ಬಹುಮತ ಬರುವಲ್ಲಿ ಇಂದಿನಿಂದಲೇ ಕಾರ್ಯಪ್ರವೃತ್ತರಾಗಬೇಕೆಂದು ಕರೆ ನೀಡಿದರು.ನಗರದಲ್ಲಿ ಬಿಜೆಪಿ ಕುರಿತಾದ ವಾಸ್ತವತೆಗಳನ್ನು ಅವಲೋಕಿಸಿದ ಅವರು ಇಡೀ ಜಗತ್ತಿನಲ್ಲಿ ದೇಶಕ್ಕೆ ಮೋದಿ ಒಂದು ಘನತೆ ತಂದು ಕೊಟ್ಟಿದ್ದಾರೆ. ಕರ್ನಾಟಕದಲ್ಲಿ ಕೋವಿಡ್ ಅವಧಿಯಲ್ಲೂ ಡಬಲ್ ಇಂಜಿನ್ ಸರ್ಕಾರ ಜನರ ಹಿತಾಸಕ್ತಿಗನುಗುಣವಾಗಿ ಸಾಕಷ್ಟು ಶ್ರಮಿಸಿದೆ. ನಗರದಲ್ಲಿ ಶಾಸಕ ಜಿ.ಸೋಮಶೇಖರರೆಡ್ಡಿ ಅವರು ಸಹ ಜನಪರವಾಗಿ ಕೆಲಸ ಮಾಡಿದ್ದಾರೆ. ಮತದಾರರು ಬಿಜೆಪಿಯನ್ನು ಬೆಂಬಲಿಸುವ ಮೂಲಕ ಜಿ.ಸೋಮಶೇಖರರೆಡ್ಡಿ ಅವರನ್ನು ಗೆಲ್ಲಿಸಿಕೊಟ್ಟಲ್ಲಿ ಇನ್ನಷ್ಟು ಅಭಿವೃದ್ಧಿ ಆಗುವುದರಲ್ಲಿ ಯಾವುದೇ ಸಂದೇಹವಿಲ್ಲವೆಂದು ತಮ್ಮ ಅಭಿಪ್ರಾಯವನ್ನು ವ್ಯಕ್ತಪಡಿಸಿದ್ದಾರೆ.

ಈ ಸಂದರ್ಭದಲ್ಲಿ ಮಹಾನಗರ ಪಾಲಿಕೆ ಸದಸ್ಯರಾದ ಶ್ರೀನಿವಾಸ್ ಮೋತ್ಕರ್, ಭಾರತೀಯ ಜನತಾ ಪಾರ್ಟಿ ಮುಖಂಡರಾದ ಕೃಷ್ಣಾ ರೆಡ್ಡಿ, ಕೊಳಗಲ್ ಪ್ರಸಾದ್ ರೆಡ್ಡಿ ಇನ್ನಿತರರು ಇದ್ದರು.

# ದೇಶಕ್ಕೆ ಬಿಜೆಪಿ ಕೊಡುಗೆ ಶೂನ್ಯ: ಕೆಪಿಸಿಸಿ ಕಾರ್ಯಾಧ್ಯಕ್ಷ ಸತೀಶ್ ಜಾರಕಿಹೊಳಿ



ಯಮಕನಮರಡಿ: ರಾಜ್ಯದಲ್ಲಿಯೇ ಯಮಕನಮರಡಿಯನ್ನು ಮಾದರಿ ಕ್ಷೇತ್ರವಾಗಿ ನಿರ್ಮಿಸಿದ್ದ ನನಗೆ ಮತ್ತೊಮ್ಮೆ ಆಶೀರ್ವದಿಸಿ ಎಂದ ಶಾಸಕ ಸತೀಶ್ ಜಾರಕಿಹೊಳಿ. ದೇಶಕ್ಕೆ ಬಿಜೆಪಿ ಕೊಡುಗೆ ಶೂನ್ಯ. ರಾಜ್ಯ ಹಾಗೂ ಕೇಂದ್ರದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ಮಾತ್ರ ಆರ್ಥಿಕ, ಸಾಮಾಜಿಕ, ಶೈಕ್ಷಣಿಕ, ರೈತರ, ಮಹಿಳೆಯರ ರಕ್ಷಣೆ ಸೇರಿದಂತೆ ಸರ್ವ ಜನಾಂಗದ ಐಕ್ಯತೆ ಹಾಗೂ ಬಡವರ ಏಳಿಗೆ ಸಾಧ್ಯ ಎಂದು ಕೆಪಿಸಿಸಿ ಕಾರ್ಯಾಧ್ಯಕ್ಷ, ಶಾಸಕ ಸತೀಶ್ ಜಾರಕಿಹೊಳಿ ಅವರು ಹೇಳಿದರು.

ಯಮಕನಮರಡಿ ಮತಕ್ಷೇತ್ರದ ಕಡೋಲಿ, ಅಲತಗಾ, ಚಲವಿನಟ್ಟಿ ಗ್ರಾಮದಲ್ಲಿ ಕಾರ್ಯಕರ್ತರ ಮನೆ ಮನೆಗೆ ಭೇಟಿ ನೀಡಿ, ಮತಯಾಚಿಸಿ ಮಾತನಾಡಿದ ಅವರು, ಕಳೆದ 15 ವರ್ಷದಲ್ಲಿ ಯಮಕನಮರಡಿ ಕ್ಷೇತ್ರದಾದ್ಯಂತ ಜನರು ಮೆಚ್ಚುವಂತೆ ಅಭಿವೃದ್ಧಿ ಕೆಲಸಗಳನ್ನು ಮಾಡಿದ್ದೇನೆ. ಅಧಿಕಾರವನ್ನು ಸೇವೆ ಎಂದು ಭಾವಿಸಿ ಜನರ ಸೇವೆಯಲ್ಲಿ ತೊಡಗಿಕೊಂಡಿದ್ದೇನೆ. ಕೇವಲ ಪ್ರಚಾರ ಮತ್ತು ಮಾತುಗಳಿಗೆ ಸೀಮಿತವಾಗದೆ ಎಲ್ಲರ ಕಣ್ಣಿಗೆ ಕಾಣುವ ಹಾಗೆ ಕ್ಷೇತ್ರದ ಅಭಿವೃದ್ಧಿ ಮಾಡಲಾಗಿದೆ. ಇದನ್ನು ಗುರುತಿಸಿ ಮುಂಬರುವ ಚುನಾವಣೆಯಲ್ಲಿ ಮತ್ತೊಮ್ಮೆ ಬೆಂಬಲ ನೀಡಬೇಕು ಮನವಿ ಮಾಡಿದರು.

ನಾವು 2023ರಲ್ಲಿ ಅಧಿಕಾರಕ್ಕೆ ಬಂದೇ ಬರುತ್ತೇವೆ. ಬಿಜೆಪಿ ಎಷ್ಟೇ ಸುಳ್ಳು ಹೇಳಲಿ, ಹಣದ ಹೊಳೆ ಹರಿಸಲಿ, ಕಾಂಗ್ರೆಸ್ ಅಧಿಕಾರಕ್ಕೆ ಬರುವುದನ್ನು ತಪ್ಪಿಸಲು ಯಾರಿಂದಲೂ ಸಾಧ್ಯವಿಲ್ಲ. ಬಿಜೆಪಿಯವರು ಜನರಿಗೆ ಸುಳ್ಳು ಹೇಳುವುದನ್ನು ಬಿಟ್ಟು ಸತ್ಯ ಹೇಳುವುದನ್ನು ಕಲಿಯಲಿ, ಮಾಜಿ ಸಿಎಂ ಸಿದ್ದರಾಮಯ್ಯ ಅಧಿಕಾರದ ಅವಧಿಯಲ್ಲಿ ನುಡಿದಂತೆ ನಡೆದಿದ್ದೇವೆ. 2013ರಲ್ಲಿ ನಮ್ಮ ಪ್ರಣಾಳಿಕೆ ಮೂಲಕ 165 ಭರವಸೆ ನೀಡಿದ್ದೆವು. ಅದರಲ್ಲಿ 158 ಭರವಸೆ ಈಡೇರಿಸಿದ್ದೇವೆ. ಅದರ ಜತೆಗೆ ಪ್ರಣಾಳಿಕೆಯಲ್ಲಿ ಹೇಳದ 30 ಕಾರ್ಯಕ್ರಮ ಕೊಟ್ಟಿದ್ದೇವೆ. ನುಡಿದಂತೆ ನಡೆದ ಸರ್ಕಾರ ಇದ್ದರೆ ಅದು ಕಾಂಗ್ರೆಸ್ ಸರ್ಕಾರ ಮಾತ್ರ. ನಾವು ಕೊಟ್ಟ ಮಾತಿಗೆ ತಪ್ಪಲ್ಲ ಎಂದು ತಿಳಿಸಿದರು.

ಜನರಿಗೆ ಬಿಜೆಪಿ ಸರಕಾರ ಗೆಲ್ಲುವುದಕ್ಕಿಂತ ಮುಂಚೆ ನೀಡಿದ ಭರವಸೆಗಳಾದ ರೈತರ ಆದ–ಾಯ ದ್ವಿಗುಣ, ನಿರುದ್ಯೋಗದ ನಿವಾರಣೆ, ಉದ್ಯೋಗ ಭರವಸೆ, ಮಹಿಳಾ ಸಂರಕ್ಷಣೆ, ಉಚಿತ ಶಿಕ್ಷಣ ಎಲ್ಲಿದೆ ಎಂದು ಇದೇ ವೇಳೆ ಪ್ರಶ್ನಿಸಿದರು. ಈ ಸಂದರ್ಭದಲ್ಲಿ ಯುವ ನಾಯಕ ರಾಹುಲ್ ಜಾರಕಿಹೊಳಿ, ಕಡೋಲಿ,ಅಲತಗಾ, ಚಲವಿನಟ್ಟಿ ಗ್ರಾಮದ ಹಿರಿಯರು, ಮುಖಂಡರು ಮತ್ತು ನೂರಾರು ಕಾರ್ಯಕರ್ತರು ಇದ್ದರು.

## ಶಾಸಕ ನಾಗೇಂದ್ರನ "ಕೈ" ಹಿಡಿದ ಮೋಕ ಗ್ರಾಮದ ಯುವಕರು



ಬಳ್ಳಾರಿ: ಬಳ್ಳಾರಿಯ ಗ್ರಾಮೀಣ ಶಾಸಕ ಬಿ.ನಾಗೇಂದ್ರ ಅವರ ಹಾಗೂ ಮೋಕ ಭಾಗದ ಪ್ರಭಾವಿ ಕಾಂಗ್ರೆಸ್ ಪಕ್ಷದ ಮುಖಂಡರಾದ ಬಿ.ಡಿ ಹಳ್ಳಿ ಸತ್ಯನಾರಾಯಣ ರೆಡ್ಡಿ ಅವರ ಸಮ್ಮುಖದಲ್ಲಿ ಮೋಕ ಗ್ರಾಮದ ಕಾಂಗ್ರೆಸ್ ಪಕ್ಷದ ಯುವ ಮುಖಂಡರಾದ ಪಿ. ಪಾಷಾ, ಇಸ್ಮಾಯಿಲ್ ನೇತೃತ್ವದಲ್ಲಿ ಸೋಮವಾರ ನೂರಾರು ಬಿಜೆಪಿ ಯುವ ಮುಖಂಡರು, ಯುವಕರು ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಯಾದರು.

ಗ್ರಾಮೀಣ ಶಾಸಕ ಬಿ.ನಾಗೇಂದ್ರ ಅವರು ಬಿಜೆಪಿ ಪಕ್ಷದ ಯುವ ಮುಖಂಡರಾದ ಪೊಬ್ಬತ್ತಿ ವೆಂಕಟೇಶ್, ಪೊಬ್ಬಟ್ಟಿ ಗಣೇಶ, ಕೊಳ್ಳಿ ರಾಘಣ್ಣ, ಕೊಳ್ಳಿ ಎರ್ರಿಸ್ವಾಮಿ, ಕೊಳ್ಳಿ ರಾಜ, ಕೊಳ್ಳಿ ವಂಶಿ, ಕೊಳ್ಳಿ ಸಂತೋಷ್, ಕುರುಬರ ಮುದಿಮಲ್ಲ, ಕುರುಬರ ರಮೇಶ, ಕುರುಬರ ಮಹೇಶ, ಕುರುಬರ ತಿಪೇಶ್, ಕುರುಬರ ಗಾದಿಲಿಂಗ, ಬಾರಕೇರ ವೀರೇಶ್, ಬೆಣಕಲ್ಲು ಗಂಗಣ್ಣ, ಕುರುಬರ ವೀರೇಶ್, ಖಾಜಾ, ಉಪ್ಪಾರ್ ಮಲ್ಲಿ, ಉಪ್ಪಾರ್ ವೆಂಕಟೇಶ್ ಸೇರಿದಂತೆ ನೂರಾರು ಯುವ ಮುಖಂಡರಿಗೆ, ಕಾರ್ಯಕರ್ತರಿಗೆ ಕಾಂಗ್ರೆಸ್ ಪಕ್ಷದ ಬಾವುಟ ನೀಡಿ ಪಕ್ಷಕ್ಕೆ ಬರಮಾಡಿಕೊಂಡು.

ನಂತರ ಶಾಸಕ ಬಿ.ನಾಗೇಂದ್ರ ಅವರು ಮಾತನಾಡಿ ಬಿಜೆಪಿ ಸರ್ಕಾರದ ದುರಾಡಳಿತಕ್ಕೆ ಬೇಸತ್ತು ಕಾಂಗ್ರೆಸ್ ಪಕ್ಷದ ಅವಧಿಯಲ್ಲಿ ಕೈಗೊಳ್ಳಲಾದ ಅಭಿವೃದ್ಧಿ ಕಾರ್ಯಗಳನ್ನು ಮೆಚ್ಚಿ ಸೇರ್ಪಡೆಯಾಗಿದ್ದಾರೆ. ಎಲ್ಲಾ ಕಾರ್ಯಕರ್ತರು ಮುಂಬರುವ ದಿನಗಳಲ್ಲಿ ಪಕ್ಷವನ್ನು ವಿಜಯದತ್ತ ಕೊಂಡೊಯ್ಯುವ ಜವಾಬ್ದಾರಿ ಎಲ್ಲರ ಮೇಲಿದೆ. ಪಕ್ಷದ ಗೆಲುವಿಗೆ ಶಕ್ತಿಮೀರಿ ಪ್ರಯತ್ನಿಸಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷದ ಮುಖಂಡರಾದ ಅಣ್ಣಾ ನಾಗರಾಜ್, ವರಾಲು ಸೀನಾ, ಸಿಂಧುವಾಳ್ ಗಾದಿಲಿಂಗನಗೌಡ, ಬೆಣ–ಕಲ್ ಬಸವರಾಜ್ ಗೌಡ, ಯರ್ರಗುಡಿ ಮುದಿ ಮಲ್ಲಯ್ಯ, ಗೋನಾಳ್ ನಾಗಭೂಷಣ ಗೌಡ, ಹಗರಿ ಗೋವಿಂದ, ಶ್ರೀನಾಥ್, ಬಿ.ದುರುಗಣ್ಣ, ಸೇರಿದಂತೆ ಕಾಂಗ್ರೆಸ್ ಪಕ್ಷದ ಮುಖಂಡರು, ಕಾರ್ಯಕರ್ತರು ಉಪಸ್ಥಿತರಿದ್ದರು.

## ಶಾಸಕ ಸೋಮಶೇಖರ ರೆಡ್ಡಿ ಭರ್ಜರಿ ಮತಯಾಚನೆ



ಬಳ್ಳಾರಿ: ಬಳ್ಳಾರಿ ನಗರದ 35ನೇ ವಾರ್ಡ್ ಸತ್ಯವಾಣಿ ನಗರ, ಇಂದಿರಾನಗರ ಪ್ರದೇಶದಲ್ಲಿ ಬಳ್ಳಾರಿ ನಗರದ ಶಾಸಕರಾದ ಜಿ ಸೋಮಶೇಖರ ರೆಡ್ಡಿರವರ ನೇತೃತ್ವದ ಭರ್ಜರಿ ಪ್ರಚಾರ ಕಾರ್ಯಕ್ರಮದಲ್ಲಿ ಪ್ರತಾಪ್ ರೆಡ್ಡಿ, ಶಿವಾನಂದ, ಪ್ರಭಾಕರ್, ಶ್ರೀನಿವಾಸ ಮೋತ್ಕರ್ ಮತ್ತು ಸ್ಥಳೀಯ ಮುಖಂಡರು, ಕಾರ್ಯಕರ್ತರು, ಪಕ್ಷದ ಬೆಂಬಲಿಗರು ಇನ್ನಿತರರು ಭಾಗಿಯಾಗಿದ್ದರು.

ಈ ಸಂದರ್ಭದಲ್ಲಿ ಸ್ಥಳಿಯ ಸಾರ್ವಜನಿಕರು ಸಂಭ್ರಮಚರಣೆಯ ನಡುವೆ ಅದ್ದೂರಿಯಾಗಿ ಪ್ರಚಾರವನ್ನು ನಡೆಸಿದರು.

## ಕಿಂಗ್ ಮೇಕರ್ ಆದ ರಮೇಶ್ ಜಾರಕಿಹೊಳಿ



**ಬೆಳಗಾವಿ:** ರಮೇಶ್ ಜಾರಕಿಹೊಳಿ ಹಠಮಾರಿ ಅನ್ನೋದನ್ನು ಮತ್ತೊಮ್ಮೆ ಸಾಬೀತು ಮಾಡಿದ್ದಾರೆ.ಬಿಜೆಪಿ ಅಭ್ಯರ್ಥಿಗಳ ಆಯ್ಕೆ ವಿಚಾರದಲ್ಲಿ ಮೇಲುಗೈ ಸಾಧಿಸಿರುವ ಸಾಹುಕಾರ್ ತಮ್ಮ ಪರಮಾಪ್ತ–ರಿಗೆ ಟಿಕೆಟ್ ಕೊಡಿಸುವಲ್ಲಿ ಯಶಸ್ವಿಯಾಗಿದ್ದಾರೆ.

ಬೆಳಗಾವಿ ಗ್ರಾಮೀಣ ಕ್ಷೇತ್ರದಿಂದ ನಾಗೇಶ್ ಮನ್ನೋಳಕರ,ಅಥ–'ಣಿಯಿಂದ ಮಹೇಶ್ ಕುಮಟೊಳ್ಳಿ ರಾಮದುರ್ಗದಿಂದ ಚಿಕ್ಕ ರೇವಣ್ಣ,ಹಾಗು ಖಾನಾಪೂರ ಕ್ಷೇತ್ರದಿಂದ ವಿಠ್ಠಲ ಹಲಗೇಕರ ಬೈಲಹೊಂಗಲ ಕ್ಷೇತ್ರದಿಂದ ಜಗದೀಶ್ ಮೆಟಗುಡ್ ಅವ–ರಿಗೆ ಬಿಜೆಪಿ ಟಿಕೆಟ್ ಕೊಡುವಂತೆ ಬಿಜೆಪಿ ವರಿಷ್ಠರ ಮುಂದೆ ರಮೇಶ್ ಜಾರಕಿಹೊಳಿ ಶಿಫಾರಸು ಮಾಡಿದ್ದರು ಎಂದು ಹೇಳಲಾಗಿದೆ.

ಬಿಜೆಪಿಯಲ್ಲಿ ಸಾಹುಕಾರ್ ರಮೇಶ್ ಜಾರಕಿಹೊಳಿ ವರ್ಚಸ್ಸು ಕಳೆದುಕೊಂಡಿದ್ದಾರೆ ಎಂದು ಅವರ ರಾಜಕೀಯ ವಿರೋಧಿಗಳು ಪ್ರಚಾರ ಮಾಡಿದ ಬೆನ್ನಲ್ಲಿಯೇ ಸಾಹುಕಾರ್ ತಮ್ಮ ವರ್ಚಸ್ಸು ತೋರಿಸಿದ್ದಾರೆ.

ಬೆಳಗಾವಿ ಗ್ರಾಮೀಣ ಕ್ಷೇತ್ರದ ಟಿಕೆಟ್ ನಾಗೇಶ್ ಮನ್ನೋಳಕರ ಅವರಿಗೆ ಕೊಡುವಂತೆ ಸಾಹುಕಾರ್ ಪಟ್ಟು ಹಿಡಿದಿದ್ದರು.

ಅಥಣಿಯ ಮಹೇಶ್ ಕುಮಟೊಳ್ಳಿ ಅವರಿಗೂ ಟಿಕೆಟ್ ಕೊಡದಿದ್ದರೆ,ನನಗೂ ಟಿಕೆಟ್ ಬೇಡ ಎಂದು ರಮೇಶ್ ಜಾರಕಿಹೊಳಿ ಕುಮಟೊಳ್ಳಿ ಬೆಂಬಲಕ್ಕೆ ನಿಂತಿದ್ದರು.

## ಅಪಾರ್ಟ್ಮೆಂಟ್ ಗಳಲ್ಲಿ ಮಲ್ಲೇಶ್ವರ ಶಾಸಕರ ಸಂವಾದ



ಬೆಂಗಳೂರು: ಮಲ್ಲೇಶ್ವರ ಕ್ಷೇತ್ರದಲ್ಲಿ ಸಮರ್ಪಕ ನೀರು ಪೂರೈಕೆ ನಿರ್ವಹಣೆ, ಶಿಕ್ಷಣ ಲಭ್ಯತೆ, ಆರೋಗ್ಯ ವ್ಯವಸ್ಥೆ ಸೇರಿದಂತೆ ಎಲ್ಲಾ ಮೂಲಭೂತ ಸೌಕರ್ಯಗಳನ್ನು ಆದ್ಯತೆಯ ಮೇಲೆ ಕಲ್ಪಿಸಲಾಗಿದೆ ಎಂದು ಸಚಿವರೂ ಆದ ಶಾಸಕ ಡಾ. ಸಿ ಎನ್ ಅಶ್ವತ್ಥನಾರಾಯಣ ಭಾನುವಾರ ಹೇಳಿದರು.

ತಮ್ಮ ಕ್ಷೇತ್ರ ವ್ಯಾಪ್ತಿಯಲ್ಲಿ ಯಶವಂತಪುರ ಸರ್ಕಲ್ ಹತ್ತಿರವಿರುವ ಎಂಬೆಸ್ಸಿ ಹೆರಿಟೇಜ್, ಸಲಾರ್ ಪುರಿಯ ಹಾಗೂ ಮತ್ತಿತರ ಅಪಾರ್ಟ್ಮೆಂಟ್ ಗಳ ನಿವಾಸಿಗಳ ಜೊತೆ ಸಂವಾದ ನಡೆಸಿ ಮತ ಕೋರಿ ಅವರು ಮಾತನಾಡಿದರು.

ಮಲ್ಲೇಶ್ವರ ವ್ಯಾಪ್ತಿಯಲ್ಲಿ ಅಂಗನವಾಡಿ ಇಂದ ಹಿಡಿದು ಪದವಿಯವರೆಗೆ ಸರ್ಕಾರಿ ವ್ಯವಸ್ಥೆಯಲ್ಲಿ ಸುಮಾರು 10, 000 ವಿದ್ಯಾರ್ಥಿಗಳು ಕಲಿಯುತ್ತಿದ್ದಾರೆ. ಬಡತನವು ಕಲಿಕೆಯ ಅವಕಾಶಗಳಿಗೆ ಅಡ್ಡಿಯಾಗದೆ ಎಲ್ಲರಿಗೂ ಸಮಾನ ಶಿಕ್ಷಣ ಲಭ್ಯವಾಗಬೇಕು ಎಂಬ ಆಶಯದೊಂದಿಗೆ ಇಲ್ಲಿನ ಸರ್ಕಾರಿ ಶಿಕ್ಷಣ ಸಂಸ್ಥೆಗಳನ್ನು ಅಭಿವೃದ್ಧಿಪಡಿಸಲಾಗಿದೆ ಎಂದು ನಾರಾಯಣ ತಿಳಿಸಿದರು.ಕ್ಷೇತ್ರ ವ್ಯಾಪ್ತಿಯಲ್ಲಿ ನೀರಿನ ಸೋರಿಕೆಯನ್ನು ಶೇಕಡ 45 ರಿಂದ ಶೇಕಡ 14. 72ಕ್ಕೆ ಇಳಿಸಿರುವುದರಿಂದ ಈಗ ಮಹಡಿ ಮನೆಗಳಿಗೂ ನೀರು ಸರಾಗವಾಗಿ ಪೂರೈಕೆ ಆಗುತ್ತಿದೆ. ಇದೇ ವೇಳೆ, ಸಮರ್ಪಕ ನೀರು ನಿರ್ವಹಣೆ ಬಗ್ಗೆ ಜನಜಾಗೃತಿ ಮೂಡಿಸಲು ಮಲ್ಲೇಶ್ವರ 18ನೇ ಕ್ರಾಸ್ ನಲ್ಲಿ ವಾಟರ್ ಮ್ಯೂಸಿಯಂ ಸ್ಥಾಪಿಸಲಾಗಿದೆ ಎಂದು ವಿವರಿಸಿದರು.

ಕ್ಷೇತ್ರದಲ್ಲಿ ಆರು ಕಡೆ ನಗರ ಸಮಗ್ರ ಪ್ರಾಥಮಿಕ ಆರೋಗ್ಯ ಕೇಂದ್ರಗಳು ಡಿಜಿಟಲ್ ಹೆಲ್ತ್ ಕ್ಲಿನಿಕ್ ಗಳಾಗಿ ಮೇಲ್ದರ್ಜೆಗೇರಿವೆ. ಇದರ ಜೊತೆಗೆ, ಆರು ಕಡೆ ಸ್ಮಾರ್ಟ್ ವರ್ಚುಯಲ್ ಕ್ಲಿನಿಕ್ ಗಳು ಮತ್ತು 'ನಮ್ಮ ಕ್ಲಿನಿಕ್' ಗಳು ಜನರಿಗೆ ಆರೋಗ್ಯ ಸೇವೆಗಳನ್ನು ಒದಗಿಸುತ್ತಿವೆ ಎಂದರು.

ಸುಸ್ಥಿರ ನಗರ ಬೆಳವಣಿಗೆಗೆ ಸರ್ಕಾರ ಒತ್ತು ನೀಡಿದೆ. ಅದಕ್ಕೆ ಅನುಗುಣವಾಗಿ ಅಪಾರ್ಟ್ಮೆಂಟ್ ಗಳ ನಿವಾಸಿಗಳ ಹಿತರಕ್ಷಣೆಗೂ ಗಮನವಹಿಸಿದೆ. ಅವರಿಗೆ ನೀರಿನ ಬಿಲ್ ವಿದ್ಯುತ್ ಬಿಲ್ ಸೇ–ರಿದಂತೆ ಯಾವುದೇ ನಾಗರಿಕ ಸೇವಾ ಶುಲ್ಕಗಳಲ್ಲಿ ತಾರತಮ್ಯವಾಗದಂತೆ ಕ್ರಮವಹಿಸಿದೆ. ಹಾಗೆಯೇ, ಸಮರ್ಪಕ ತ್ಯಾಜ್ಯ ನಿರ್ವಹಣೆಯಲ್ಲಿ ಅಪಾರ್ಟ್ಮೆಂಟ್ ನಿವಾಸಿಗಳನ್ನು ವಿಶ್ವಾಸಕ್ಕೆ ತೆಗೆದುಕೊಂಡು ಸೂಕ್ತ ನೀತಿಗಳನ್ನು ರೂಪಿಸಲಾಗುತ್ತಿದೆ ಎಂದರು.

ಬ್ರಿಗೇಡ್ ರಿಜೆನ್ಸಿ, ಪಾಂಡುರಂಗ ಆಶ್ರಮ, ಶಶಿಕಿರಣ್ ಅಪಾರ್ಟ್ಮೆಂಟ್ಸ್ ಚಿತ್ರಕೂಟ, ಜುವೆಲ್, ಶೃಂಗಾರ್, ವಿಶಾಲ್ ಅಪಾರ್ಟ್ಮೆಂಟ್ ಗಳು ಹಾಗೂ, ಅರಣ್ಯ & ಜಲಮಂಡಳಿ ವಸತಿ ಸಮುಚ್ಚಯಗಳಿಗೆ ಅವರು ಭೇಟಿ ಕೊಟ್ಟು ಸಂವಾದ ನಡೆಸಿದರು.

## ಜೆಡಿಎಸ್ ಗೆಲ್ಲಿಸಿ: ಪಂಚರತ್ನ ಯೋಜನೆಗಳ ಜಾರಿಗೆ ಸಹಕರಿ; ಕುಮಾರಸ್ವಾಮಿ



ಬಳ್ಳಾರಿ: ನಗರದ 4ನೇ ವಾರ್ಡ್ ಗುಗ್ಗರಹಟ್ಟಿ ಪ್ರದೇಶದಲ್ಲಿ ಜಾತ್ಯತೀತ ಜನತಾ ದಳದಿಂದ ಪಂಚರತ್ನ ಯಾತ್ರೆ ಕಾರ್ಯಕ್ರಮವನ್ನು ನಡೆಸಲಾಯಿತು. ಈ ಸಂದರ್ಭದಲ್ಲಿ ಜೆಡಿಎಸ್ ಪಕ್ಷದ ಮಾಜಿ ಮುಖ್ಯಮಂತ್ರಿಗಳಾದ ಕುಮಾರ ಸ್ವಾಮಿ ಪಕ್ಷದ ಕಾರ್ಯಕರ್ತರ ಬಹಿರಂಗ ಸಭೆಯನ್ನು ಉದ್ದೇಶಿ ಮಾತನಾಡಿ, ಬಳ್ಳಾರಿ ನಗರ ವಿಧಾನ ಸಭೆ ಚುನಾವಣಾ ನಿಮಿತ್ತ ಅವರು ಬಳ್ಳಾರಿ ನಗರ ಕ್ಷೇತ್ರಗಳಲ್ಲಿ ಪಕ್ಷದ ನಗರ ಅಭ್ಯರ್ಥಿಯಾದ ಮುನ್ನಾಬಾಯ್ ಅವರ ಪರವಾಗಿ ಮತ ನೀಡಿ ಗೆಲ್ಲಿಸುವಂತೆ ಮನವಿ ಮಾಡಿದರು.

ನಗರದಲ್ಲಿ ಶ್ರೀಮಂತ ವರ್ಗದವರು ಇದ್ದಾರೆ ಆದರೆ ಬಡತನ ಇದೆ. ಕೇಂದ್ರ ಸರ್ಕಾರಕ್ಕೆ ಸಲ್ಲಿಸಿರುವ ವರದಿಯಲ್ಲಿ 10,ಜಿಲ್ಲೆ ಗಳಲ್ಲಿ ಬಡತನ ಅಪೌಷ್ಟಿಕತೆ ಆಹಾರ ಕೊರತೆ ಇದೆ ಎಂದು ವರದಿ ನೀಡಿದ್ದಾರೆ. ದೇಶ ಮತ್ತು ರಾಜ್ಯದಲ್ಲಿ ಬಿ.ಜೆ.ಪಿಯ ಡಬಲ್ ಇಂಜನ್ ಸರ್ಕಾರ ಆಳ್ವಿಕೆ ಮಾಡಿದರು ಸಾರ್ವಜನಿಕರ ಸಮಸ್ಯೆಗಳನ್ನು ಪರಿಸಹರಿಸಲು ಸಾಧ್ಯವಾಗಿಲ್ಲ. ಮುಂದಿನ ವಿಧಾನಸಭಾ ಚುನಾವಣೆಯಲ್ಲಿ 59 ವಿಧಾನಸಭಾ ಕ್ಷೇತ್ರಗಳಲ್ಲಿ ಜೆಡಿಎಸ್ ಪಕ್ಷ ಗೆಲ್ಲುತ್ತದೆ, ಕಾಂಗ್ರೆಸ್ ಬಿಜೆಪಿ ಅವರಗಿಂತ ಉತ್ತಮವಾದ ಫಲಿತಾಂಶ ಪಡೆಯುತ್ತದೆ ಎಂದು ಆಶಾಭಾವನೆ ವ್ಯಕ್ತಪಡಿಸಿದರು. ಜೆ.ಡಿ.ಎಸ್ ಪಕ್ಷ ಯಾವುದೇ ರಾಜಕೀಯ ಪಕ್ಷದ ಜೊತೆಗೆ ಅಲಯನ್ಸ್ ಮಾಡಿಕೊಳ್ಳುವುದಿಲ್ಲ, ಬಳ್ಳಾರಿ ನಗರದಲ್ಲಿ ವಸತಿ ಇಲ್ಲದ ಬಡಜನ–ರಿಗೆ ನಾನು ಮುಖ್ಯಮಂತ್ರಿಯಾದಲ್ಲಿ ಅಂತವರಿಗೆ ಸೂರು ಕಲ್ಪಿಸಿಕೊಡುತ್ತೇನೆ, ಅಟೋ ಡ್ರೈವರ್‌ಗಳಿಗೆ ಪ್ರತಿ ತಿಂಗಳು ಅವರ ಖಾತೆಗೆ ರೂ ಎರಡು ಸಾವಿರಗಳನ್ನು ನೇರ ವರ್ಗಾವಣೆ ಮಾಡುತ್ತೇನೆ, ಪಂಚರತ್ನ ಯೋಜನೆಯಲ್ಲಿ ನಾನು ಬಿಡುಗಡೆ ಮಾಡಿದಂತ ಯೋಜನೆಗಳನ್ನು ಪೂರ್ಣವಾಗಿ ಜಾರಿಗೆ ತರುತ್ತೇನೆಂದು ಹೇಳಿದರು. ಹಾಸನ ನಗರ ವಿಧಾನಸಭಾ ಕ್ಷೇತ್ರದ ಟಿಕೆಟ್ ಪಕ್ಷದ ಕಾರ್ಯಕರ್ತರಗೆ ಕೊಡಬೇಕು ಎನ್ನುವುದು ನಮ್ಮ ನಿಲವು ಕೆಲ ಶಕುನಿಗಳ ತಂತ್ರಗಾರಕೆ ಆಗಿದೆ.

ಇದೇ ಸಂದರ್ಭದಲ್ಲಿ ರಾಜ್ಯದ ನಾಯಕರಾದ ಇಮ್ರಾನ್ ಪಾಷಾ, ನಾಡಗೌಡ ನಾಯಕ್, ರಾಜ್ಯ ಜಂಟಿ ಕಾರ್ಯದರ್ಶಿ ಮೀನಳ್ಳಿ ತಾಯಣ್ಣ, ಜಿಲ್ಲಾಧ್ಯಕ್ಷರ ಸೋಮಲಿಂಗನಗೌಡ, ವಿಜಯ್ ಕುಮಾರ್,ರೋಷನ್, ಕಪ್ಪಗಲ್ ರಸೂಲ್ ಸಾಬ್, ಬಂಡೆಗೌಡ, ಗೋಪಾಲ್, ಕಿರಣ್ ಕುಮಾರ್, ನೂರ್ ಸೇರಿದಂತೆ ಹಲವಾರು ಪದಾಧಿಕಾರಿಗಳು ಮತ್ತು ಪಕ್ಷದ ಕಾರ್ಯಕರ್ತರಿದ್ದರು.

# ಬದುಕಲು ಉಸಿರು ಬಾಳಲು ನಂಬಿಕೆ ಮುಖ್ಯ: ಶ್ರೀ ರಂಭಾಪುರಿ ಜಗದ್ಗುರು



ನಿಡಗುಂದಿ: ಮನುಷ್ಯ ಜೀವನದಲ್ಲಿ ತಾಳ್ಮೆ ಮತ್ತು ಜಾಣ್ಮೆ ಬಹಳ ಮುಖ್ಯ. ಇವೆರಡು ಇದ್ದರೆ ಅಸಾಧ್ಯವಾದುದನ್ನು ಸಾಧಿಸಬಹುದು. ಬದುಕಲು ಉಸಿರು ಎಷ್ಟು ಮುಖ್ಯವೋ ಬಾಳಲು ನಂಬಿಕೆ ಮುಖ್ಯವೆಂಬುದನ್ನು ಯಾರೂ ಮರೆಯಬಾರದೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು

ಅವರು ಮಂಗಳವಾರ ನಗರದ ನಿಡಗುಂದಿ ಶ್ರೀ ರುದ್ರೇಶ್ವರ ಜಾತ್ರಾ ಮಹೋತ್ಸವ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಮನುಷ್ಯ ಕನಸಿನ ಗೋಪುರ ಕಟ್ಟುವ ನಿರೀಕ್ಷೆಯಲ್ಲಿ ಬದುಕುವುದಕ್ಕಿಂತ ಜೀವನದಲ್ಲಿ ಬಂದದ್ದನ್ನು ಅನುಭವಿಸುತ್ತಾ ನೆಮ್ಮದಿಯಿಂದ ಮುನ್ನಡೆಯುವುದು ಒಳ್ಳೆಯದು. ತೆನೆ ಬಿಟ್ಟ ಪೈರು, ಗೊನೆಹೊತ್ತ ಬಾಳೆ, ಫಲವಿತ್ತ ರೆಂಬೆ ಯಾವಾಗಲೂ ಬಾಗುತ್ತದೆ. ಏನೂ ಕೊಡದೇ ಇರುವ ಮನುಷ್ಯ ಜಂಭದಿಂದ ಬೀಗುತ್ತಾನೆ. ಬೀಗುವುದು ಸದ್ಗುಣವಲ್ಲ. ಬಾಗುವುದು ಸದ್ಗುಣ ಎಂಬುದನ್ನು ನೆನಪಿಡಬೇಕಾಗುತ್ತದೆ. ಅದೃಷ್ಟ ಮನುಷ್ಯನ ಕೈಯಲ್ಲಿ ಇರುತ್ತೋ ಇಲ್ಲವೋ ಗೊತ್ತಿಲ್ಲ. ಆದರೆ ನಿರ್ಧಾರ ಮಾತ್ರ ನಮ್ಮ ಕೈಯಲ್ಲಿಯೇ ಇರುತ್ತದೆ. ಹೆಸರು ಕೀರ್ತಿ ಪದವಿಗೋಸ್ಕರ ಬದುಕುವವರು ಬಹಳ ಜನ. ಆದರೆ ಪ್ರೀತಿ ನಿಸ್ವಾರ್ಥ ಸೇವೆ ಮಾಡುತ್ತಾ ನಡೆದರೆ ಅವುಗಳೇ ಬೆನ್ನತ್ತಿ ಬರುತ್ತವೆ.

ಸಂಬಂಧಗಳು ಎಷ್ಟು ವರುಷ ಇರುತ್ತವೆ ಅನ್ನುವುದಕ್ಕಿಂತ ಆ ಸಂಬಂಧಗಳು ಎಷ್ಟು ವರುಷ ಇರುತ್ತವೆ ಎಂಬುದು ಬಹಳ ಮುಖ್ಯ. ವೀರಶೈವ ಧರ್ಮ ಸಿದ್ಧಾಂತದಲ್ಲಿ ಶ್ರೀ ಜಗದ್ಗುರು ರೇಣುಕಾಚಾರ್ಯರು ನಿರಂತರ ಸಾಧನೆ ಮತ್ತು ಪ್ರಯತ್ನದಿಂದ ಅಸಾಧ್ಯವಾದುದನ್ನು ಸಾಧಿಸಲು ಸಾಧ್ಯ ಎಂದಿದ್ದಾರೆ. ಅವರು ಕಾಯಕ ಮತ್ತು ದಾಸೋಹದ ಮೂಲಕ ಜನಮನದ ಪರಿಶುದ್ಧತೆಗಾಗಿ ಶ್ರಮಿಸಿದ್ದನ್ನು ನೆನಪಿಸಿಕೊಳ್ಳಬೇಕಾಗುತ್ತದೆ.

ಶ್ರೀ ರುದ್ರೇಶ್ವರ ಮಠದ ರುದ್ರಮುನಿ ಶಿವಾಚಾರ್ಯ ಸ್ವಾಮಿಗಳವರ 75ನೇ ವರ್ಷದ ಅಮೃತ ಮಹೋತ್ಸವ ಜರುಗುತ್ತಿರುವುದು ತಮಗೆ ಅತ್ಯಂತ ಸಂತೋಷ ತಂದಿದೆ ಎಂದು ಹರುಷ ವ್ಯಕ್ತಪಡಿಸಿ ಶ್ರೀಗಳವ–ರಿಗೆ ರೇಶ್ಮೆ ಮಡಿ, ಫಲ ಪುಷ್ಪ ಮತ್ತು ಸ್ಮರಣಿಕೆ ನೀಡಿ ಆಶೀರ್ವದಿಸಿದರು. ಜಾಲಹಳ್ಳಿ ಜಯಶಾಂತಲಿಂಗ ಮಸೂತಿ ಪ್ರಭುಕುಮಾರ ಮನಗೂಳಿ ಸಂಗನಬಸವ ಚಿಮ್ಮಲಗಿ ಸಿದ್ಧರೇಣುಕ ಇಟಗಿ ಗುರುಶಾಂತವೀರ ಬಾದಾಮಿ ಶಿವಪೂಜಾ, ಬಸವನಬಾಗೇವಾಡಿ ಶಿವಪ್ರಕಾಶ ಶ್ರೀಗಳು, ಕನ್ನೂರು ಸೋಮನಾಥ ಶ್ರೀಗಳು, ಗಿರಿಸಾಗರ ರುದ್ರಮುನಿ ಶ್ರೀಗಳು, ಬಿಲ್‌ಕೆರೂರು ಸಿದ್ಧಲಿಂಗ ಶ್ರೀಗಳು ಸಮಾರಂಭದಲ್ಲಿ ಪಾಲ್ಗೊಂಡು ಉದೇಶಾಮೃತವನ್ನಿತ್ತರು. ಅಧ್ಯಕ್ಷತೆ ವಹಿಸಿದ ನಿಡಗುಂದಿ ರುದ್ರೇಶ್ವರ ಮಠದ ರುದ್ರಮುನಿ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ ಇಂದು ನನ್ನ ಜನ್ಮ ಸಾರ್ಥಕವಾಯಿತು. ಮಹಾಗುರುವಿನ ಅಂತ:ಕರಣದ ಆಶೀರ್ವಾದ ಬಾಳಿಗೆ ನೂರಾನೆ ಬಲ ತಂದಿದೆ. ಜಗದ ಕತ್ತಲು ಕಳೆಯಲು ಸೂರ್ಯ ಬಾಳಿನ ಕತ್ತಲು ಕಳೆಯಲು ಗುರು ನಮ್ಮೆಲ್ಲರಿಗೆ ಬೇಕು ಎಂದರು.

ಸಮಾರಂಭಕ್ಕೂ ಮುನ್ನ ಶ್ರೀ ರಂಭಾಪುರಿ ಜಗದ್ಗುರುಗಳವರನ್ನು ಸಾರೋಟ ಉತ್ಸವದ ಮೂಲಕ ಬರಮಾಡಿಕೊಂಡರು.

## ಕೋನಂಕಿ ರಾಮಪ್ಪನವರ ಮನಗೆ ಭೇಟಿ ನೀಡಿದ ಸಚಿವ ಶ್ರೀರಾಮುಲು



ಬಳ್ಳಾರಿ: ಬಳ್ಳಾರಿ ನಗರದ ಬೆಸ್ಟ್ ಸ್ಕೂಲ್ ಸಂಸ್ಥಾಪಕರಾದ ಹಾಗು ಬಿಜೆಪಿ ಮುಖಂಡರಾದ ಕೋನಂಕಿ ರಾಮಪ್ಪನವರ ಮನೆಗೆ ಮಂಗಳವಾರ ಬಳ್ಳಾರಿ ಉಸ್ತುವಾರಿ ಸಚಿವರಾದ ಶ್ರೀರಾಮುಲು ಭೇಟಿ ನೀಡಿದ್ದಾರೆ.

ಕುಶಲೋಪರಿ ವಿಚಾ–ರಿಸಿದ ಕೋನಂಕಿ ತಿಲಕ್ ಅವರ ಜೊತೆ ಶ್ರೀರಾಮುಲು ಅವರು ಮಾತನಾಡುತ್ತಾ ವಿಧಾನಸಭೆ ಚುನಾವಣೆ ಹತ್ತಿರ ಬರುತ್ತಿರುವುದರಿಂದ ಬಳ್ಳಾರಿ ನಗರ ಮತ್ತು ಗ್ರಾಮೀಣ ಕ್ಷೇತ್ರದ ಅಭ್ಯರ್ಥಿಗಳನ್ನು ಹೆಚ್ಚಿನ ಮತಗಳಿಂದ ಆರಿಸಿ ತರಲು ಶ್ರಮವಹಿಸಬೇಕೆಂದು ಕೋರಿದ್ದಾರೆ.

ಕೋನಂಕಿ ತಿಲಕ್ ಅವರು ಮಾತನಾಡುತ್ತಾ ಬಳ್ಳಾರಿ ನಗರ ಮತ್ತು ಗ್ರಾಮೀಣ ಕ್ಷೇತ್ರಗಳಲ್ಲಿ ನಮ್ಮ ಬಿಜೆಪಿ ಆರಿಸಿ ಬರುವುದು ಖಚಿತವಾಗಿದೆ, ನೀವು ಅದರ ಬಗ್ಗೆ ಚಿಂತಿಸಬೇಡಿ, ನಾವು ಕಾರ್ಯಕರ್ತರು ಎಲ್ಲರೂ ಸೇರಿ ಅಭ್ಯರ್ಥಿಗಳನ್ನು ಆರಿಸಿತರುವುದು ಖಚಿತ ಎಂದು ಧೈರ್ಯವನ್ನು ತುಂಬಿದ್ದಾರೆ.

# ರೈತರ ಪಂಪ್‌ಸೆಟ್ ಗಳಿಗೆ ಉಚಿತ ವಿದ್ಯುತ್ ಪರಿವರ್ತಕ: ಜಿಲ್ಲಾಧಿಕಾರಿ ನಿತೇಶ್ ಪಾಟೀಲ

**ಬೆಳಗಾವಿ:** ರೈತರ ಕೃಷಿ ಪಂಪ್ ಸೆಟ್ ಶೀಘ್ರವಾಗಿ ವಿದ್ಯುತ್ ಸಂಪರ್ಕವನ್ನು ಒದಗಿಸುವ ದೃಷ್ಟಿಯಿಂದ, ಶೀಘ್ರ–ಸಂಪರ್ಕ ಯೋಜನೆಯನ್ನು ಪರಿಚಯಿಸಲಾಗಿದ್ದು, ಸದರಿ ಯೋಜನೆಯಲ್ಲಿ ರೈತರು 10000 ರೂಗಳ ಸೌಕರ್ಯ ಅಭಿವೃದ್ಧಿ ಶುಲ್ಕ ಹಾಗೂ ವಿದ್ಯುತ್ ಭಾರಕ್ಕೆ ತಕ್ಕಂತೆ ಭದ್ರತಾ ಠೇವಣಿಯನ್ನು ಭರಿಸಿ, ಎಚ್.ಟಿ., ಎಲ್.ಟಿ. ಹಾಗೂ ಡಿ.ಟಿ.ಸಿ. ಕಾಮಗಾರಿಯ ಕಾರ್ಯವನ್ನು "ಸ್ವಯಂ ಕಾರ್ಯ ಯೋಜನೆ"ಯಡಿಯಲ್ಲಿ ಪೂರ್ಣಗೊಳಿಸಿದಲ್ಲಿ, ಸದರಿ ಕಾಮಗಾ–ರಿಗೆ ಪರಿವರ್ತಕವನ್ನು ಹೆಸ್ಕಾಂ ಕಂಪನಿಯು ಉಚಿತವಾಗಿ ನೀಡುತ್ತದೆ ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ತಿಳಿಸಿದ್ದಾರೆ.

ಪರಿವರ್ತಕ ವಿಫಲಗೊಂಡ ಸಮಯದಲ್ಲಿ ಗ್ರಾಹಕರು 1912 ಗೆ ದೂರು ದಾಖಲಿಸಿದಾಗ, ಗ್ರಾಹಕರ ಪ್ರತಿನಿಧಿಯು ಸಂಬಂಧಪಟ್ಟ ಕಾರ್ಯ ವ್ಯಾಪ್ತಿಯ ಶಾಖಾಧಿಕಾರಿ/ಸಹಾಯಕ ಕಾರ್ಯನಿರ್ವಾಹಕ/ ಕಾರ್ಯನಿವಾಹಕ ಅಭಿಯಂತರರು ರವರಿಗೆ ಮಾಹಿತಿಯನ್ನು ನೀಡುತ್ತಾರೆ.

ಈ ಮೂಲಕ ಕಂಪನಿಯ ಸಿಬ್ಬಂದಿಯವರು ವಿಫಲಗೊಂಡ ಪರಿವರ್ತಕವನ್ನು 24 ಗಂಟೆಯೊಳಗೆ ಬದಲಾಯಿಸಲು ಕ್ರಮವಹಿಸಲಾಗುವುದು.

**ವಿಫಲಗೊಂಡ ಪರಿವರ್ತಕಗಳ ಬದಲಾವಣೆ:**

ಪರಿವರ್ತಕಗಳು ವಿಫಲಗೊಂಡ ಸಮಯದಲ್ಲಿ, 24 ಗಂಟೆಗಳೊಳಗಾಗಿ ಪರಿವರ್ತಕಗಳ ಬದಲಾಯಿಸುವ



ಉದ್ದೇಶಕ್ಕಾಗಿ ಹೆಸ್ಕಾಂ ಕಂಪನಿಯು ಬೆಳಗಾವಿ ಜಿಲ್ಲೆ ವ್ಯಾಪ್ತಿಯ ಎಲ್ಲ ಕಾರ್ಯ ಮತ್ತು ಪಾಲನೆ ವಿಭಾಗಗಳ ಉಗ್ರಾಣಗಳಲ್ಲಿ ಉತ್ತಮವಾದ ಪರಿವರ್ತಕಗಳ ದಾಸ್ತಾನು ಹೊಂದಿರುತ್ತದೆ. ಇದ–ರಿಂದ ಗ್ರಾಹಕರಿಗೆ 24 ಗಂಟೆಯ ಅವಧಿಯೊಳಗೆ ಪರಿವರ್ತಕವನ್ನು ಬದಲಾಯಿಸಲಾಗುವುದು.

**ವಿಭಾಗವಾರು ಅಧಿಕಾರಿಗಳ ವಿವರ:**

ಬೆಳಗಾವಿ ನಗರದ ಕಾರ್ಯನಿರ್ವಾಹಕ ಅಭಿಯಂತರರ ದೂರವಾಣಿ ಸಂಖ್ಯೆ 9448370241 ಅಥವಾ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರ ದೂರವಾಣಿ ಸಂಖ್ಯೆ 9480881987, 9448370244, 9448094489 ಹಾಗೂ ಬೆಳಗಾವಿ ಗ್ರಾಮೀಣದ ಖಾನಾಪೂರ ಕಾರ್ಯನಿರ್ವಾಹಕ ಅಭಿಯಂತರರ ದೂರವಾಣಿ ಸಂಖ್ಯೆ, 9448370243 ಅಥವಾ ಗ್ರಾಮೀಣ ಉಪ ವಿಭಾಗಗಳ ದೂರವಾಣಿ ಸಂಖ್ಯೆ 9448370242 ಹಾಗೂ 9480882087 9448472224 ಯನ್ನು ಸಂಪರ್ಕಿಸಬಹುದು. ಅದೇ ರೀತಿಯಲ್ಲಿ ಬೈಲಹೊಂಗಲ, ಕಿತ್ತೂರು, ಸವದತ್ತಿ ಕಾರ್ಯನಿರ್ವಹಕ ಅಭಿಯಂತರರ ದೂರವಾಣಿ ಸಂಖ್ಯೆ, 9448370268 ಹಾಗೂ ರಾಮದುರ್ಗ 9480883886, ಘಟಪ್ರಭಾ, ಗೋಕಾಕ, ಮೂಡಲಗಿ ದೂರವಾಣಿ ಸಂಖ್ಯೆ 9448370247, ಚಿಕ್ಕೋಡಿ, ನಿಪ್ಪಾಣಿ 9448370245, ರಾಯಬಾಗ 9483507199 ಹಾಗೂ ಅಥಣಿ ಕಾಗವಾಡ ದೂರವಾಣಿ ಸಂಖ್ಯೆ 9449017644 ಗೆ ಸಂಪರ್ಕಿಸಬಹುದಾಗಿದೆ.

ಹೆಸ್ಕಾಂ ಕಂಪನಿಯು ಶುಲ್ಕ ರಹಿತ ದೂರವಾಣಿ 1912 ಸಂಖ್ಯೆಯ ಮೂಲಕ ಗ್ರಾಹಕರುಗಳು ವಿದ್ಯುತ್ ಸರಬರಾಜಿನಲ್ಲಿ ಅಡಚಣೆ, ವಿಫಲಗೊಂಡ ಪರಿವರ್ತಕಗಳ ಬದಲಾವಣೆ ಹಾಗೂ ಇತರೇ ದೂರುಗಳನ್ನು ಸಲ್ಲಿಸಬಹುದಾಗಿದೆ ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಡಾ.ಹೊಸಮನಿಗೆ ಜಪಾನಿನ ಚೆರ್ರಿ ಬ್ಲಾಸಮ್ ಪ್ರಶಸ್ತಿ



ಜಪಾನ: ಸಾರ್ವಜನಿಕ ಗ್ರಂಥ–ಾಲಯ ಇಲಾಖೆಯ ನಿರ್ದೇಶಕರಾದ ಡಾ.ಸತೀಶ್ ಕುಮಾರ್ ಹೊಸಮನಿ ಅವರಿಗೆ ಜಪಾನಿನಲ್ಲಿ ನಡೆದ ಅಂತಾರಾಷ್ಟ್ರೀಯ ಸಾಂಸ್ಕೃತಿಕ ಸೌರಭ ಕಾರ್ಯಕ್ರಮದಲ್ಲಿ "ಚೆರ್ರಿ ಬ್ಲಾಸಮ್ 2023" ಪ್ರಶಸ್ತಿ ನೀಡಿ ಗೌರವಿಸಲಾಯಿತು. ಡಿಜಿಟಲ್ ಸಾರ್ವಜನಿಕ ಗ್ರಂಥಾಲಯ ಕ್ಷೇತ್ರದಲ್ಲಿ ಅವರ ಅನುಪಮ ಸೇವೆ ಪರಿಗಣಿಸಿ ಈ ಪ್ರಶಸ್ತಿ ನೀಡ ಲಾಯಿತು.

ಏಪ್ರಿಲ್ 7 ರಂದು. ಜಪಾನಿನ ಟೋಕಿಯೋ ಸಮೀಪದ ನರಿಟಾ ನಗರದ ಕ್ರೇನ್ ಬಾಂಕ್ವೆಟ್ ಸಭಾಂಗಣದಲ್ಲಿ ಯಶಸ್ವಿಯಾಗಿ ಜರುಗಿದ ಸಮಾರಂಭದಲ್ಲೀ ಐ.ಸಿ.ಎಫ್.ಸಿ (ಐ) ಅಧ್ಯಕ್ಷ, ಕೆ.ಪಿ. ಮಂಜುನಾಥ್ ಸಾಗರ್ ಅವರು ಭಾರತೀಯ ಅಂತರಾಷ್ಟ್ರೀಯ ಸಾಂಸ್ಕೃತಿಕ ಸೌರಭ ಪರಿಷತ್, ಹೃದವಾಹಿನಿ – ಕರ್ನಾಟಕ ಮತ್ತು ಮಂಜುನಾಥ್ ಎಜುಕೇಶನ್ ಟ್ರಸ್ಟ್, ಸುಮಾರು 20 ವರ್ಷಗಳಿಂದ ರಾಜ್ಯ, ರಾಷ್ಟ್ರ ಮತ್ತು ಅಂತರಾಷ್ಟ್ರೀಯ ಮಟ್ಟದಲ್ಲಿ, ವಿದೇಶಗಳಲ್ಲಿ ಅಲ್ಲಿಯ ಕನ್ನಡಿಗರು ಮತ್ತು ಕನ್ನಡಿಗರ ಸಂಸ್ಥೆಗಳ ಮೂಲಕ ವಿಶ್ವ ಕನ್ನಡ ಸಮ್ಮೇಳನ ಮತ್ತು ಅಂತರಾಷ್ಟ್ರೀಯ ಸಾಂಸ್ಕೃತ ಸೌರಭ ಸಮಾರಂಭಗಳನ್ನು ನಿರಂತರವಾಗಿ ಆಯೋಜಿಸುತ್ತಿದ್ದಾರೆ.

ವಿಜಾಪುರದ ಡಾ. ನಾಗೂರ್ ಎಜುಕೇಶನ್ ಟ್ರಸ್ಟ್ ನ ಮ್ಯಾನೇಂಗ್ ಟ್ರಸ್ಟೀ ಹಾಗೂ ಇಂಡಿಯಾ ಮಾಸ್ಟರ್ ಅಥ್ಲೆಟಿಕ್ಸ್ ಫೆಡೆರೇಷನ್ ಅಧ್ಯಕ್ಷರಾದ ಡಾ. ಕೆ. ಬಿ. ನಾಗೂರ್ ,ಮತ್ತು ಜಪಾನ್ ನ್ಯಾಶನಲ್ ಇನ್ಸಿಟ್ಯೂಟಿನ ಸಂಶೋಧನಾ ವಿಜ್ಞಾನಿ ಮನು ಮಳ್ಳಹಳ್ಳಿ, ಮೈಸೂರಿನ ನಿವೃತ್ತ ಪ್ರೊ. ಆರ್. ಎನ್. ಜಗದೀಶ್, ಸ್ವಾಮಿ ಎಂಟರ್ಪ್ರೈಸಸ್ ಎಂ.ಡಿ. ಗೋ.ನಾ. ಸ್ವಾಮಿ, ಬೆಂಗಳೂರಿನ ಮೈಕ್ರಾನ್ ಎಲೆಕ್ಟ್ರೀಕಲ್ಸ್ ಡೈರೆಕ್ಟರ್(ಪ್ರೊಜೆಕ್ಟ್) ಡಾ. ವಿ. ನಾಗರಾಜು ಮತ್ತಿತರರು ಉಪಸ್ಥಿತರಿದ್ದರು.

# ಉಚಿತ ಹೃದಯರೋಗ ತಪಾಸಣಾ ಶಿಬಿರ

ಬೆಳಗಾವಿ: ಕೆ.ಎಲ್.ಇ. ಆಯುರ್ವೇದ ಆಸ್ಪತ್ರೆ ಶಹಾಪೂರ ಬೆಳಗಾವಿಯಲ್ಲಿ ದಿನಾಂಕ 13/04/2023 ಗುರುವಾರ ಮುಂಜಾನೆ 09–00 ರಿಂದ 1.30 ಮತ್ತು ಮದ್ಯಾಹ್ನ 2–30 ರಿಂದ 5–00 ರವರೆಗೆ ಉಚಿತ ಹೃದ್ರೋಗ ತಪಾಸಣಾ ಶಿಬಿರವನ್ನು ಏರ್ಪಡಿಸಲಾಗಿದೆ. ಈ ಶಿಬಿರದಲ್ಲಿ ಹೃದಯ ಸಂಬಂಧಿ ಕಾಯಿಲೆಗಳು ಬಿಪಿ (ಅಧಿಕ ರಕ್ತ ದೊತ್ತಡ) ಕೊಬ್ಬು, ಹೃದಯಾ ಘಾತ, ಹೃದಯ ರಕ್ತನಾಳತೊಂದರೆ ಮುಂತಾದರೋಗಗಳಿಗೆ ತಪಾಸಣೆ ಮಾಡಲಾಗುವುದು. ಈ ಶಿಬಿರದಲ್ಲಿ ಆಸ್ಪತ್ರೆಯ ತಜ್ಞ ವೈದ್ಯರು ತಪಾಸಣೆ ಮಾಡಿ ಸೂಕ್ತ ಸಲಹೆ ನೀಡಲಿದ್ದಾರೆ.

ಈ ಶಿಬಿರದ ಪ್ರಯೋಜನೆಯನ್ನು ಪಡೆದುಕೊಳ್ಳಬೇಕೆಂದು ಆಸ್ಪತ್ರೆಯ ವೈದ್ಯಕೀಯ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

# ಲೋಕಾಯುಕ್ತ ಜನ ಸಂಪರ್ಕ ಸಭೆ

ಬೆಳಗಾವಿ: ಜಿಲ್ಲೆಯ ಕಿತ್ತೂರ ತಾಲೂಕಿನ ಕಿತ್ತೂರ ಪಟ್ಟಣ ಪಂಚಾಯತಿ ಸಭಾಭವನದಲ್ಲಿ ಏ.12, 2023 ರಂದು ಬೆಳ್ಳಿಗ್ಗೆ 10.30 ರಿಂದ 12 ಗಂಟೆಯವರೆಗೆ ಬೆಳಗಾವಿ ಲೋಕಾಯುಕ್ತ ಅಧಿಕಾ–ರಿಗಳು ಕಿತ್ತೂರ ತಾಲೂಕಿನ ಎಲ್ಲ ತಾಲೂಕಾ ಮಟ್ಟದ ಅಧಿಕಾ–ರಿಗಳ ಸಮಕ್ಷಮದಲ್ಲಿ ಲೋಕಾಯುಕ್ತ ಜನ ಸಂಪರ್ಕ ಸಭೆಯನ್ನು ಹಮ್ಮಿಕೊಂಡಿದ್ದಾರೆ.

ಸರ್ಕಾರಿ ಕಛೇರಿಯಲ್ಲಿಯ ಅಧಿಕಾರಿಗಳು ಸಾರ್ವಜನಿಕರ ಅಧಿಕೃತ ಕೆಲಸಗಳನ್ನು ಮಾಡಿಕೊಡುವಲ್ಲಿ ವಿಳಂಬ ನೀತಿ ಅನುಸರಿಸುತ್ತಿದ್ದಲ್ಲಿ, ಅಂತಹ ಅಧಿಕಾರಿಗಳ ವಿರುದ್ಧ ದೂರು ಸಲ್ಲಿಸಿದಲ್ಲಿ, ಸ್ಥಳದಲ್ಲಿಯೇ ಅಧಿಕಾರಿಗಳಿಂದ ಪರಿಹರಿಸಿಕೊಳ್ಳಬಹುದು. ಅರ್ಜಿ ಸಲ್ಲಿಸಲು ಇಚ್ಛಿಸುವವರು ನಿಗದಿತ ನಮೂನೆಯ ಅರ್ಜಿಯೊಂದಿಗೆ ಹಾಜ–ರಿರಲು ತಿಳಿಸಲಾಗಿದೆ.

ಸರ್ಕಾರಿ ಅಧಿಕಾರಿಗಳು ಕೆಲಸ ಮಾಡಿಕೊಡಲು ಹಣಕ್ಕೆ ಬೇಡಿಕೆ ಇಟ್ಟಲ್ಲಿ, ಒತ್ತಾಯಿಸಿದಲ್ಲಿ ಅಥವಾ ಸರ್ಕಾರಿ ಅಧಿಕಾರಿಯ ಅಕ್ರಮ ಆಸ್ತಿ ಸಂಪಾದನೆ ಬಗ್ಗೆ ಮಾಹಿತಿ ಇದ್ದಲ್ಲಿ, ಲೋಕಾಯುಕ್ತ ಅಧಿಕಾ–ರಿಗಳೊಂದಿಗೆ ನೇರವಾಗಿ/ಗುಪ್ತವಾಗಿ ಮಾಹಿತಿ ನೀಡಿ, ಸದರಿ ಸಭೆಯ ಸದುಪಯೋಗ ಪಡಿಸಿಕೊಳ್ಳಬಹುದು.

ಹೆಚ್ಚಿನ ವಿವರಗಳಿಗಾಗಿ ಕಛೇರಿ ದೂರವಾಣಿ ಸಂಖ್ಯೆ 0831–2950756, 0831–2421922 ಗೆ ಸಂಪರ್ಕಿಸಬಹುದು ಎಂದು ಕರ್ನಾಟಕ ಲೋಕಾಯುಕ್ತ ಪೊಲೀಸ್ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನೂತನ ಎಂಎಸ್‌ಐಎಲ್ ಮಳಿಗೆ ತೆರೆಯಲು ಪರವಾಣಿಗೆ ನೀಡಬಾರದು ಎಂದು ಆಗ್ರಹಿಸಿ ಪ್ರತಿಭಟನೆ

ಬೈಲಹೊಂಗಲ: ಪಟ್ಟಣದ ಬಾಯಪಾಸ್ ರಸ್ತೆಯ ಅಮಟೂರ ಬಾಳಪ್ಪ ವೃತ್ತದಲ್ಲಿ ಆರಂಭವಾಗುತ್ತಿರುವ ನೂತನ ಎಂಎಸ್‌ಐಎಲ್ ಮಳಿಗೆ ತೆರೆಯಲು ಪರವಾಣಿಗೆ ನೀಡಬಾರದು ಎಂದು ಆಗ್ರಹಿಸಿ ಇಂದಿರಾ ನಗರ, ಆಶ್ರಯ ನಗರ ಕಾಲೋನಿಯ ಮಹಿಳೆಯರು ಹಾಗೂ ಕರವೇ ಕಾರ್ಯಕರ್ತರು ಮಂಗಳವಾರ ಪ್ರತಿಭಟನೆ ನಡೆಸಿ ಅಬಕಾರಿ ಅಧಿಕಾರಿ ಬಸವರಾಜ ಮುಡಶಿ ಅವರಿಗೆ ಮನವಿ ಸಲ್ಲಿಸಿದರು.

ಕರವೇ ತಾಲೂಕು ಅಧ್ಯಕ್ಷ ರಾಜು ಬೋಳನ್ನವರ, ಶಿವಾನಂದ ಕೋಲಕಾರ ಮಾತನಾಡಿ, ಮಳಿಗೆಯ ಸಮೀಪದಲ್ಲೆ ಶಾಲೆ–ಕಾಲೇಜು, ದೇವಸ್ಥಾನಗಳಿವೆ. ಈ ಭಾಗದ ರಸ್ತೆಯಿಂದ ದಿನನಿತ್ಯ ನೂರಾರು ವಿದ್ಯಾರ್ಥಿಗಳು ಓಡಾಡುತ್ತಾರೆ. ಈಗಾಗಲೇ ಪಟ್ಟಣದಲ್ಲಿ ಸಾರಾಯಿ ಮಳಿಗೆಗಳು ಹೆಚ್ಚಾಗಿ ಬಹಳಷ್ಟು ತೊಂದರೆ ಅನುಭವಿಸಿದ್ದೇವೆ. ಮದ್ಯದ ಅಂಗಡಿ ಪ್ರಾರಂಭಗೊಂಡರೆ ಊರಿನ ವಾತಾವರಣ ಹಾಳಾಗುತ್ತದೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ಅಬಕಾರಿ ಇಲಾಖೆಗೆ ಮನವಿ ಸಲ್ಲಿಸಿ ಎಚ್ಚರಿಸಿದರೂ ಸೂಕ್ತ ಕ್ರಮ ತಗೆದುಕೊಂಡಿಲ್ಲ. ಅಬಕಾರಿ ಇಲಾಖೆಯವರು ಮಳಿಗೆಗೆ ಪ್ರಾರಂಭವಾಗಲು ಲೈಸೆನ್ಸ ನೀಡಬಾರದು ಎಂದು ಆಗ್ರಹಿಸಿದರು.

ಅಮಟೂರ ಬಾಳಪ್ಪ ಅಭಿಮಾನಿಗಳು, ನೂರಾರು ಕರವೇ ಕಾರ್ಯಕರ್ತರು, ಬಸವೇಶ್ವರ ಆಶ್ರಯ ನಗರ, ಇಂದಿರಾನಗರದ ಮಹಿಳೆಯರು ಇದ್ದರು.

# ಉಚಿತ ಆರೋಗ್ಯ ತಪಾಸಣಾ ಶಿಬಿರ

ಬೆಳಗಾವಿ: ಸರಿಯಾದ ಸಾರಿಗೆಯ ವ್ಯವಸ್ಥೆಯನ್ನೇ ಕಾಣದ ಖಾನಾಪೂರ ತಾಲೂಕಿನ ಚೋರ್ಲಾಕು ಗ್ರಾಮದಲ್ಲಿ ಉಚಿತ ಆರೋಗ್ಯ ತಪಾಸನಾ ಶಿಬಿರವನ್ನು ಕೆ ಎಲ್ ಇ ಶತಮಾನೋತ್ಸವ ಚಾರಿಟೆಬಲ್ ಆಸ್ಪತ್ರೆ ಹಾಗೂ ಲೋಕಕಲ್ಪ ಫೌಂಡೇಷನ್ ನ ಸಹಯೋಗದಲ್ಲಿ ಹಮ್ಮಿಕೊಳ್ಳಲಾಗಿತ್ತು.


ಈ ಶಿಬಿರದಲ್ಲಿ ಕೆ ಎಲ್ ಇ ಶತಮಾನೋತ್ಸವ ಚಾರಿಟೆಬಲ್ ಆಸ್ಪತ್ರೆಯ ವೈದ್ಯಾಧಿಕಾರಿ ಡಾ.ಅಮೃತ ಅವರು ಚೋರ್ಲಾ ಗ್ರಾಮದ 80ಕ್ಕೂ ಅಧಿಕ ಗ್ರಾಮಸ್ಥರನ್ನು ಉಚಿತವಾಗಿ ತಪಾಶಿಸಿ ಔಷಧಿಗಳನ್ನು ವಿತರಿಸಿದರು.ಈ ಸಂದರ್ಭದಲ್ಲಿ ಸಾರ್ವಜನಿಕ ಸಂಪರ್ಕಾಧಿಕಾರಿ ಸಂತೋಷ ಇತಾಪೆ ಮತ್ತು ವೈದ್ಯಕೀಯ ಸಿಬ್ಬಂದಿಗಳು ಮತ್ತು ಲೋಕ ಕಲ್ಪಫೌಂಡೇಷನ್ ಪಧಾದಿಕಾರಿಗಳು ಉಪಸ್ಥಿತರಿದ್ದರು.




ಈ ಸಂದರ್ಭದಲ್ಲಿ ಆಸ್ಪತ್ರೆಯ ಜೆನರಲ್ ಮೆಡಿಸಿನ್ ವಿಭಾಗದ ಮುಖ್ಯಸ್ಥರಾದ ಡಾ.ಶ್ರೀನಿವಾಸ ಬಿ ಅವರು ಶಿಬಿರಾರ್ಥಿಗಳನ್ನು ಅಭಿನಂದಿಸಿದರು. ಶಿಬಿರಾರ್ಥಿಗಳ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದ ಕೆ ಎಲ್ ಇ ಶತಮಾನೋತ್ಸವ ಚಾರಿಟೆಬಲ್ ಆಸ್ಪತ್ರೆಯ ನಿರ್ದೇಶಕರಾದ ಡಾ. ಎಸ್ ಸಿ ಧಾರವಾಡಅವರು ಮಾತನಾಡುತ್ತ "ಎಲೆ ಮರೆಯ ಕಾಯಿಯಂತಿರುವ ಖಾನಾಪೂರ ತಾಲೂಕಿನ ಕುಗ್ರಾಮಗಳಾದ, ಕಾಪೋಲಿ, ಚಾಪೋಲಿ, ಪರವಾಡ, ವಾಡೆ ಸಾಡಾ, ಹಬ್ಬಾನಟ್ಟಿ, ಕನಕುಂಬಿ, ಭೇಟನೆ ಹಾಗೂ ಚೋರ್ಲಾ ದಂತಹ ಗ್ರಾಮಗಳು ಸರಿಯಾದ ರಸ್ತೆಗಳಂತಹ ಮೂಲಭೂತ ಸೌಕರ್ಯಗಳಿಂದ ವಂಚಿತವಾಗಿವೆ.

ಅಲ್ಲದೇ ಆರೋಗ್ಯ ಸೇವೆಗಳು ಸಹ ಇಲ್ಲಿ ನಿಲುಕದ ನಕ್ಷತ್ರವೇ ಸರಿ. ಇಂತಹ ಗ್ರಾಮಗಳಿಗೆ ಇಂದು ಕೆ ಎಲ್ ಇ ಶತಮಾನೋತ್ಸವ ಚಾ–ರಿಟೆಬಲ್ ಆಸ್ಪತ್ರೆ ಹಾಗೂ ಲೋಕಕಲ್ಪ ಫೌಂಡೇಷನ್ ನ ಸಹಯೋಗದಲ್ಲಿ ಇಂತಹ ಸಮಾಜ ಮುಖಿ ಕಾರ್ಯಗಳನ್ನು ಕೈಗೊಳ್ಳುತ್ತಿದೆ. ಇದೇ ರೀತಿಯ ಸೇವೆಯನ್ನು ಸಲ್ಲಿಸಲು ಕೆ ಎಲ್ ಇ ಸಂಸ್ಥೆಯು ಸದಾಸಿದ್ಧವಿರುತ್ತವೆ ಎಂದು ಅಭಿಮತ ವ್ಯಕ್ತಪಡಿಸಿದರು.

# ಚುನಾವಣಾ ಕರ್ತವ್ಯಲೋಪ ಆರೋಪ: ಮತಗಟ್ಟೆ ಅಧಿಕಾರಿ ಅಮಾನತು




ಧಾರವಾಡ: ಹುಬ್ಬಳ್ಳಿ ಧಾರವಾಡ ಪೂರ್ವ ವಿಧಾನಸಭಾ ಮತಕ್ಷೇತ್ರ ವ್ಯಾಪ್ತಿಯ ಭಾಗ ಸಂಖ್ಯೆ 94 ರ ಮತಗಟ್ಟೆ ಅಧಿಕಾ–ರಿಯಾಗಿದ್ದ ನವೀನ ಡಿ. ಸೂರ್ಯವಂಶಿ ಅವರು ಚುನಾವಣಾ ಕರ್ತವ್ಯ ನಿರ್ವಹಣೆಯಲ್ಲಿ ನಿಷ್ಕಾಳಜಿ ತೋರಿ, ಕಾರ್ಯಲೋಪ ಮಾಡಿರುವುದರಿಂದ ತಕ್ಷಣ ಸರಕಾರಿ ಸೇವೆಯಿಂದ ಅವರನ್ನು ಅಮಾನತ್ತುಗೊಳಿಸಿ, ಜಿಲ್ಲಾ ಚುನಾವಣಾಧಿಕಾರಿಗಳು ಆಗಿರುವ ಜಿಲ್ಲಾಧಿಕಾರಿ ಗುರುದತ್ತ ಹೆಗಡೆ ಅವರು ಇಂದು ಆದೇಶ ಹೊರಡಿಸಿದ್ದಾರೆ.

ನವೀನ್ ಸೂರ್ಯವಂಶಿ ಅವರು 2023 ರ ಕರ್ನಾಟಕ ವಿಧಾನಸಭೆ ಸಾರ್ವತ್ರಿಕ ಚುನಾವಣೆಗೆ ಸಂಬಂಧಿಸಿದಂತೆ ಚುನಾವಣಾ ಕೆಲಸಗಳನ್ನು ನಿರ್ವಹಿಸುವಲ್ಲಿ ನಿರ್ಲಕ್ಷ್ಯ ವಹಿಸಿ ಕರ್ತವ್ಯಲೋಪ ಮಾಡಿದ್ದಲ್ಲದೇ, ಸಕಾಲಕ್ಕೆ ಮಾಹಿತಿ, ದಾಖಲೆಗಳನ್ನು ನೀಡದೇ ಚುನಾವಣಾ ಕಾರ್ಯಕ್ಕೆ ತೊಂದರೆಯುಂಟು ಮಾಡಿದ್ದಾರೆ. ಪ್ರಜಾಪ್ರತಿನಿಧಿ ಕಾಯ್ದೆ 1951 ರ ಕಲಂ 134 ಉಲ್ಲಂಘನೆ ಮಾಡಿದ್ದರಿಂದ ಅವರನ್ನು ಸರಕಾರಿ ಸೇವೆಯಿಂದ ತಕ್ಷಣದಿಂದ ಜಾರಿಗೆ ಬರುವಂತೆ ಅಮಾನತ್ತುಗೊಳಿಸಲಾಗಿದೆ.



## ಹಳೆಯ ಮರ ಬಿದ್ದು 7 ಸಾವು, ಹಲವರಿಗೆ ಗಾಯ

ಮುಂಬೈ: ಮಹಾರಾಷ್ಟ್ರದ ಅಕೋಲಾದಲ್ಲಿ ಭಾನುವಾರ ಭಕ್ತರು ನಿಂತಿದ್ದ ಟಿನ್ ಶೆಡ್ ಮೇಲೆ ಹಳೆಯ ಮರ ಬಿದ್ದು ಕನಿಷ್ಠ 7 ಜನರು ಸಾವನ್ನಪ್ಪಿದ್ದಾರೆ. ಭಾರೀ ಮಳೆಯಿಂದಾಗಿ ಮರ ಬಿದ್ದಾಗ ಸುಮಾರು 40 ಜನರು ಶೆಡ್ ಕೆಳಗೆ ನಿಂತಿದ್ದರು ಎಂದು ಅಕೋಲಾದ ಕಲೆಕ್ಟರ್ ನಿಮಾ ಅರೋರಾ ಮಾಹಿತಿ ನೀಡಿದ್ದಾರೆ.

ಅಕೋಲಾ ಜಿಲ್ಲೆಯ ಪರಸ್‌ನಲ್ಲಿ ಧಾರ್ಮಿಕ ಸಮಾರಂಭಕ್ಕಾಗಿ ಭಕ್ತರು ಸೇ–ರಿದ್ದರು. ಶೆಡ್ ಅಡಿಯಲ್ಲಿ ಸುಮಾರು 40 ಜನರು ಇದ್ದರು, ಅದರಲ್ಲಿ 36 ಮಂದಿಯನ್ನು ಆಸ್ಪತ್ರೆಗೆ ದಾಖಲಿಸಲಾಯಿತು ಮತ್ತು ಅವರಲ್ಲಿ ನಾಲ್ವರು ಸಾವನ್ನಪ್ಪಿದ್ದರು ಎಂದು ಸ್ಥಳೀಯ ಮಾಧ್ಯಮಗಳು ಜಿಲ್ಲಾಧಿಕಾ–ರಿಯ ಹೇಳಿಕೆ ಉಲ್ಲೇಖಿಸಿ ವರದಿ ಮಾಡಿದೆ.

ನಂತರ ಸಾವಿನ ಸಂಖ್ಯೆ ಏಳಕ್ಕೆ ಏರಿತು ಮತ್ತು ಒಬ್ಬ ವ್ಯಕ್ತಿ ತೀವ್ರವಾಗಿ ಗಾಯಗೊಂಡಿದ್ದಾರೆ ಎಂದು ಅವರು ಹೇಳಿದರು ಎನ್ನಲಾಗಿದೆ.

ಮಹಾರಾಷ್ಟ್ರದ ಉಪಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ಅವರು ಟ್ವಿಟ–ರ್‌ನಲ್ಲಿ ಈ ಘಟನೆಗೆ ಸಂತಾಪ ಸೂಚಿಸಿದ್ದಾರೆ. ಮೃತರ ಕುಟುಂಬಗಳಿಗೆ ಆರ್ಥಿಕ ನೆರವು ನೀಡಲು ಮುಖ್ಯಮಂತ್ರಿ ಏಕನಾಥ್ ಶಿಂಧೆ ನಿರ್ಧರಿಸಿದ್ದಾರೆ ಎಂದು ಅವರು ಹೇಳಿದ್ದಾರೆ.

# ನಿವೃತಿಯ ನಂತರ ಕ್ರೀಯಾಶೀಲರಾಗಿ ಸಾಧನೆಯತ್ತ ಸಾಗಲು ಕರೆ



ಬೈಲಹೊಂಗಲ: ಇಳಿ ವಯಸ್ಸಿನಲ್ಲಿ ಚಿಂತೆಗೀಡಾಗದೇ ಕ್ರೀಯಾ ಶೀಲರಾಗಿ ವಿವಿಧ ಚಟುವಟಿಕೆಗಳಲ್ಲಿ ತೋಡಗಿಸಿಕೊಂಡು ಸಾಧನೆಯತ್ತ ಸಾಗಿ ಬದುಕು ಸಾರ್ಥಕವಾಗಲು ಪ್ರಯತ್ನಿಸಬೇಕೆಂದು ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾಧ್ಯಕ್ಷೈ ಮಂಗಳಾ ಮೆಟಗುಡ್ಡ ಹೇಳಿದರು.

ಅವರು ಪಟ್ಟಣದ ಪತ್ರಿ ಬಸವೇಶ್ವರ ಅನುಭವ ಮಂಟಪದಲ್ಲಿ ರಾಜ್ಯ ನಿವೃತ ಸರಕಾರಿ ನೌಕರರ ಹಾಗೂ ಹಿರಿಯ ನಾಗರಿಕರ ಕ್ಷೇಮಾಭಿವೃದ್ಧಿ ಸಂಘದ ಆಶ್ರಯದಲ್ಲಿ ಸೋಮವಾರ ನಡೆದ ಭಗವಾನ್ ಮಹಾವೀರ, ಡಾ.ಬಿ.ಆರ್.ಅಂಬೇಡ್ಕರ, ಬಸವ ಜಯಂತಿ ಮತ್ತು ವಿವಿಧ ಸಾಧಕರ ಸತ್ಕಾರ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ನಿವೃತಿಯ ಹಿರಿಯ ನಾಗರಿಕರು ಲವಲವಿಕೆಯಿಂದ ಮುನ್ನುಗ್ಗಲು ಕ್ಷೇಮಾಭಿವೃದ್ಧಿ ಸಂಘ ಪ್ರೇರಣೆಯಗಿದ್ದು ಅದಕ್ಕೆ ಮತ್ತಷ್ಟು ಬಲ ತುಂಬಬೇಕೆಂದರು.

ರಾಷ್ಟ್ರ ಪಶಸ್ತಿ ಪುರಸ್ಕೃತೆ, ನಿವೃತ ಶಿಕ್ಷಕಿ ಅನ್ನಪೂರ್ಣಾ ಕನೋಜ ಸಭೆಯ ಅಧ್ಯಕ್ಷತೆ ವಹಿಸಿದ್ದರು. ಪುರಸಭೆ ಮಾಜಿ ಅಧ್ಯಕ್ಷೈ ಶಾಂತಕ್ಕ ಹಿರೇಮಠ, ನಿವೃತ ಶೂಶ್ರೂಷಕಿ ಸಾವಿತ್ರಿ ಹೊತ್ತಗಿಮಠ, ನಿವೃತ ಮುಖ್ಯೋಪಾಧ್ಯಾಯರಾದ ವಾಯ್.ಬಿ.ಭಜಂತ್ರಿ, ವಿಮಲಾ ದೊಡಗೌಡರ, ಸೇವಾರತ್ನ ಪ್ರಶಸ್ತಿ ಪುರಸ್ಕೃತೆ ಪ್ರೇಮಕ್ಕಾ ಅಂಗಡಿ, ಗಂಗಪ್ಪ ಅಂಗಡಿ, ಕೆ.ಪಿ.ರಾಮಗುಂಡಿ, ಶ್ರೀಶೈಲ ಶರಣಪ್ಪನವರ, ಎಂ.ಪಿ.ತಿಪ್ಪಿಮಠ, ಗೌರಿ ಕರ್ಕಿ, ಮಹಾಂತೇಶ ರಾಜಗೋಳಿ ಹಾಗೂ ಶ್ರೀ ಮುಕ್ತಾಯಕ್ಕ, ಶ್ರೀ ಅಜಗಣ್ಣ ಬಳಗದ ಸದಸ್ಯರು ಉಪಸ್ಥಿತರಿದ್ದರು.

ಶರಣೆ ರಾಜೇಶ್ವರಿ ದ್ಯಾಮನಗೌಡರ ಸ್ವಾಗತಿಸಿದರು. ಶಿಕ್ಷಕಿ ಗೌರಾದೇವಿ ತಾಳಿಕೋಟಿಮಠ ನಿರೂಪಿಸಿದರು. ಗೀತಾದೇವಿ ಬೇವಿನಗಿಡದ ವಂದಿಸಿದರು. ವಿವಿಧ ಕ್ಷೇತ್ರದ ಸಾಧಕರನ್ನು ಸನ್ಮಾನಿಸಲಾಯಿತು. ಮಕ್ಕಳಿಂದ ವಚನ ಗಾಯನ ಜರುಗಿತು. ನಿವೃತ ಸರಕಾರಿ ನೌಕರರ ಮತ್ತು ಹಿರಿಯ ನಾಗರಿಕರ ಕ್ಷೇಮಾಭಿವೃದ್ಧಿ ಸಂಘದ ಸದಸ್ಯರು ಅಧಿಕ ಸಂಖ್ಯೆಯಲ್ಲಿ ಪಾಲ್ಗೊಂಡಿದ್ದರು.

## ಅಂಕಲಗಿ ಮಠದ ಶ್ರೀ ಗುರುಸಿದ್ದೇಶ್ವರ ಸ್ವಾಮೀಜಿ ಪುಣ್ಯ ಸ್ಮರಣೋತ್ಸವ ಏ.13 ರಂದು

ಬೆಳಗಾವಿ: ಗೋಕಾಕ ತಾಲೂಕಿನ ಅಂಕಲಗಿ ಪಟ್ಟಣದ ಶ್ರೀ ಅಡವಿಸಿದ್ದೇಶವರ ಮಠದ ಪೀಠಧಿಪತಿಗಳಾದ ಶ್ರೀ ಗುರುಸಿದ್ದೇಶ್ವರ ಸ್ವಾಮೀಜಿಯವರ ಪುಣ್ಯಸ್ಮರಣೆ ಏಪ್ರಿಲ್ 13 ರಂದು ಬೆಳಿಗ್ಗೆ 10.30 ಗಂಟೆಗೆ ಅಂಕಲಗಿ ಶ್ರೀ ಅಡವಿಸಿದ್ದೇಶವರ ಮಠದಲ್ಲಿ ನಡೆಯಲಿದೆ.

ಅಂಕಲಗಿ ಶ್ರೀ ಅಡವಿಸಿದ್ದೇಶವರ ಮಠದ ಆರಾದ್ಯ ದೈವ ಶ್ರೀ ಗುರುಸಿದ್ದೇಶ್ವರ ಸ್ವಾಮೀಜಿಯವರು ಸೋಮವಾರ (ಏ.03) ಲಿಂಗೈಕ್ಯರಾಗಿದ್ದಾರೆ. ಬೆಳಿಗ್ಗೆ 8 ಗಂಟೆಗೆ ಶ್ರೀ ಗುರುಸಿದ್ದೇಶ್ವರ ಸ್ವಾಮೀ–ಜಿಯವರ ಗದ್ದುಗೆಗೆ ರುದ್ರಾಭಿಷೇಕ ನಡೆಯಲಿದೆ. ಏಪ್ರಿಲ್ 13 ರಂದು ಕುಂದರನಾಡಿನ ಅಂಕಲಗಿ ಮಠದಲ್ಲಿ ನಡೆಯಲಿರುವ ಪೂಜ್ಯರ ಪುಣ್ಯ ಸ್ಮರಣೋತ್ಸವಕ್ಕೆ ಸುತ್ತ ಮುತ್ತಲಿನ ಗ್ರಾಮದ ಜನರು ಸೇ–ರಿದಂತೆ ಸಾವಿರಾರು ಭಕ್ತರು ಪಾಲ್ಗೊಳ್ಳಲಿದ್ದಾರೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

# ಸಾಮಾಜಿಕ ಜಾಲತಾಣಗಳನ್ನು ಸದ್ಬಳಕೆ ಮಾಡಿಕೊಳ್ಳಿ: ಸಚಿವ ಅಶ್ವತ್ ನಾರಾಯಣ್

ಶಿವಮೊಗ್ಗ: ಪ್ರಸ್ತುತ ಸಾಮಾಜಿ–ಕ ಜಾಲತಾಣ ಬಹಳ ಪ್ರಮುಖ ಪಾತ್ರ ವಹಿಸುತ್ತಿದೆ ಎಂದು ಮಾಹಿತಿ ತಂತ್ರಜ್ಞಾನ ಸಚಿವ ಅಶ್ವತ್ ನಾರಾಯಣ್ ಹೇಳಿದರು.

ಅವರು ನಗರದ ಶುಭಮಂಗಳ ಸಮುದಾಯ ಭವನದಲ್ಲಿ ಮಂಗಳವಾರ ನಡೆದ ಡಿಜಿಟಲ್ ಕಾರ್ಯಕರ್ತರ ಸಮ್ಮೇಳನದಲ್ಲಿ ಮಾತನಾಡಿದರು.

24*7 ಸಾಮಾಜಿಕ ಜಾಲತಾಣಗಳಲ್ಲಿ ಕಾರ್ಯಕರ್ತರು ದುಡಿಯುತ್ತಿದ್ದಾರೆ. ಅದರಲ್ಲೂ ಚುನಾವಣೆ ಸಮಯದಲ್ಲಿ ಬಹಳ ಪರಿಣಾಮಕಾರಿಯಾಗಿ ಬಿಂಬಿಸಬೇಕಾಗುತ್ತದೆ. ಹೊಸ ಹೊಸ ವಿಚಾರಗಳ ಮೂಲಕ ಜನರ ಗಮನ ಸೆಳೆಯಬೇಕಿದೆ. ಪ್ರತಿಪಕ್ಷಗಳು ಕಡೆಗಣಿಸಿರುವ ವಿಚಾರವನ್ನು ಹೈಲೈಟ್



ಮಾಡಬೇಕಿದೆ. ನಮ್ಮ ವ್ಯವಸ್ಥೆಯಲ್ಲಿ ಡಿಜಿಟಲ್ ಮೂಲಕ ಹೆಚ್ಚು ಹೆಚ್ಚು ಜನರನ್ನು ಪರಿಣಾಮಕಾರಿಯಾಗಿ ತಲುಪಬೇಕಿದೆ. ಸಮಾಜದ ಸಮಸ್ಯೆಗಳನ್ನು ನಿವಾರಿಸುವ ದೃಷ್ಟಿಯಿಂದ ಸಾಮಾಜಿ–ಕ ಜಾಲತಾಣಗಳನ್ನು ಸದ್ಬಳಕೆ ಮಾಡಿಕೊಳ್ಳಬೇಕಿದೆ ಎಂದರು.

ಸಾಮಾಜಿಕ ಜಾತಾಣದ ಮೂಲಕ ಪ್ರತಿಯೊಬ್ಬ ನಾಗ–ರೀಕನನ್ನು ತಲುಪಲು ಸಾಧ್ಯವಿದೆ. ದೇಶ ಮತ್ತು ಸಮಾಜವನ್ನು ಕಾಪಾಡುವ ದೃಷ್ಟಿಯಿಂದ ಪ್ರತಿಯೊಬ್ಬ ವ್ಯಕ್ತಿಯಲ್ಲಿ ಜಾಗೃತಿ ಮೂಡಿಸಬೇಕಿದೆ. ಈ ಹಿನ್ನೆಲೆಯಲ್ಲಿ ಡಿಜಿಟಲ್ ಮೂಲಕ ಮೊಬೈಲ್ ಮೂಲಕ ಅವರನ್ನು ತಲುಪಿ ತಿಳುವಳಿಕೆ ಮೂಡಿಸುವ ಅಗತ್ಯವಿದೆ ಎಂದರು.

ನಾಗರಿಕರಿಗೆ ಹೆಚ್ಚು ಹೆಚ್ಚು ತಿಳುವಳಿಕೆ ನೀಡುವ ಮೂಲಕ ಚುನಾವಣೆಗೆ ತಯಾರಿ ನಡೆಸಬೇಕಿದೆ. ವ್ಯವಸ್ಥೆ ಸಡಿಲಗೊಳಿಸುವ ಬಗ್ಗೆ ಆದ–್ಯತೆ ನೀಡಬೇಕಿದೆ. ಈ ಮೂಲಕ ಸುಲಭವಾಗಿ, ಸರಳವಾಗಿ ಆಡಳಿತ ನಡೆಸಲು ಬಿಜೆಪಿ ಸರ್ಕಾರ ಒತ್ತು ನೀಡಿದೆ ಎಂದರು.

ರಾಷ್ಟ್ರೀಯ ಹೆದ್ದಾರಿಗಳು, ರೈಲ್ವೆ ಅಭಿವೃದ್ಧಿ ಸೇರಿದಂತೆ ಹಲವಾರು ಯೋಜನೆಗಳನ್ನು ಪೂರೈಸಿದೆ. ದೇಶದಲ್ಲಿ ಹಲವಾರು ಯೋಜನೆಗಳ ಮೂಲಕ ದೇಶದ ಅಭಿವೃದ್ಧಿಗೆ ಬಿಜೆಪಿ ಸರ್ಕಾರ ಮುಂದಾಗಿದೆ. ನಮ್ಮ ಸಂಸ್ಕೃತಿ, ಆಚಾರ, ವಿಚಾರ, ಧರ್ಮವನ್ನು ಉಳಿಸಿಕೊಳ್ಳುವ ಅಗತ್ಯವಿದ್ದು, ಇದಕ್ಕೆ ನಮ್ಮ ಪಕ್ಷ ಮುಂದಾಗಿದೆ. ಎಂದರು.

ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಸದಸ್ಯರಾದ ಎಸ್. ರುದ್ರೇಗೌಡ, ಡಿ.ಎಸ್ ಅರುಣ್, ಜಿಲ್ಲಾ ಬಿಜೆಪಿ ಅಧ್ಯಕ್ಷ ಟಿ.ಡಿ. ಮೇಘರಾಜ್, ಪ್ರಮುಖರಾದ ಗಿರೀಶ್ ಪಟೇಲ್, ಮೋನಪ್ಪ ಭಂಡಾರಿ, ಮೇಯರ್ ಶಿವಕುಮಾರ್, ವಿಕಾಸ್ ಪುತ್ತೂರು, ಮಹೇಶ್ ಪೂಜಾರಿ, ಶರತ್ ಕಲ್ಯಾಣಿ ಸೇರಿದಂತೆ ಹಲವರಿದ್ದರು.

# ಶಾಸಕ ಬಂಡೆಪ್ಪ ಖಾಶೆಂಪುರ್ ಸಮ್ಮುಖದಲ್ಲಿ ಜೆಡಿಎಸ್ ಸೇರ್ಪಡೆ



ಬೀದರ್: ಬೀದರ್ ದಕ್ಷಿಣ ವಿಧಾನಸಭಾ ಕ್ಷೇತ್ರದ ಬರೂರು, ಬುದೇರಾ, ಚಾಂಗಲೇರಾ, ಬಗದಲ್, ಬರಿದಾಬಾದ್, ವಕ್ರಾಣ, ಕೋಳಾರ ಬಿ, ಸಿರ್ಸಿ ಎ, ಔರಾದ್ ಎಸ್, ವಕ್ರಾಣ ಕೆ, ಚಟನಹಳ್ಳಿ, ಮನ್ನಳ್ಳಿ ಸೇ–ರಿದಂತೆ ವಿವಿಧ ಗ್ರಾಮಗಳ ಕಾಂಗ್ರೆಸ್, ಬಿಜೆಪಿ ಪಕ್ಷಗಳ ಯುವಕರು, ಮಹಿಳೆಯರು, ಮುಖಂಡರು ನೂರಾರು ಸಂಖ್ಯೆಯಲ್ಲಿ ಮಾಜಿ ಸಚಿವರು, ಜೆಡಿಎಸ್ ಶಾಸಕಾಂಗ ಪಕ್ಷದ ಉಪನಾಯಕರು, ಜೆಡಿಎಸ್ ಕೋರ್ ಕಮಿಟಿಯ ಅಧ್ಯಕ್ಷರು, ಬೀದರ್ ದಕ್ಷಿಣ ವಿಧಾನಸಭಾ ಕ್ಷೇತ್ರದ ಶಾಸಕರಾಗಿರುವ ಬಂಡೆಪ್ಪ ಖಾಶೆಂಪುರ್ ರವರ ಸಮ್ಮುಖದಲ್ಲಿ ಜೆಡಿಎಸ್ ಪಕ್ಷಕ್ಕೆ ಸೇರ್ಪಡೆಯಾದರು.

ಬೀದರ್ ದಕ್ಷಿಣ ವಿಧಾನಸಭಾ ಕ್ಷೇತ್ರದ ಖಾಶೆಂಪುರ್ ಪಿ ಗ್ರಾಮದ ಹೊರವಲಯದಲ್ಲಿರುವ ತಮ್ಮ ನಿವಾಸದ ಆವರಣದಲ್ಲಿ ಹನ್ನೆರಡಕ್ಕೂ ಹೆಚ್ಚು ಗ್ರಾಮಗಳ ನೂರಾರು ಜನ ಯುವಕರು, ಮಹಿಳೆಯರು, ಮುಖಂಡರಿಗೆ ಮಂಗಳವಾರ ಜೆಡಿಎಸ್ ಶಾಲು ಹೊದಿಸಿ, ಪಕ್ಷದ ಧ್ವಜ ನೀಡುವ ಮೂಲಕ ಶಾಸಕ ಬಂಡೆಪ್ಪ ಖಾಶೆಂಪುರ್ ರವರು ಜೆಡಿಎಸ್ ಪಕ್ಷಕ್ಕೆ ಬರಮಾಡಿಕೊಂಡರು. ಇದೇ ವೇಳೆ ವಿವಿಧ ಘಟಕಗಳಿಗೆ ನೇಮಕಗೊಂಡ ಕೆಲವರಿಗೆ ಆದೇಶ ಪತ್ರ ನೀಡಿ ಸನ್ಮಾನಿಸಿ ಗೌರವಿಸಿದರು.

ಈ ವೇಳೆ ಮಾತನಾಡಿದ ಶಾಸಕ ಬಂಡೆಪ್ಪ ಖಾಶೆಂಪುರ್ ರವರು, ಜೆಡಿಎಸ್ ಪಕ್ಷ ಪ್ರಾದೇಶಿಕ ಪಕ್ಷವಾಗಿದ್ದು, ನಾಡು ನುಡಿಯ ವಿಚಾರದಲ್ಲಿ ನಿರಂತರವಾಗಿ ಹೋರಾಟ ಮಾಡುತ್ತಾ ಬಂದಿದೆ. ನಮ್ಮ ಪಕ್ಷದ ತತ್ವ ಸಿದ್ಧಾಂತಗಳು ಮತ್ತು ನಮ್ಮ ಪಕ್ಷದ ಗುರಿ ಉದ್ದೇಶಗಳ ಬಗ್ಗೆ ನಾಡಿನ ಜನತೆಗೆ ತಿಳಿಸಿ ಹೇಳುವ ಕೆಲಸವನ್ನು ನಾವೆಲ್ಲರೂ ಮಾಡಬೇಕಾಗಿದೆ ಎಂದು ನೂತನವಾಗಿ ಸೇರ್ಪಡೆ ಯಾದವರಿಗೆ ತಿಳಿಸಿದರು.

ಮಾಜಿ ಪ್ರಧಾನಮಂತ್ರಿಗಳು ಹಾಗೂ ಪಕ್ಷದ ರಾಷ್ಟ್ರಾಧ್ಯಕ್ಷರಾದ ಹೆಚ್.ಡಿ ದೇವೇಗೌಡರ ಮಾರ್ಗದರ್ಶನದಲ್ಲಿ ಮಾಜಿ ಮುಖ್ಯಮಂತ್ರಿ ಕುಮಾರಸ್ವಾಮಿ ರವರು ರಾಜ್ಯಾದ್ಯಂತ ಸಂಚಾರ ನಡೆಸಿ ಪಕ್ಷ ಸಂಘಟನೆ ಮಾಡುತ್ತಿದ್ದಾರೆ. ರಾಜ್ಯಾಧ್ಯಕ್ಷರಾದ ಸಿಎಂ ಇಬ್ರಾಹಿಂರವರು ಹಾಗೂ ಪಕ್ಷದ ಹಿರಿಯ ನಾಯಕರೆಲ್ಲರೂ ಪಕ್ಷ ಸಂಘಟನೆಯಲ್ಲಿ ತೊಡಗಿಸಿ ಕೊಂಡಿದ್ದಾರೆ. ತಳಮಟ್ಟದಿಂದ ಪಕ್ಷವನ್ನು ಇನ್ನಷ್ಟು ಬಲಿಷ್ಠಗೊಳಿಸುವ ಕೆಲಸ ಮಾಡೋಣ ಶಾಸಕ ಬಂಡೆಪ್ಪ ಖಾಶೆಂಪುರ್ ರವರು ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರಿಗೆ ಕರೆ ನೀಡಿದರು.

# ನೀರಿನ ಸಮಸ್ಯೆ ಉದ್ಭವಿಸದಂತೆ ಮುನ್ನೆಚ್ಚರಿಕೆ ವಹಿಸಿ

**ಬೆಳಗಾವಿ (ಚನ್ನಮ್ಮ ಕಿತ್ತೂರು):** ಈ ಬಾರಿ ಬೇಸಿಗೆಯ ಏಪ್ರಿಲ್ ಮತ್ತು ಮೇ ತಿಂಗಳಲ್ಲಿ ತಾಲೂಕಿನ ಯಾವುದೇ ಗ್ರಾಮದಲ್ಲಿಯೂ ನೀರಿನ ಸಮಸ್ಯೆ ಉಲ್ಬಣವಾಗದಂತೆ ಮುನ್ನೆಚ್ಚರಿಕೆ ಕ್ರಮಗಳೊಂದಿಗೆ ಎಲ್ಲರಿಗೂ ಶುದ್ಧ ಕುಡಿಯುವ ನೀರು ಒದಗಿಸಬೇಕು. ಲೋಪ ದೋಷಗಳು ಕಂಡುಬಂದರೆ ಸಂಬಂಧಪಟ್ಟ ಪಂಚಾಯಿತಿಯ ಅಧಿಕಾ–ರಿಗಳನ್ನು ಹೊಣೆಯನ್ನಾಗಿಸಿ ಕ್ರಮ ಕೈಗೊಳ್ಳಲಾಗುವುದು ಎಂದು ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಸುಭಾಷ ಸಂಪಗಾವಿ ಸೂಚನೆ ನೀಡಿದರು.

ತಾಲ್ಲೂಕು ಪಂಚಾಯಿತಿ ಸಭಾ ಭವನದಲ್ಲಿ ಸೋಮವಾರ 'ಶುದ್ಧ



ಕುಡಿಯುವ ನೀರು ಪೂರೈಕೆಯ ಟಾಸ್ಕ್ ಫೋರ್ಸ್' ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಗ್ರಾಮೀಣ ಪ್ರದೇಶದ ಜನತೆಗೆ ಶುದ್ಧ ಕುಡಿಯುವ ನೀರು ಒದಗಿಸುವುದು ಗ್ರಾಮ ಪಂಚಾಯಿತಿ ಮತ್ತು ಗ್ರಾಮೀಣ ನೀರು ಮತ್ತು ನೈರ್ಮಲ್ಯ ಸಮಿತಿಗಳ ಹೊಣೆಯಾಗಿದೆ. ಅದನ್ನು ಸೂಕ್ತವಾಗಿ ನಿರ್ವಹಿಸುವ ಮೂಲಕ ಎಲ್ಲಿಯೂ ನೀರಿನ ಅಭಾವ ತಲೆದೋರದಂತೆ ವ್ಯವಸ್ಥೆ ಮಾಡಿಕೊಳ್ಳಬೇಕು ಎಂದು ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ತಿಳಿಸಿದರು.

ಆಯಾ ಗ್ರಾಮಪಂಚಾಯಿತಿ ವ್ಯಾಪ್ತಿಯ ಶುದ್ಧ ಕುಡಿಯುವ ನೀರಿನ ಘಟಕ, ಕುಡಿಯುವ ನೀರಿನ ಸಂಸ್ಕರಣಾ ಘಟಕಗಳನ್ನು ಸಮರ್ಪಕವಾಗಿ ಕಾಲಕಾಲಕ್ಕೆ ದುರಸ್ತಿಗೊಳಿಸಬೇಕು ಹಾಗೂ ಅವುಗಳ ಸುತ್ತಲೂ ಸ್ವಚ್ಛವಾಗಿ ಇಟ್ಟುಕೊಳ್ಳಬೇಕು. ನೀರಿನ ಸಂಸ್ಕರಣಾ ಘಟಕದ ಪ್ರಮುಖ ಭಾಗಗಳಾದ ಫಿಲ್ಟರ್,ಕ್ಲೋ–ರಿನೀಕರಣ ಬಾಟಲ್ ಇತ್ಯಾದಿಗಳನ್ನು ಕಾಲಕಾಲಕ್ಕೆ ಬದಲಾಯಿಸಬೇಕು ಮತ್ತು ನೀರಿನ ಸಂಸ್ಕರಣಾ ಘಟಕವನ್ನು ನಿಯಮಿತವಾಗಿ ಶುಚಿಗೊಳಿಸುತ್ತಿರುವ ಬಗ್ಗೆ ಮೇಲಿಂದ ಮೇಲೆ ಪರಿಶೀಲಿಸುತ್ತಿರಬೇಕು. ಪ್ರತಿದಿನ ಗ್ರಾಮ ಪಂಚಾಯಿತಿಗಳಲ್ಲಿ ಸರಿಯಾಗಿ ನೀರು ಪೂರೈಕೆ ಆಗುತ್ತಿರು ಬಗ್ಗೆ ತಾಲೂಕು ಪಂಚಾಯಿತಿಗೆ ಮಾಹಿತಿ ಒದಗಿಸಬೇಕು ಎಂದರು.

ಅಲ್ಲದೇ, ಸಾರ್ವತ್ರಿಕ ವಿಧಾನ ಸಭೆ ಚುನಾವಣೆ ಇರುವುದರಿಂದ ಎಲ್ಲರೂ ಚುನಾವಣೆ ಕರ್ತವ್ಯವನ್ನು ಆದ್ಯತೆ ಮೇರೆಗೆ ಮಾಡುವುದರ ಜತೆಗೆ ಸ್ವೀಪ್ ಚಟುವಟಿಕೆಗಳನ್ನು ಹಮ್ಮಿಕೊಂಡು ಮತದಾನ ಜಾಗೃತಿ ಮೂಡಿಸುವ ಮೂಲಕ ಗ್ರಾಪಂ ವ್ಯಾಪ್ತಿಯ ಊರುಗಳಲ್ಲಿ ಹೆಚ್ಚಿನ ಮತದಾನ ನಡೆಯುವಂತೆ ನೋಡಿಕೊಳ್ಳಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ತಹಸೀಲ್ದಾರ್ ರವೀಂದ್ರ ಹಾದಿಮನಿ, ಗ್ರಾಮೀಣ ಕುಡಿಯುವ ನೀರು ಹಾಗೂ ನೈರ್ಮಲ್ಯ ಇಲಾಖೆಯ ಬೈಲಹೊಂಗಲ ಉಪವಿಭಾಗದ ಸಹಾಯಕ ಕಾರ್ಯಕಾರಿ ಅಭಿಯಂತರ ಎಸ್.ಕೆ. ಮುಕಸಜ್ಜಿ, ಕಿತ್ತೂರ ಹೆಸ್ಕಾಂ ನ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಎಂ.ಕೆ.ಹಿರೇಮಠ, ಸಹಾಯಕ ನಿರ್ದೇಶಕರಾದ ಸುರೇಶ ನಾಗೋಜಿ, ಲಿಂಗರಾಜ ಹಲಕರ್ಣಿಮಠ, ಗ್ರಾಪಂ ಅಧಿವೃದ್ಧಿ ಅಧಿಕಾರಿಗಳು ಹಾಗೂ ತಾ.ಪಂ. ಹಾಗೂ ಗ್ರಾ.ಪಂ ಸಿಬ್ಬಂದಿ ಪಾಲ್ಗೊಂಡಿದ್ದರು.

# ಲಕ್ಷ್ಮಣ ಸವದಿ ಕಾಂಗ್ರೆಸ್ ಸೇರ್ಪಡೆ ಬಗ್ಗೆ ಯಾವುದೇ ಮಾತುಕತೆ ಆಗಿಲ್ಲ

## ಕೆಪಿಸಿಸಿ ಕಾರ್ಯಾಧ್ಯಕ್ಷ ಸತೀಶ್ ಜಾರಕಿಹೊಳಿ



**ಬೆಳಗಾವಿ:** ಮಾಜಿ ಮುಖ್ಯಮಂತ್ರಿ ಲಕ್ಷ್ಮಣ ಸವದಿ ಕಾಂಗ್ರೆಸ್ ಸೇರ್ಪಡೆಯಾಗುವ ಬಗ್ಗೆ ನಮ್ಮ ಹಂತದಲ್ಲಿ ಯಾವುದೇ ಮಾತುಕತೆ ಆಗಿಲ್ಲ. ಹಿರಿಯ ನಾಯಕರ ಜತೆ ಮಾತುಕತೆ ಆದ ಬಗ್ಗೆಯೂ ಗೊತ್ತಿಲ್ಲ. ಹಂತಹ ಬೆಳವಣಿಗೆ ಇದ್ದರೆ ನಾನೇ ನಿಮಗೆ ತಿಳಿಸುತ್ತೇನೆ ಎಂದು ಕೆಪಿಸಿಸಿ ಕಾರ್ಯಾಧ್ಯಕ್ಷ, ಶಾಸಕ ಸತೀಶ್ ಜಾರಕಿಹೊಳಿ ಅವರು ಹೇಳಿದರು.

ನಗರದ ಕಾಂಗ್ರೆಸ್ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಲಕ್ಷ್ಮಣ ಸವದಿ ಕಾಂಗ್ರೆಸ್ ಸೇರ್ತಾರೆ ಎಂಬ ವಿಷಯ ಮಾಧ್ಯಮ ಮೂಲಕ ತಿಳಿದು ಬಂದಿದೆ. ಆದರೆ ನಮ್ಮ ಹಂತದಲ್ಲಿ ಯಾವುದೇ ಮಾತುಕತೆ ಆಗಿಲ್ಲ ಎಂದು ತಿಳಿಸಿದರು.

ರಮೇಶ್ ಜಾರಕಿಹೊಳಿ ಅಥವಾ ಬಾಲಚಂದ್ರ ಜಾರಕಿಹೊಳಿ ನಿಮ್ಮ ವಿರುದ್ಧ ಸ್ಪರ್ಧೆ ಮಾಡುತ್ತಾರಾ ಎಂಬ ಮಾಧ್ಯಮಗಳ ಪ್ರಶ್ನೆಗೆ ಸತೀಶ್ ಜಾರಕಿಹೊಳಿ ಪ್ರತಿಕ್ರಿಯಿಸಿ, ಬಿಜೆಪಿಯವರ ಆಂತರಿಕ ವಿಚಾರ ಬಗ್ಗೆ ನಾನು ಮಾತನಾಡಲ್ಲ. ಅವರು ಯಾರನ್ನು ಬೇಕಾದರೂ ನಮ್ಮ ವಿರುದ್ಧ ಕಣಕ್ಕೆ ಇಳಿಸಲಿ. ಚುನಾವಣೆ ಮಾಡಿ ಗೆಲುವು ಸಾಧಿಸುವುದೇ ನಮ್ಮ ಗುರಿ ಎಂದರು.

ಜಿಲ್ಲೆಯ ಕೆಲವು ಮತಕ್ಷೇತ್ರಗಳಲ್ಲಿ ಐದು, ಆರು ಜನ ಅರ್ಜಿ ಸಲ್ಲಿಸಿದ್ದು, ಕೆಲವು ಕ್ಷೇತ್ರದಲ್ಲಿ ಬಂಡಾಯದ ಧ್ವನಿ ಎದ್ದಿದ್ದು ನಿಜ. ಬಂಡಾಯ ಶಮನ ಮಾಡಲು ಈಗಾಗಲೇ ಕೆಲವರೊಂದಿಗೆ ಮಾತನಾಡಿದ್ದೇನೆ.

ಇನ್ನು ಚುನಾವಣೆ ಬಂದಾಗ ಪಕ್ಷಾಂತರ ಪರ್ವ ಶುರುವಾಗುತ್ತದೆ. ಕಾಂಗ್ರೆಸ್‌ನಿಂದ ಬಿಜೆಪಿಗೆ, ಬಿಜೆಪಿಯಿಂದ ಕಾಂಗ್ರೆಸ್ ಗೆ, ಕಾಂಗ್ರೆಸ್ ನಿಂದ ಜೆಡಿಎಸ್ ಗೆ ಸೇರುವುದು ಹೊಸದಲ್ಲ. ಕಾಂಗ್ರೆಸ್‌ನ 3ನೇ ಪಟ್ಟಿ ಏ. 13ರೊಳಗೆ ಪ್ರಕಟವಾಗುತ್ತದೆ. ಐದಾರೂ ಕ್ಷೇತ್ರಗಳ ಟಿಕೆಟ್ ಏ. 19ರವರೆಗೆ ಪ್ರಕಟವಾಗುವ ಸಾಧ್ಯತೆ ಇದೆ ಎಂದು ಮಾಹಿತಿ ನೀಡಿದರು.

ಯಮಕನ ಮರಡಿ ಮತಕ್ಷೇತ್ರದಲ್ಲಿ ನಿರಂತರವಾಗಿ ನಾವು ಜನತೆ ಜತೆ ಸಂಪರ್ಕದಲ್ಲಿ ಇದ್ದೇವೆ. ಚುನಾವಣೆ ಬಂದಾಗ ಅಷ್ಟೇ ಕ್ಷೇತ್ರಕ್ಕೆ ಹೋಗಿ ಪ್ರಚಾರ ಮಾಡುವುದು ಪದ್ಧತಿ ನಮ್ಮಲಿಲ್ಲ. ಮಗ ರಾಹುಲ್ ಜಾರಕಿಹೊಳಿ ಮತ್ತು ಕಾರ್ಯಕರ್ಯರು ಈಗಾಗಲೇ ಪ್ರಚಾರ ಆರಂಭಿಸಿದ್ದಾರೆ ಎಂದು ತಿಳಿಸಿದರು.

# ಕೆಎಂಎಫ್ ವಿಚಾರದಲ್ಲಿ ಅನಗತ್ಯ ಗೊಂದಲ ಸೃಷ್ಟಿಸಬೇಡಿ: ಶಾಸಕ ಬಾಲಚಂದ್ರ ಜಾರಕಿಹೊಳಿ



ಬೆಳಗಾವಿ: ಕೆಎಂಎಫ್ ವಿಚಾರದಲ್ಲಿ ದಯವಿಟ್ಟು ಅನಗತ್ಯವಾಗಿ ರಾಜಕೀಯ ತರಬೇಡಿ, ಇದೊಂದು ಸಹಕಾರ ಸ್ವಾಮ್ಯದ ರಾಜ್ಯದ ಪ್ರತಿಷ್ಠಿತ ಸಂಸ್ಥೆಯಾಗಿದೆ. ಹೈನುಗಾರರು, ಗ್ರಾಹಕರು ಹಾಗೂ ನೌಕರರ ಒಳಿತನ್ನು ಕಾಪಾಡುವ ರಾಜ್ಯದ ಏಕಮೇವ ಸಹಕಾರ ಸಂಸ್ಥೆಯಾಗಿದೆ ಎಂದು ಶಾಸಕ ಬಾಲಚಂದ್ರ ಜಾರಕಿಹೊಳಿ ಹೇಳಿದರು.

ನಗರದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿ ಅವರು, ನಂದಿನಿ ನಮ್ಮೆಲ್ಲರ ಹೆಮ್ಮೆಯಾಗಿದೆ. ನಂದಿನಿಯನ್ನು ಕಾಪಾಡುವುದು ಪ್ರತಿಯೊಬ್ಬ ಕನ್ನಡಿಗರ ಆಧ್ಯ ಕರ್ತವ್ಯವಾಗಿದೆ. ದಯವಿಟ್ಟು ಯಾರೂ ನಂದಿನಿ–ಅಮೂಲ್ ವಿಚಾರದಲ್ಲಿ ಅನಗತ್ಯ ಗೊಂದಲಗಳನ್ನು ಸೃಷ್ಟಿಸಬೇಡಿ ಎಂದ ಅವರು, ಕೆ–ಎಂಎಫ್ ವಾರ್ಷಿಕವಾಗಿ 22,000 ಕೋಟಿ ರೂ.ಗಳ ವಹಿವಾಟು ನಡೆಸಿದ್ದು ಇದರಿಂದ ಕೆಎಂಎಫ್ ಮತ್ತು 15 ಜಿಲ್ಲಾ ಹಾಲು ಒಕ್ಕೂಟಗಳು ಸೇರಿ ವಾರ್ಷಿಕವಾಗಿ ಅಂದಾಜು 200 ಕೋಟಿ ರೂ.ಗಳ ಲಾಭ ನಿರೀಕ್ಷೆ ಮಾಡಲಾಗಿದೆ. ರಾಜ್ಯದಲ್ಲಿ ಅಂದಾಜು 40 ಲಕ್ಷ ಹೈನೋದ್ಯಮ ರೈತರು ಮತದಾರರಿದ್ದು, ಬಿಜೆಪಿಗೆ ಕೆಟ್ಟ ಹೆಸರು ತರುವ ದುರುದ್ದೇಶದಿಂದ ರೈತರನ್ನು ತಪ್ಪು ದಾರಿಗೆ ವಿರೋಧ ಪಕ್ಷಗಳು ಒಯ್ಯುತ್ತಿವೆ. ಅವರ ಆಸೆ ಯಾವತ್ತೂ ನನಸಾಗುವುದಿಲ್ಲ. ಇದೊಂದು ರಾಜಕೀಯ ಷಡ್ಯಂತ್ರವಾಗಿದೆ ಎಂದರು.

ಕೆಎಂಎಫ್‌ನ ಮಾರುಕಟ್ಟೆಯ ಯೋಜನೆಗಳ ಬಗ್ಗೆ ಯಾವುದೇ ಸಮರ್ಪಕ ಮಾಹಿತಿ ಇಲ್ಲದೇ ರಾಜ್ಯದಲ್ಲಿ ವಿನಾಕಾರಣ ಜನರಲ್ಲಿ ಗೋಂದಲಗಳನ್ನು ಸೃಷ್ಟಿಸುತ್ತಿರುವುದು ಯಾವ ನ್ಯಾಯೇ ಕಳೆದ 3 ತಿಂಗಳಿನಿಂದ ಕೆಎಂಎಫ್ ವಿಚಾರವಾಗಿ ಹಲವು ರಾಜಕೀಯ ನಾಯಕರು, ಗಣ್ಯರು ತಿಳಿದು, ತಿಳಿಯದೋ ಮಾತನಾಡುತ್ತಿದ್ದಾರೆ. ಇದ–ರಿಂದ ಕೆಎಂಎಫ್‌ನ ರೈತರು, ಕಾರ್ಮಿಕರು, ಗ್ರಾಹಕರಿಗೆ ಚಿತ್ರಹಿಂಸೆಯಾಗುತ್ತಿದೆ ಎಂದ ಅವರು, ರಾಜ್ಯದಲ್ಲಿ ಅಮೂಲ್ ಬಂದು ಎಷ್ಟೋ ವರ್ಷಗಳಾಗಿದ್ದರೂ ಇನ್ನೂ ರಾಜ್ಯದಲ್ಲಿ ತನ್ನ ಮಾರುಕಟ್ಟೆಯನ್ನು ವಿಸ್ತ–ರಿಸಿಕೊಳ್ಳಲು ಆಗುತ್ತಿಲ್ಲ. ಇದಕ್ಕೆ ನಾಡಿನ ರೈತರು, ಗ್ರಾಹಕರು ಕೆಎಂಎಫ್‌ನ ಮೇಲೆ ಇಟ್ಟಿರುವ ವಿಶ್ವಾಸ ಹಾಗೂ ನಂಬಿಕೆಗಳೇ ಕಾರಣವಾಗಿವೆ. ಆದ್ದರಿಂದ ಕೆಎಂಎಫ್ ಯಾವ ಕಾಲಕ್ಕೂ ಅಮೂಲ್ ಜೊತೆ ಕೈಜೋಡಿಸುವ ಪ್ರಶ್ನೆಯೇ ಇಲ್ಲ ಎಂದು ಖಡಕ್ಕಾಗಿ ಉತ್ತರಿಸಿದರು.

ಸನ್ಮಾನ್ಯ ಕೇಂದ್ರ ಗೃಹ ಹಾಗೂ ಸಹಕಾರ ಸಚಿವರಾದ ಮಾನ್ಯ ಅಮಿತ ಶಾ ಅವರು ಕೆಎಂಎಫ್‌ನ ಬಲವರ್ಧನೆಗಾಗಿ ಮಾರುಕಟ್ಟೆಯನ್ನು ಇನ್ನಷ್ಟು ವಿಸ್ತರಿಸಲು ಅಮೂಲ್ ಮಾದರಿಯಂತೆ ಸಲಹೆ ನೀಡಿದ್ದಾರೆ. ಆದರೇ ಇದನ್ನೇ ಕೆಲವರು ರಾಜ–ಕೀಯವಾಗಿ ದುರ್ಬಳಕೆ ಮಾಡಿಕೊಳ್ಳುತ್ತಿರುವುದು ಖಂಡನೀಯವಾಗಿದೆ. ಪ್ರತಿ ವರ್ಷ ಇಂಧನ ಇಲಾಖೆಗೆ ವಿದ್ಯುತ್ ಬಿಲ್ಲಗಾಗಿಯೇ 120 ಕೋಟಿ ರೂ.ಗಳನ್ನು ಸಂದಾಯ ಮಾಡಲಾಗುತ್ತಿದೆ. ಸೋಲಾರ ಪ್ಲಾಂಟ್ ನಿರ್ಮಾಣ ಮಾಡುವ ಯೋಜನೆಯನ್ನು ರೂಪಿಸಲಾಗಿದೆ. ಇದು ಜಾ–ರಿಯಾದರೆ ವಾರ್ಷಿಕವಾಗಿ 40 ಕೋಟಿ ರೂ.ಗಳ ಉಳಿತಾಯವಾಗಲಿದೆ. ನಾವು ಅಧಿಕಾರಕ್ಕೆ ಬಂದ ನಂತರ ಅನುಕಂಪದ ಆಧಾರದ ಮೇಲೆ ಉದ್ಯೋಗಾವಕಾಶಗಳನ್ನು ಕಲ್ಪಿಸಲಾಗಿದೆ. ಈ ಹಿಂದೆ ಯಾರೂ ಮಾಡದ ನೌಕರರ ನಿವೃತ್ತಿ ವೇತನವನ್ನು ಜಾರಿಗೆ ತರಲಾಗಿದೆ ಎಂದು ಹೇಳಿದರು.

# ಕಾಲ್ನಡಿಗೆ ಜಾಥಾ ಯಶಸ್ವಿ



**ಬೆಳಗಾವಿ:** ತಾಲೂಕು ಆಡಳಿತ ಮತ್ತು ಸ್ವೀಪ್ ಸಮಿತಿ ಬೈಲ ಹೊಂಗಲ, ತಾಲೂಕು ಪಂಚಾಯತ ಬೈಲಹೊಂಗಲ ಮತ್ತು ಅನುಷ್ಠಾನ ಇಲಾಖೆಯ ಅಧಿಕಾರಿ ವರ್ಗದವರು ಮತ್ತು ಕಿತ್ತೂರು ರಾಣಿ ಚನ್ನಮ್ಮ ಶಿಕ್ಷಣ ಸಂಸ್ಥೆಯ ಬಿ.ಎಡ್ ಪ್ರಶಿಕ್ಷಣಾರ್ಥಿಗಳ ಸಹಯೋಗದೊಂದಿಗೆ ನಗರದ ಚನ್ನಮ್ಮ ವೃತ್ತ ದಿಂದ ಸಂಗೊಳ್ಳಿ ರಾಯಣ್ಣ ವೃತ್ತದವರೆಗೆ ಕಾಲು ನಡೆಗೆ ಜಾಥಾಕ್ಕೆ ಶ್ರೀಮತಿ, ಪ್ರಭಾವತಿ ಫಕ್ಕಿರಪೂರ ಉಪವಿಭಾಗಾಧಿಕಾರಿಗಳು ಬೈಲಹೊಂಗಲ ರವರಿಂದ ಚನ್ನಮ್ಮ ಮೂರ್ತಿಗೆ ಮಾಲಾರ್ಪಣೆ ಮಾಡುವ ಮೂಲಕ ಕಾಲ್ನಡಿಗೆ ಜಾಥಾ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ತದನಂತರ ವೃತ್ತದಲ್ಲಿ ಎಲ್ಲರೂ ಪ್ರತಿಜ್ಞಾ ವಿಧಿಯನ್ನು ಭೋದಿಸುವುದು ಹಾಗೂ ಮತದಾನ ಜಾಗೃತಿಯ ಕರಪತ್ರಗಳ ಹಂಚಿಕೆ ಇತರೆ ಅರಿವು ಕಾರ್ಯಕ್ರಮಗಳನ್ನು ಮಾಡುವ ಮೂಲಕ ಕಾರ್ಯಕ್ರಮವನ್ನು ಎಲ್ಲಾ ಅಧಿಕಾರಿ ವರ್ಗದವರು ಹಾಗೂ ವಿದ್ಯಾರ್ಥಿಗಳು ಯಶಸ್ವಿಗೊಳಿಸಿದರು. ಚುನಾವಣಾ ಅಧಿಕಾರಿ ಸತೀಶ ಕುಮಾರ, ಸ್ವೀಪ್ ಅಧ್ಯಕ್ಷರು ಎಸ್ ಎಸ್ ಸಂಪಗಾಂವಿ, ತಹಶೀಲ್ದಾರರು ಸಂಗಮೇಶ ಮೇಳ್ಳಿಕೇರಿ, ಎ ಎನ್ ಪ್ಯಾಟೀ ಕ್ಷೇತ್ರ ಶಿಕ್ಷಣಾಧಿಕಾರಿಗಳು ಮತ್ತು ತಾಲೂಕಿನ ಎಲ್ಲಾ ಇಲಾಖೆಯ ಅಧಿಕಾರಿ ವರ್ಗ ಹಾಗೂ ಕಾರ್ಯಕ್ರಮಕ್ಕೆ ವಿಶೇಷವಾಗಿ ಸ್ಕೌಟ್ಸ್ ಮತ್ತು ಗೈಡ್ ತರಭೇತುದಾರರು, ಕಾಲ್ನಡಿಗೆ ಜಾಥ–ಾದಲ್ಲಿ ಚುನಾವಣೆಗೆ ಸಂಬಂಧಿಸಿದ ಘೋಷವಾಕ್ಯಗಳನ್ನು ಖುಗುತ್ತಾ ಸಾರ್ವಜನಿಕರಿಗೆ ತಿಳಿಯುವ ರೀತಿಯಲ್ಲಿ ಮನವರಿಕೆ ಮಾಡುವ ಮೂಲಕ ತಪ್ಪದ್ದೇ ಮತ್ತು ಕಡ್ಡಾಯವಾಗಿ ಮತದಾನ ಮಾಡುವಂತೆ ಪ್ರೇರಪಣೆ ಮಾಡಲಾಯಿತು.

# ಕಿತ್ತೂರು ಬಿಜೆಪಿ ಶಾಸಕ ಮಹಾಂತೇಶ ದೊಡ್ಡಗೌಡರನ್ನು ತರಾಟೆ ತೆಗೆದುಕೊಂಡ ಚಿಕ್ಕಬಾಗೇವಾಡಿ ಗ್ರಾಮಸ್ಥರು



**ಚನ್ನಮ್ಮನ ಕಿತ್ತೂರು:** ಬಿಜೆಪಿ ಶಾಸಕ ಮಹಾಂತೇಶ ದೊಡ್ಡಗೌಡರ ಅವರನ್ನು ಗ್ರಾಮಸ್ಥರು ತರಾಟೆ ತಗೆದುಕೊಂಡಿರುವ ಘಟನೆ ಚಿಕ್ಕಬಾಗೇವಾಡಿ ಗ್ರಾಮದಲ್ಲಿ ನಡೆದಿದೆ.

ಈ ಹಿನ್ನಲೆ ಬೆಳಗಾವಿ ಜಿಲ್ಲೆಯ ಚನ್ನಮ್ಮನ ಕಿತ್ತೂರು ವಿಧಾನಸಭಾ ಕ್ಷೇತ್ರದ ಚಿಕ್ಕಬಾಗೇವಾಡಿಯಲ್ಲಿ ಬಿಜೆಪಿ ಶಾಸಕ ಮಹಾಂತೇಶ ದೊಡ್ಡಗೌಡರ ನಿನ್ನೆ ರಾತ್ರಿ ಭರ್ಜರಿ ಮತಯಾಚನೆ ನಡೆಸಿದ್ದರು. ಈ ವೇಳೆ ಗ್ರಾಮಸ್ಥರು ತರಾಟೆ ತಗೆದುಕೊಂಡಿದ್ದಾರೆ. ರಸ್ತೆ, ಚರಂಡಿ, ಜಲಜೀವನ್ ಮಿಷನ್ ಯೋಜನೆ,ಬಿದ್ದ ಮನೆಗಳಿಗೆ ಪರಿಹಾರ ಸೇರಿದಂತೆ ವಿವಿಧ ಸಮಸ್ಯೆಗಳ ಕುರಿತು ಚರ್ಚೆ ಮಾಡುತ್ತಲೆ ಅತಿರೇಖಕ್ಕೆ ಹೋಗಿ ಚಿಕ್ಕಬಾಗೇವಾಡಿ ಗ್ರಾಮವನ್ನ ನಿರ್ಲಕ್ಷ ಮಾಡಿದ್ದೀರಿ ಎಂದು ಶಾಸಕ ಮಹಾಂತೇಶ ದೊಡ್ಡಗೌಡರ ಅವರನ್ನು ತರಾಟೆ ತೆಗೆದುಕೊಂಡ ಗ್ರಾಮಸ್ಥರು ಒಬ್ಬರು ಶಾಸಕರಾಗಿ ದಿವಂಗತ ಮಾಜಿ ಕೇಂದ್ರ ಸಚಿವ ಬಾಬಾಗೌಡ ಪಾಟೀಲ ಅವ–ರಿಗೆ ಗೌರವ ಸಲ್ಲಿಸಲಿಲ್ಲ ಎಂದು ಆಕ್ರೋಶ ಹೊರ ಹಾಕಿದರು.

ಇದೆ ಸಮಯದಲ್ಲಿ ಗ್ರಾಮದ ಯುವಕ ಶಂಕರಗೌಡ ಪಾಟೀಲ(ಪೈಲವಾನ) ನಮ್ಮ ತಮ್ಮನ ಜೀವನವನ್ನ ಹಾಳು ಮಾಡಿದ್ದೀರಿ ನೀವು ಎಂದು ಶಾಸಕರನ್ನು ಕ್ಲಾಸ್ ತಗೆದುಕೊಂಡ ಯುವಕ ನಿಜವಾದ ಬಿಜೆಪಿ ಕಾರ್ಯಕರ್ತರನ್ನ ಗುರುತಿಸುವ ಕೆಲಸ ಮಾಡಲಿಲ್ಲ. ನನ್ನ ವ್ಯಯಕ್ತಿಕ ಜೀವನಕ್ಕೆ ಕೈ ಹಾಕಿ ಜೀವನ ಹಾಳು ಮಾಡಿದ್ದೇರಿ ಎಂದು ಆಕ್ರೋಶದಿಂದಲೇ ತರಾಟೆ ತಗೆದುಕೊಂಡಿದ್ದಾನೆ.

ಚಿಕ್ಕ ಬಾಗೇವಾಡಿ ಗ್ರಾಮದೇವತೆ ಗುಡಿಯ ಮುಂಭಾಗದಲ್ಲಿ ಯುವಕರು. ಮಹಿಳೆಯರು, ಹಾಗೂ ಹಿರಿಯರು ಸೇರಿದಂತೆ ಗ್ರಾಮಸ್ಥರು ಶಾಸಕರನ್ನು ತರಾಟೆ ತೆಗೆದುಕೊಂಡು ಘೇರಾವ ಹಾಕಿದ್ದರಿಂದ ಮತಯಾಚನೆ ಅರ್ಧಕ್ಕೆ ಮೊಟಕುಗೊಳಿಸಿ ಸ್ಥಳದಿಂದ ಶಾಸಕ ಮಹಾಂತೇಶ ದೊಡ್ಡಗೌಡರ ಹಾಗೂ ಕಾರ್ಯಕರ್ತರು ಕಾಲ್ಕಿತ್ತಿದ್ದಾರೆ.

# ಕಾಂಗ್ರೆಸ್ ಸರ್ವರ ಸಮಾನವಾಗಿ ಕಾಣುವ ಪಕ್ಷ: ರಾಶಿಂಗೆ



**ಹುಕ್ಕೇರಿ:** ಜಾತ್ಯತೀತತೆ, ಸಾಮರಸ್ಯ, ಅಭಿವೃದ್ಧಿ ಪರ ಚಿಂತನೆ, ಉದಾತ್ತ ತತ್ವ ಸಿದ್ಧಾಂತವನ್ನು ಹೊಂದಿದ ಕಾಂಗ್ರೆಸ್ ಸರ್ವ ಜನಾಂಗದವರನ್ನು ಸಮಾನವಾಗಿ ಕಾಣುವ ಪಕ್ಷವಾಗಿದೆ. ಆದ್ದರಿಂದಲೇ ಕಾಂಗ್ರೆಸ್ ಸರ್ವ ಜನಾಂಗ ಸುಂದರ ತೋಟವಾಗಿದೆ ಎಂದು ಚಿಕ್ಕೋಡಿ ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿ ಅಧ್ಯಕ್ಷ ಮಲ್ಲಿಕಾರ್ಜುನ ರಾಶಿಂಗೆ ಹೇಳಿದರು.

ತಾಲೂಕಿನ ಬೆಳವಿಯಲ್ಲಿ ಏರ್ಪಡಿಸಿದ್ದ ಕಾಂಗ್ರೆಸ್ ಕಾರ್ಯಕರ್ತರ ಸಭೆಯಲ್ಲಿ ಮಾತನಾಡಿದ ಅವರು, ರಾಜ್ಯ ಮತ್ತು ದೇಶದ ಅಭಿವೃದ್ಧಿಯಲ್ಲಿ ಕಾಂಗ್ರೆಸ್ ಕೊಡುಗೆ ಅಪಾರವಾಗಿದೆ ಎಂದರು.

ಕಾಂಗ್ರೆಸ್ ಅಧಿಕಾರದಲ್ಲಿದ್ದಾಗ ಅನುಷ್ಠಾನ ಗೊಳಿಸಿದ ಯೋಜನೆಗಳೇ ಜನರ ಬಾಳಿಗೆ ಬೆಳಕಾಗಿವೆ. ಸಿದ್ಧರಾಮಯ್ಯ ಅವರು ಮುಖ್ಯಮಂತ್ರಿಯಾಗಿದ್ದಾಗ ಕರ್ನಾಟಕವನ್ನು ಸುವರ್ಣ ರಾಜ್ಯವನ್ನಾಗಿ ಮಾಡಿದ್ದರು. ಅನ್ನಭಾಗ್ಯ, ಕ್ಷೀರಭಾಗ್ಯ, ಕೃಷಿಭಾಗ್ಯ ಸೇರಿದಂತೆ ಅನೇಕ ಜನೋಪಕಾರಿ ಯೋಜನೆಗಳನ್ನು ಜಾರಿಗೆ ತರುವ ಮೂಲಕ ಜನಮನ ಗೆದ್ದಿದ್ದಾರೆ ಎಂದು ಅವರು ಹೇಳಿದರು.

ಅಭ್ಯರ್ಥಿ ಎ.ಬಿ.ಪಾಟೀಲ ಮಾತನಾಡಿ, ರಾಜ್ಯದ ಜನತೆ ಈ ಹಿಂದೆ ರಾಜ್ಯದಲ್ಲಿ ಆಡಳಿತ ನಡೆಸಿದ ಕಾಂಗ್ರೆಸ್ ಕಾರ್ಯವನ್ನು ನೋಡಿದ್ದಾರೆ. ಸದ್ಯ ರಾಜ್ಯದಲ್ಲಿನ ಬಿಜೆಪಿ ದುರಾಡಳಿತವನ್ನು ನೋಡಿದ್ದಾರೆ. ಬಿಜೆಪಿ ಜನವಿರೋಧಿ ನೀತಿಗೆ ಬೇಸತ್ತ ಜನರು ಕಾಂಗ್ರೆಸ್ ಬೆಂಬಲಿಸುವ ಮೂಲಕ ಬಿಜೆಪಿಗೆ ತಕ್ಕ ಪಾಠ ಕಲಿಸಲಿದ್ದಾರೆ ಎಂದರು.

ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ವಿಜಯ ರವದಿ, ಪುರಸಭೆ ಸದಸ್ಯೆ ರೇಖಾ ಚಿಕ್ಕೋಡಿ, ಮುಖಂಡರಾದ ರಾಜು ಸಿದ್ನಾಳ, ದಿಲೀಪ ಹೊಸಮನಿ, ಶಾನೂರ್ ತಹಶೀಲ್ದಾರ, ಮಂಜು ಪಡದಾರ, ಕುಮಾರ ಬೆಂಕಿ ಮತ್ತಿತರರು ಉಪಸ್ಥಿತ–ರಿದ್ದರು. ಇದಕ್ಕೂ ಮೊದಲು ಶಿರಹಟ್ಟಿ ಬಿ.ಕೆ., ಸಾರಾಪುರ, ಶೇಲಾಪುರ ಸೇರಿದಂತೆ ಕ್ಷೇತ್ರದ ವಿವಿಧ ಹಳ್ಳಿಗಳಲ್ಲಿ ಕಾಂಗ್ರೆಸ್ ಮುಖಂಡರು ಅಬ್ಬರದ ಪ್ರಚಾರ ನಡೆಸಿ ಮತಯಾಚಿಸಿದರು.

# ಮತದಾನ ಹೆಚ್ಚಳಕ್ಕೆ ಅಗತ್ಯ ಕ್ರಮವಹಿಸಿ: ಇಒ ನಿಂಗಪ್ಪ ಮಸಳಿ



**ಬೆಳಗಾವಿ:** ಉಗಾರಖುರ್ದ ಪಟ್ಟಣದ 194 ಮತ್ತು 195 ಮತಗಟ್ಟೆಯಲ್ಲಿ ಕಳೆದ ಚುನಾವಣೆಯಲ್ಲಿ ಶೇ.60 ರಷ್ಟು ಮತದಾನವಾಗಿದೆ. ಪ್ರತಿಯೊಬ್ಬ ಮತದಾರ ಮತ ಚಲಾವಣೆಯಿಂದ ಹೊರ ಗುಳಿಯಬಾರದು. ಕಾಗವಾಡ ಮತಕ್ಷೇತ್ರ ವ್ಯಾಪ್ತಿಯ ಅತೀ ಕಡಿಮೆ ಮತದಾನವಾದ ಈ ಎರಡು ಪ್ರದೇಶ ಸೇರಿ ಎಲ್ಲೆಡೆ ಈ ಬಾರಿ ಶೇ. 100 ರಷ್ಟು ಮತದಾನವಾಗಬೇಕು. ಆ ನಿಟ್ಟಿನಲ್ಲಿ ಸ್ವೀಪ್ ಸಿಬ್ಬಂದಿ ಮತದಾರರಿಗೆ ಅರಿವು ಮೂಡಿಸಬೇಕು ಎಂದು ತಾಲೂಕು ಸ್ವೀಪ್ ಸಮಿತಿ ಅಧ್ಯಕ್ಷ ಹಾಗೂ ಕಾಗವಾಡ ತಾಪಂ ಇಒ ನಿಂಗಪ್ಪ ಮಸಳಿ ಹೇಳಿದರು.

ಕಾಗವಾಡ ತಾಲೂಕಿನ ಉಗಾರಖುರ್ದ್ ಪಟ್ಟಣದ ಶಿರಗಾಂವಕರ್ ಕಾಲೇಜು ಆವರಣದಲ್ಲಿ ಮಂಗಳವಾರ (ಏ.11 2023) ತಾಲೂಕು ಸ್ವೀಪ್ ಸಮಿತಿ ವತಿಯಿಂದ ಹಮ್ಮಿಕೊಳ್ಳಲಾದ ಮತದಾನ ಜಾಗೃತಿ ಜಾಥಾಗೆ ತಾಲೂಕು ಸ್ವೀಪ್ ಸಮಿತಿ ಅಧ್ಯಕ್ಷ ಹಾಗೂ ಕಾಗವಾಡ ತಾಪಂ ಇಒ ನಿಂಗಪ್ಪ ಮಸಳಿ ಅವರು ಚಾಲನೆ ನೀಡಿ ಮಾತನಾಡಿದರು.

ನನ್ನ ಮತ ಮಾರಾಟಕ್ಕಿಲ್ಲ, ನನ್ನ ಮತ ನನ್ನ ಹಕ್ಕು, 18 ವರ್ಷ ಮೇಲ್ಪಟ್ಟವರು ಕಡ್ಡಾಯವಾಗಿ ಮತದಾನ ಮಾಡಿ ಎಂದು ಆಶಾ ಕಾರ್ಯಕರ್ತರು ಘೋಷಣೆ ಕೂಗಿದರು. ಕಾಲೇಜು ಆವರಣದಲ್ಲಿ ಆರಂಭವಾದ ಜಾಥಾ, ಪ್ರಮುಖ ಬೀದಿ, ಕಾಲೋನಿಗಳಲ್ಲಿ ಸಂಚರಿಸಿ ರಾಣಿ ಚನ್ನಮ್ಮವೃತ್ತದಲ್ಲಿ ಮುಕ್ತಾಯಗೊಂಡಿತು.

ಉಗಾರಖುರ್ದ್ ಪುರಸಭೆ ಮುಖ್ಯಾಧಿಕಾರಿ ಸುನೀಲ್ ಬಬಲಾದಿ, ಸಹಾಯಕ ನಿರ್ದೇಶಕ (ಗ್ರಾಉ) ಗೋಪಾಲ ಮಾಳಿ,ಅಮೀತ ಇಂಗಳಗಾಂವಿ, ಯುವರಾಜ ಗಾಡಿವಡ್ಡರ್, ವಿವೇಕ ಕಾಂಬಳೆ, ಪ್ರತಾಪ ರೋಹಿದಾಸ್ಮುರುಗೇಶ, ಆದಿನಾಥ ಚೌಗಲಾ, ಉಗಾರಬಿಕೆ ಗ್ರಾಮ ಪಂಚಾಯತ ಸಿಬ್ಬಂದಿ, ಆಶಾ, ಅಂಗನವಾಡಿ ಕಾರ್ಯಕರ್ತರು, ಹಾಗೂ ಪೌರ ಕಾರ್ಮಿಕರು ಭಾಗಿಯಾಗಿದ್ದರು.

# ಎಬಿ ದುರಾಡಳಿತಕ್ಕೆ ಸಂಘ ಸಂಸ್ಥೆ ದಿವಾಳಿ: ಪವನ್



**ಹುಕ್ಕೇರಿ:** ಕ್ಷೇತ್ರ ವ್ಯಾಪ್ತಿಯ ಹುಲ್ಲೋಳಿಹಟ್ಟಿ, ಹುಲ್ಲೋಳಿ, ಸಾರಾಪುರ, ಕಡಹಟ್ಟಿ, ಶಿರಹಟ್ಟಿ ಬಿ.ಕೆ., ಶಿರಹಟ್ಟಿ ಕೆ.ಡಿ., ಹಾಗೂ ಬೆಳವಿ ಗ್ರಾಮಗಳಲ್ಲಿ ಮಂಗಳವಾರ ಬಿಜೆಪಿ ಸಂಭಾವ್ಯ ಅಭ್ಯರ್ಥಿಯೂ ಆದ ಹಿರಣ್ಯಕೇಶಿ ಸಹಕಾರಿ ಸಕ್ಕರೆ ಕಾರ್ಖಾನೆ ಅಧ್ಯಕ್ಷ ನಿಖಿಲ್ ಕತ್ತಿ ಅವರು ಮಿಂಚಿನ ಸಂಚಾರ ನಡೆಸಿ ಬಿಜೆಪಿ ಪರ ಮತ ಯಾಚಿಸಿದರು.

ಈ ವೇಳೆ ನಿಖಿಲ್ ಕತ್ತಿ ಮಾತನಾಡಿ, ಕ್ಷೇತ್ರದಲ್ಲಿ ಸಾಕಷ್ಟು ಅಭಿವೃದ್ಧಿ ಕೆಲಸಗಳಾಗಿದ್ದು ಹಿಡಕಲ್ ಡ್ಯಾಮ್ ನಲ್ಲಿ ಮೈಸೂರು ಬೃಂದಾವನ ಮಾದ–ರಿಯಲ್ಲಿ ಉದ್ಯಾನವನ ನಿರ್ಮಾಣ ಕಾರ್ಯ ಪ್ರಗತಿಯಲ್ಲಿದೆ. ಅಡವಿ ಸಿದ್ದೇಶ್ವರ ಹಾಗೂ ಶಂಕರಲಿಂಗ ಏತ ನೀರಾವರಿ ಯೋಜನೆಗೆ ಚಾಲನೆ ನೀಡಲಾಗಿದೆ. ಕಣಗಲಾದಲ್ಲಿ ಕೈಗಾರಿಕೆ ಸ್ಥಾಪನೆ ಮಾಡಲಾಗುತ್ತಿದೆ.

ಹುಕ್ಕೇರಿಯಲ್ಲಿ ಪ್ರಾದೇಶಿಕ ಸುವರ್ಣ ಕರ್ನಾಟಕ ಭವನ ನಿರ್ಮಾಣ, ಬೆಳವಿಯಲ್ಲಿ ಜಿಲ್ಲಾ ಮಟ್ಟದ ಗೋ ಶಾಲೆ ನಿರ್ಮಿಸಲಾಗಿದೆ. ಹೀಗೆ ಕ್ಷೇತ್ರದ ಸರ್ವಾಂಗೀಣ ಪ್ರಗತಿಗೆ ಹಲವು ಯೋಜನೆಗಳನ್ನು ಜಾ–ರಿಗೊಳಿಸಲಾಗಿದೆ. ಹಾಗಾಗಿ ಈ ಬಾರಿ ತಮಗೆ ಚುನಾವಣೆಯಲ್ಲಿ ಆಶೀರ್ವದಿಸಬೇಕೆಂದು ಮನವಿ ಮಾಡಿದರು.

ಜಿಪಂ ಮಾಜಿ ಸದಸ್ಯ ಪವನ್ ಕತ್ತಿ ಮಾತನಾಡಿ, ವಿರೋಧ ಪಕ್ಷದ ಅಭ್ಯರ್ಥಿ ಎ.ಬಿ.ಪಾಟೀಲರು ಪ್ರತಿ ಬಾರಿ ಹೇಳಿದನ್ನೇ ಹೇಳುವ ಕ್ಯಾಸೆಟ್, ಸಿಡಿಯಂತಿದ್ದಾರೆ. ಪಂತಬಾಳೆಕುಂದ್ರಿ ನೂಲಿನ ಗಿರಣಿ, ಬೆಳಗಾವಿ ಗಾಂಧಿ ಭವನ, ಸಂಕೇಶ್ವರ ಎಸ್ ಡಿ ವಿ ಎಸ್ ಸಂಸ್ಥೆ ಹೀಗೆ ಹಲವು ಸಂಸ್ಥೆಗಳನ್ನು ನುಂಗಿ ಹಾಕಿದ್ದು ಅವರ ದುರಾಡಳಿತದಿಂದ ದಿವಾಳಿಯಾಗಿವೆ. ಎಬಿ ಅವರ ಸುಳ್ಳು ಅಪಪ್ರಚಾರಕ್ಕೆ ಮತದಾರರು ಕಿವಿಗೊಡಬಾರದು ಎಂದರು.

ಮುಖಂಡರಾದ ಬಸವರಾಜ ಮಟಗಾರ, ಅಶೋಕ ಪಟ್ಟಣಶೆಟ್ಟಿ, ಸತ್ಯಪ್ಪ ನಾಯಿಕ, ರಾಚಯ್ಯ ಹಿರೇಮಠ, ಕೆ.ಜಿ.ಪಾಟೀಲ, ಎಸ್.ಎಂ. ಪಾಟೀಲ, ಸತ್ಯಪ್ಪ ಹಾಲಟ್ಟಿ, ಡಿ.ಕೆ.ಅವರಗೋಳ, ರಾಯಪ್ಪ ಡೂಗ, ರವಿ ಹಿಡಕಲ್, ಸುರೇಶ ದೊಡ್ಡಲಿಂಗನವರ್, ರಮೇಶ ಕುಲಕರ್ಣಿ, ಅಪ್ಪಾಸಾಹೇಬ ಸಾರಾಪೂರೆ, ಬಾಳಾಸಾಹೇಬ ನಾಯಿಕ, ಅಣ್ಣಪ್ಪ ಬ್ಯಾಳಿ, ರಾಮಣ್ಣ ಗೋಟೂರಿ ಮತ್ತಿತರರು ಉಪಸ್ಥಿತರಿದ್ದರು.

# ಎಕ್ಸಾನ್ ಮೊಬಿಲ್ ಭಾರತದಲ್ಲಿ ಲೂಬ್ರಿಕೆಂಟ್ ತಯಾರಿಕಾ ಘಟಕ ನಿರ್ಮಾಣ



ಬೆಳಗಾವಿ: ಮಹಾರಾಷ್ಟ್ರ ಇಂ–ಡಸ್ಟ್ರೀಯಲ್ ಡೆವಲಪಮೆಂಟ್ ಕಾರ್ಪೋರೇಷನ್ ನ ಇಸಾಂಬೆ ಇಂಡಸ್ಟ್ರಿಯಲ್ ವಲಯವಾದ ರಾಯಗಡದಲ್ಲಿ ಲೂಬ್ರಿಕೆಂಟ್ ಉತ್ಪಾದನಾ ಘಟಕವನ್ನು ನಿರ್ಮಿಸಲು ಎಕ್ಸಾನ್ಮೊಬಿಲ್ ಸುಮಾರು ರೂ 900 ಕೋಟಿ (ಯುಎಸ್ಡಾಲರ್ $110 ಮಿಲಿಯನ್) ಹೂಡಿಕೆ ಮಾಡುತ್ತಿದೆ.

ಕಂಪನಿಯು ಉಪಮುಖ್ಯಮಂತ್ರಿ ದೇವೇಂದ್ರ ಫಡ್ನವಿಸ್, ಕೈಗಾರಿಕಾ ಸಚಿವ ಉದಯ್ ಸಾಮಂತ್ ಮತ್ತು ಮಹಾರಾಷ್ಟ್ರದ ಹಿರಿಯ ಅಧಿಕಾರಿಗಳ ಸಮ್ಮುಖದಲ್ಲಿ ಈ ಘೋಷಣೆ ಮಾಡಿದೆ.


ಒಮ್ಮೆ ಕಾರ್ಯಾರಂಭಿಸಿದ ನಂತರ, ತಯಾರಿಕೆ, ಉಕ್ಕು, ವಿದ್ಯುತ್, ಗಣಿಗಾ–ರಿಕೆ ಮತ್ತು ನಿರ್ಮಾಣದಂತಹ ಕೈಗಾರಿಕಾವಲಯಗಳಿಂದ ಹಾಗೂ ಪ್ರಯಾಣಿಕರ ಹಾಗೂ ವಾಣಿಜ್ಯ ವಾಹನವಿಭಾಗಗಳಿಂದ ಹೆಚ್ಚುತ್ತಿರುವವ ದೇಶೀಯ ಬೇಡಿಕೆಯನ್ನು ಪೂರೈಸಲು ಘಟಕ ವಾರ್ಷಿಕ 159,000 ಕಿಲೋ ಲೀಟರ್ ಗಳಷ್ಟು ಸಿದ್ಧಪಡಿಸಿದ ಲೂಬ್ರಿಕೆಂಟಗಳನ್ನು ಉತ್ಪಾದಿಸುವ ಸಾಮರ್ಥ್ಯವನ್ನು ಹೊಂದಿರುತ್ತದೆ. ಇದು 2025 ರ ಅಂತ್ಯದ ವೇಳೆಗೆ ಕಾರ್ಯ ಆರಂಭಿಸುವ ನಿರೀಕ್ಷೆಯಿದೆ.

ಮೊದಲಗ್ರೀನ್ ಫೀಲ್ಡ್ ಹೂಡಿಕೆಯೊಂದಿಗೆ ಭಾರತದೊಂದಿಗೆವ ನಮ್ಮ ದೀರ್ಘಕಾಲದ ಬದ್ಧತೆಯನ್ನು ಹೆಚ್ಚಿಸಲು ಹೆಮ್ಮೆಪಡುತ್ತೇವೆ. ಮಹಾರಾಷ್ಟ್ರವು ಭಾರತದ ಅತಿ–ದೊಡ್ಡ ಉತ್ಪಾದನಾ ಕೇಂದ್ರವಾಗಿದ್ದು, ಲೂಬ್ರಿಕೆಂಟ್ ಘಟಕಕ್ಕೆ ನೈಸರ್ಗಿಕ ಆಯ್ಕೆಯಾಗಿದೆ ಎಂದು ಭಾರತದಲ್ಲಿ ಎಕ್ಸಾನ್ಮೊಬಿಲ್ ಅಂಗ ಸಂಸ್ಥೆಗಳ ದೇಶದ ಪ್ರಮುಖ ವ್ಯವಸ್ಥಾಪಕ ಮಾಂಟೆ ಡಾಬ್ಸನ್ ಹೇಳಿದ್ದಾರೆ.

ಮೇಕ್ ಇನ್ ಇಂಡಿಯಾ" ಅಭಿಯಾನಕ್ಕೆ ಇದು ನಿರ್ಮಾಣ ಹಂತದಲ್ಲಿ ಸುಮಾರು 1,200 ಉದ್ಯೋಗಗಳನ್ನು ಸೃಷ್ಟಿಸುವ ನಿರೀಕ್ಷೆಯಿದೆ.

ನಮ್ಮ ಭಾರತೀಯ ಗ್ರಾಹಕರು ಮತ್ತು ಗ್ರಾಹಕರ ಅಗತ್ಯಗಳನ್ನು ಹೆಚ್ಚು ಸುಲಭವಾಗಿ ಪೂರೈಸಲು ಅವಕಾಶ ನೀಡುತ್ತದೆ. ಎಂದು ಎಕ್ಸಾನ್ಮೊಬಿಲ್ ಲೂಬಿಕ್ರೆಂಟ್ ಲಿಮಿಟೆಡ್ ನ ಸಿಇಒ ವಿಪಿನ್ ರಾಣಾ ಹೇಳಿದರು.

# ಮೊಬೈಲ್ ಕೊಡ್ಲಿಲ್ಲ ಅಂತಾ ಬಾಲಕಿ ಆತ್ಮಹತ್ಯೆ



ಮುಂಬೈ: ಮೊಬೈಲ್ ಬಳಕೆಗೆ ಅವಕಾಶ ನೀಡದಿದ್ದಕ್ಕೆ ಮನನೊಂದ 15 ವರ್ಷದ ಬಾಲಕಿಂ–ಬೊಬ್ಬಳು ಏಳು ಅಂತಸ್ತಿನ ಕಟ್ಟಡದಿಂದ ಹಾರಿ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಮುಂಬೈನ ಮಲಾಡ್‌ನ ಉಪನಗರದಲ್ಲಿ ಪೊಲೀಸರು ತಿಳಿಸಿದ್ದಾರೆ.

ಪಶ್ಚಿಮ ಉಪನಗರದ ಮಾಲ್ವಾನಿ ಪ್ರದೇಶದಲ್ಲಿ ಶುಕ್ರವಾರ ಸಂಜೆ ಈ ಘಟನೆ ನಡೆದಿದೆ. ಆತ್ಮಹತ್ಯೆಗೆ ನಿಖರವಾದ ಕಾರಣ ಇನ್ನೂ ತಿಳಿದುಬಂದಿಲ್ಲವಾದರೂ, ಆಕೆಯ ಕುಟುಂಬಸ್ಥರು ಆಕೆಯ ಮೊಬೈಲ್ ಫೋನ್ ಅನ್ನು ಕಿತ್ತುಕೊಂಡಿದ್ದರಿಂದ ಬಾಲಕಿ ಅಸಮಾಧಾನಗೊಂಡಿದ್ದಾಳೆ ಎಂದು ಪೊಲೀಸರು ಶಂಕಿಸಿದ್ದಾರೆ. ತನಿಖೆ ಮುಂದುವರೆದಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

# ಚುನಾವಣೆ ಮುಗಿದ ಮೇಲೆ ಕಾಂಗ್ರೆಸ್ ಅಭ್ಯರ್ಥಿ ಪಲಾಯನ: ಮಟಗಾರ



ಹುಕ್ಕೇರಿ: ವಿರೋಧಿ ಕಾಂಗ್ರೆಸ್ ಪಕ್ಷ ಮತ್ತು ಅಭ್ಯರ್ಥಿರದ್ದು ಕೇವಲ ಮಾತುಗಳೇ ಕೆಲಸವಾಗಿವೆ. ಚುನಾವಣೆಯಲ್ಲಿ ಮಾತ್ರ ಕ್ಷೇತ್ರದಲ್ಲಿ ಕಾಣಿಸಿಕೊಳ್ಳುವ ಅಭ್ಯರ್ಥಿ ಚುನಾವಣೆ ಮುಗಿದ ಬಳಿಕ ಪಲಾಯನ ಮಾಡುವ ಪರಂಪರೆ ರೂಢಿಸಿಕೊಂಡಿದ್ದಾರೆ ಎಂದು ಬಿಜೆಪಿ ಹಿರಿಯ ಮುಖಂಡ ಬಸವರಾಜ ಮಟಗಾರ ಲೇವಡಿ ಮಾಡಿದರು.

ತಾಲೂಕಿನ ಘೋಡಗೇರಿ ಮತ್ತು ಬೆಲ್ಲದ ಬಾಗೇವಾಡಿ ಜಿಲ್ಲಾ ಪಂಚಾಯಿತಿ ವ್ಯಾಪ್ತಿಯ ವಿವಿಧ ಗ್ರಾಮಗಳಲ್ಲಿ ಬಿಜೆಪಿ ಪರ ಪ್ರಚಾರ ಸಭೆಯಲ್ಲಿ ಮಾತನಾಡಿದ ಅವರು, ಕಾರ್ಯಕರ್ತರ ಕಷ್ಟಗಳಿಗೆ ಸ್ಪಂದಿಸುವಲ್ಲಿ ಅಭ್ಯರ್ಥಿ ವಿಫಲವಾಗಿದ್ದಾರೆ. ಚುನಾವಣೆಗೆ ಮಾತ್ರ ಸೀಮಿತವಾಗಿರುವ ಅವರಿಂದ ಏನನ್ನೂ ನಿರೀಕ್ಷಿಸಲಾಗದು ಎಂದರು.

ಕೋವಿಡ್ ಹಾಗೂ ನೆರೆಹಾವಳಿ ಸಂದರ್ಭದಲ್ಲಿ ಕ್ಷೇತ್ರದಿಂದ ನಾಪತ್ತೆಯಾಗಿದ್ದರು. ಈ ವೇಳೆ ಕತ್ತಿ ಸಹೋದರರು ತಮ್ಮ ಒಡೆತನದ ರಾಜೇಶ್ವರಿ ವಿಶ್ವನಾಥ ಕತ್ತಿ ಸ್ಮಾರಕ ಪ್ರತಿಷ್ಠಾನದಿಂದ ಸಾವಿರಾರು ಬಡಜನರಿಗೆ ನೆರವು ನೀಡಿ ಆತ್ಮಸ್ಥೈರ್ಯ ತುಂಬಿದ್ದಾರೆ. ನಿರಂತರ ಜನಸೇವೆಯಲ್ಲಿ ತೊಡಗಿರುವ ಕತ್ತಿ ಕುಟುಂಬ ಸದಸ್ಯರ ಗೆಲುವು ನಿಶ್ಚಿತ ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದರು.

ಅರವತ್ತು ವರ್ಷ ಆಡಳಿತ ನಡೆಸಿದ ಕಾಂಗ್ರೆಸ್ ಜನಮನ್ನಣೆ ಕಳೆದುಕೊಂಡು ಗ್ಯಾರಂಟಿ ಕಾರ್ಡ್ ಕೊಡ್ತೀವಿ ಎಂದು ಜನರಿಗೆ ಮತ್ತೆ ಮೋಸ ಮಾಡಲು ಹೊರಟಿದೆ. ಸುಳ್ಳು ಭರವಸೆ, ಜನರನ್ನು ಮೋಸ ಮಾಡಲು ಗ್ಯಾರಂಟಿ ಕಾರ್ಡ್ ಕೊಡುತ್ತಿದ್ದಾರೆ. ಹಿಂದೆ ರಾಜಸ್ತಾನದಲ್ಲೂ ಗ್ಯಾರಂಟಿ ಕಾರ್ಡ್ ಕೊಟ್ಟಿದ್ದ ಕಾಂಗ್ರೆಸ್ ಗೆದ್ದ ಮೇಲೆ ತಾನು ನೀಡಿದ ಭರವಸೆಗಳನ್ನು ಈಡೇರಿಸಿಲ್ಲ. ವಾರಂ–ಟಿಯೇ ಇಲ್ಲದ ಗ್ಯಾರಂಟಿ ಪತ್ರವನ್ನು ಜನರಿಗೆ ವಿತರಿಸುತ್ತಿದೆ ಎಂದು ಅವರು ಕುಟುಕಿದರು.

ಕ್ಷೇತ್ರದಾದ್ಯಂತ ಮತದಾರರ ಜನಾಭಿಪ್ರಾಯ ಬಿಜೆಪಿ ಪರವಾಗಿದ್ದು ಜನರ ನಂಬಿಕೆ, ವಿಶ್ವಾಸ ಉಳಿಸಿಕೊಂಡಿದೆ. ಕ್ಷೇತ್ರ ಪ್ರತಿನಿಧಿಸುತ್ತಿದ್ದ ದಿ.ಉಮೇಶ ಕತ್ತಿ ಅವರು ಮಾಡಿರುವ ಸಾಧನೆಗಳೇ ಬಿಜೆಪಿ ಅಭ್ಯರ್ಥಿಗೆ ಗೆಲುವನ್ನು ತಂದು ಕೊಡಲಿದೆ. ಅಭಿವೃದ್ಧಿ ಕಾರ್ಯಗಳೇ ಶ್ರೀ ರಕ್ಷೆಯಾಗಿದೆ. ಈ ಬಾರಿ ಚುನಾವಣೆಯಲ್ಲಿ ಹೆಚ್ಚು ದಾಖಲೆಯ ಮತಗಳ ಅಂತರದಿಂದ ಬಿಜೆಪಿ ಜಯ ಸಾಧಿಸಲಿದೆ ಎಂದು ಅವರು ಹೇಳಿದರು.

ಬಿಜೆಪಿ ಸಂಭಾವ್ಯ ಅಭ್ಯರ್ಥಿಯೂ ಆದ ಹಿರಣ್ಯಕೇಶಿ ಸಕ್ಕರೆ ಕಾರ್ಖಾನೆ ಅಧ್ಯಕ್ಷ ನಿಖಿಲ್ ಕತ್ತಿ, ನಿರ್ದೇಶಕರಾದ ಅಶೋಕ ಪಟ್ಟಣಶೆಟ್ಟಿ, ಅಜ್ಜಪ್ಪ ಕಲ್ಲಟ್ಟಿ, ಬಿಜೆಪಿ ರೈತ ಮೋರ್ಚಾ ಜಿಲ್ಲಾ ಅಧ್ಯಕ್ಷ ಸತ್ಯಪ್ಪ ನಾಯಿಕ, ಬಿಜೆಪಿ ಬ್ಲಾಕ್ ಅಧ್ಯಕ್ಷ ರಾಚಯ್ಯ ಹಿರೇಮಠ, ಕೆಎಂಎಫ್ ನಿರ್ದೇಶಕ ರಾಯಪ್ಪಾ ಢೂಗ, ವಿದ್ಯುತ್ ಸಂಘದ ನಿರ್ದೇಶಕ ರವಿ ಹಿಡಕಲ್, ಮುಖಂಡರಾದ ದಯಾನಂದ ಅಮ್ಮಣಗಿ, ಶಿವಲಿಂಗ ನಾಯಿಕ, ಶಿವಬಾಳಪ್ಪ ತೇಲಿ, ಅಲಗೌಡ ಪಾಟೀಲ ಮತ್ತಿತರರು ಉಪಸ್ಥಿತರಿದ್ದರು.

BELAGAVI VARADI KANNADA DAILY MORNING : Editor, Printer, Publisher & Owned By : **Satish Basavani Gudagenatti,** Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089